ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 133

4–11–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 133

## ಹೂಡಿಕೆ ಹೆಸರಿನಲ್ಲಿ 42.51 ಲಕ್ಷ, ಷೇರು ಹೆಸರಿನಲ್ಲಿ 11.93 ಲಕ್ಷ ವಂಚನೆ

**ದಾವಣಗೆರೆ.ನ.3:** ಟ್ರೇಡಿಂಗ್ ಕಂಪನಿಗಳ ಹೆಸರಿನಲ್ಲಿ ಆನ್‌ಲೈನ್ ಮೂಲಕ ಹಣ ಹೂಡಿಕೆ ಮಾಡಿದ ವ್ಯಕ್ತಿಯೋರ್ವ 42.51 ಲಕ್ಷ ಕಳೆದುಕೊಂಡರೆ, ಶಿಕ್ಷಕನೊಬ್ಬ ಹೊಸ ಕಂಪನಿಯಲ್ಲಿ ಷೇರು ಹೂಡಿಕೆ ಮಾಡಿದರೆ ಲಾಭಗಳಿಸಬಹುದೆಂದು 11.93 ಲಕ್ಷ ರೂಪಾಯಿ ಕಳೆದುಕೊಂಡು ಘಟನೆ ದಾವಣಗೆರೆ ಜಿಲ್ಲೆಯಲ್ಲಿ ನಡೆದಿದೆ.

ದಾವಣಗೆರೆ ನಗರದ ಕೆ.ಬಿ.ಬಡಾವಣೆಯ ನಿವಾಸಿಯೊಬ್ಬರು ಮೊಬೈಲ್ ರಿಪೇರಿ ಮಾಡಿಕೊಂಡು ಬದುಕು ಕಟ್ಟಿ–ಕೊಂಡಿದ್ದು, ಇದೀಗ ಲಾಭದ ಆಸೆಗೆ ಬಿದ್ದು ಆನ್‌ಲೈನ್ ಮೂಲಕ 42.51 ಲಕ್ಷ ಕಳೆದುಕೊಂಡಿದ್ದಾರೆ. ಫೇಸ್‌ಬುಕ್‌ನಲ್ಲಿ ಕಂಡ ಲಿಂಕ್ ಒತ್ತಿದ್ದ ಆತನ ಮೊಬೈಲ್ ನಂಬರ್ ಅನ್ನು ವಾಟ್ಸಪ್ ಗ್ರೂಪಿಗೆ ಸೇರಿದ ಖದೀಮರು, ಬಳಿಕ ಟ್ರೇ–ಡಿಂಗ್ ಕಂಪನಿಯಲ್ಲಿ ಬಂಡವಾಳ ಹೂಡಿದರೆ ಹೆಚ್ಚಿನ ಲಾಭಾಂಶಗಳಿಸಬಹುದೆಂದು ಹೇಳಿದ್ದಾರೆ.

ಖದೀಮರ ಮಾತು ನಂಬಿದ ಆತ, ತಾನು ದುಡಿದ ಹಣದ ಜೊತೆಗೆ ಪತ್ನಿ, ತಂಗಿ, ತಾಯಿಯ ಬಂಗಾರದ ಆಭರಣಗಳನ್ನು ಅಡವಿಟ್ಟು ಸಾಲ ಪಡೆದು ಆನ್‌ಲೈನ್ ಮೂಲಕ ವಂಚಕರ ಖಾತೆಗೆ ಹಣ ಜಮೆ ಮಾಡಿದ್ದಾನೆ, ಬಳಿಕ ತಾನು ಹೂಡಿಕೆ ಮಾಡಿದ ಹಣ ವಾಪಸ್ಸು ಪಡೆಯಲು ಸಾಧ್ಯವಾಗದೇ ಇದ್ದಾಗ ತಾನು ಮೋಸ ಹೋಗಿದ್ದು ಗೊತ್ತಾಗಿದೆ.

ಅದೇ ರೀತಿ ಹೊನ್ನಾಳಿಯ ಶಿಕ್ಷಕರೊಬ್ಬರಿಗೆ ಹೊಸ ಕಂಪನಿಗಳಲ್ಲಿ ಷೇರು ಹೂಡಿಕೆ ಮಾಡಿದರೆ ತಿಂಗಳಿಗೆ 300 ರಷ್ಟು ಲಾಭಗಳಿಸಬಹುದು ಎಂದು ನಂಬಿಸಿ ಶಿಕ್ಷಕನಿಗೆ 11.93 ಲಕ್ಷ ರೂಪಾಯಿ ವಂಚನೆ ಮಾಡಿದ್ದಾರೆ. ವಾಟ್ಸ್‌ಆಪ್ ಗ್ರೂಪಿಗೆ ಶಿಕ್ಷಕನ ಮೊಬೈಲ್ ಸಂಖ್ಯೆ ಸೇರಿಸಿದ ಕಳ್ಳರು ಷೇರು ಹೂಡಿಕೆಗೆ ಉತ್ತೇಜಿಸಿದ್ದು ಇದನ್ನು ನಂಬಿದ ಶಿಕ್ಷಕ, ಖದೀಮರು ನೀಡಿದ ಬ್ಯಾಂಕ್ ಖಾತೆಗೆ ಆನ್‌ಲೈನ್ ಮೂಲಕ ಹಂತ ಹಂತವಾಗಿ ಹಣ ಜಮಾ ಮಾಡಿದ್ದಾನೆ. ಕೊನೆಗೆ ಹಣ ಬಿಡಿಸಿಕೊಳ್ಳು ಆಗದೇ ಇದ್ದಾಗ ಮೋಸ ಹೋಗಿದ್ದು ಗೊತ್ತಾಗಿದೆ. ದಾವಣಗೆರೆ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎರಡು ಪ್ರಕರಣಗಳು ದಾಖಲಾಗಿದ್ದು ಪೊಲೀಸರು ತನಿಖೆ ಆರಂಭಿಸಿದ್ದಾರೆ.

## ಮಾಂಗಲ್ಯ ಸರ ದೋಚಿದ ಕಳ್ಳರು

**ದಾವಣಗೆರೆ.ನ,3:** ಗುಟ್ಕಾ ಖರೀದಿ ಮಾಡಲು ಬಂದವರು ಹಾಡು ಹಗಲೇ ಮಹಿಳೆಯ ಕೊರಳಿನಲ್ಲಿದ್ದ ಮಾಂಗಲ್ಯ ಸರ ದೋಚಿಕೊಂಡು ಪರಾರಿಯಾಗಿರುವ ಘಟನೆ ದಾವಣಗೆರೆ ಜಿಲ್ಲೆಯ ಜಗಳೂರು ತಾಲೂಕಿನ ಕಮಂಡಲಗುಂದಿ ಗ್ರಾಮದಲ್ಲಿ ನಡೆದಿದೆ.

ಬೈಕ್‌ನಲ್ಲಿ ಬಂದ ಅಪರಿಚತರಿಬ್ಬರು ಗೀತಮ್ಮ ಅವರಿದ್ದ ಅಂಗಡಿಗೆ ಗ್ರಾಹಕರ ಸೋಗಿನಲ್ಲಿ ಬಂದು ಗೀತಮ್ಮನ ಕೊರಳಿನಲ್ಲಿದ್ದ ನಾಲ್ಕು ಲಕ್ಷ ಮೌಲ್ಯದ 40 ಗ್ರಾಂ ತೂಕದ ಬಂಗಾರದ ಸರವನ್ನು ಕಿತ್ತುಕೊಂಡು ಬೈಕ್‌ನಲ್ಲಿ ಪರಾ–ರಿಯಾಗಿದ್ದಾರೆ.

## ರಾಜ್ಯ ಚಲನಚಿತ್ರ ಪ್ರಶಸ್ತಿ ಪ್ರದಾನ:

# ಈಗಿನ ಸಿನಿಮಾಗಳಲ್ಲಿ ಸಾಮಾಜಿಕ ಕಾಳಜಿ, ಗುಣಮಟ್ಟ ಕ್ಷೀಣ–ಸಿಎಂ ಸಿದ್ದರಾಮಯ್ಯ

**ಮೈಸೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಮೈಸೂರಿನ ಘಟಿಕೋತ್ಸವ ಭವನದಲ್ಲಿ ಸೋಮವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 2018 ಮತ್ತು 19ನೇ ಸಾಲಿನ ರಾಜ್ಯ ಚಲನಚಿತ್ರ ಪ್ರಶಸ್ತಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರದಾನ ಮಾಡಿ, ಪ್ರಶಸ್ತಿ ವಿಜೇತರಿಗೆ ಅಭಿನಂದಿಸಿದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ, ಸಿನಿಮಾ ತಾರೆಯರು ಪರದೆ ಮೇಲೆ ಕಾಣುವಷ್ಟೇ ಮೌಲ್ಯಯುತವಾಗಿ ನಿಜ ಜೀವನದಲ್ಲೂ ನಡೆದುಕೊಳ್ಳಬೇಕು. ಡಾ.ರಾಜ್ ಕುಮಾರ್ ಅವರು ಪರದೆ ಮೇಲೆ ಮಾತ್ರವಲ್ಲ, ನಿಜ ಜೀವನದಲ್ಲೂ ಅದೇ ಮೌಲ್ಯಗಳನ್ನು ಪಾಲಿಸಿದರು. ಈ ಕಾರಣಕ್ಕೇ ಜನಮಾನಸದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ.ಸಿನಿಮಾ ಅತ್ಯಂತ ಪ್ರಭಾವೀ ಮಾಧ್ಯಮ. ಸಮಾಜದ ಮೇಲೆ ಆಳವಾದ ಪರಿಣಾಮ ಬೀರುತ್ತದೆ. ಆದ್ದರಿಂದ ಸಿನಿಮಾ ತಾರೆಯರು ಪರದೆ ಮೇಲೆ ಮಾತ್ರವಲ್ಲ, ನಿಜ ಜೀವನದಲ್ಲೂ ಅಷ್ಟೇ ಮೌಲ್ಯಯುತವಾಗಿ ಬದುಕಬೇಕು. ಸಮಾಜವನ್ನು ತಿದ್ದುವ ಸಿನಿಮಾಗಳನ್ನು ಹೆಚ್ಚೆಚ್ಚು ತಯಾರಿಸಿದರೆ ಅದರಿಂದ ಬದಲಾವಣೆ ಸಾಧ್ಯ ಎಂದರು.



**ಶೀಘ್ರದಲ್ಲೇ ಚಿತ್ರನಗರಿ ನಿರ್ಮಾಣ ಕಾರ್ಯ ಆರಂಭ:** ನಮ್ಮ ಸರ್ಕಾರ ಕನ್ನಡ ಸಿನಿಮೋದ್ಯಮದ ಆರೋಗ್ಯಕಾರಿ ಪ್ರಗತಿ ಮತ್ತು ಬೆಳವಣಿಗೆಗೆ ಸದಾ ಬೆಂಬಲ ನೀಡುತ್ತದೆ. ಕೇವಲ ಸಬ್ಸಿಡಿಗಾಗಿ ಸಿನಿಮಾ ಮಾಡಬೇಡಿ. ಒಳ್ಳೆ ಸಿನಿಮಾ ಮಾಡಿ, ಜನ ಮೆಚ್ಚುವ, ಸಮಾಜದ ಮೇಲೆ ಉತ್ತಮ ಪರಿಣಾಮ ಬೀರುವ ಸಿನಿಮಾ ಮಾಡಿದರೆ ಸಬ್ಸಿಡಿ ನೀಡಿದ್ದಕ್ಕೂ ಸಾರ್ಥಕವಾಗುತ್ತದೆ. ಸದ್ಯ ಬಾಕಿ ಇರುವ ಎಲ್ಲಾ ವರ್ಷದ ಸಬ್ಸಿಡಿಯನ್ನೂ ಒಟ್ಟಿಗೇ ನೀಡಲಾಗುವುದು. ಮೈಸೂರಿನಲ್ಲಿ ಅಂತಾರಾಷ್ಟ್ರೀಯ ಗುಣಮಟ್ಟದ ಚಿತ್ರನಗರಿ ಮಾಡಲು 160 ಎಕರೆ ಜಾಗವನ್ನು ವಾರ್ತಾ ಇಲಾಖೆಗೆ ಹಸ್ತಾಂತರಿಸಲಾಗಿದೆ. ಎರಡು ತಿಂಗಳಲ್ಲಿ ಕಾನೂನು ಪ್ರಕ್ರಿಯೆ ಮುಗಿಸಿ ಚಿತ್ರನಗರಿ ನಿರ್ಮಾಣ ಕಾರ್ಯ ಆರಂಭವಾಗಲಿದೆ ಎಂದು ತಿಳಿಸಿದರು.

ಹಿಂದಿನ ಸರ್ಕಾರ ಆಯಾ ವರ್ಷವೇ ಚಲನಚಿತ್ರ ಪ್ರಶಸ್ತಿಗಳನ್ನು ವಿತರಿಸದ ಕಾರಣಕ್ಕೇ 2018ನೇ ಸಾಲಿನಿಂದ ಪ್ರಶಸ್ತಿಗಳು ಬಾಕಿ ಉಳಿದಿವೆ. ಇದು ತಪ್ಪು ಹೀಗಾಗಬಾರದು. ಆದ್ದರಿಂದ ನಮ್ಮ ಸರ್ಕಾರ ಇನ್ನು ಮುಂದೆ ಪ್ರತೀ ವರ್ಷ ಸಿನಿಮಾ ಪ್ರಶಸ್ತಿಗಳನ್ನು ನೀಡಲಿದೆ. ಆಯಾ ವರ್ಷದ ಸಿನಿಮಾಗಳಿಗೆ ಮರು ವರ್ಷವೇ ಪ್ರಶಸ್ತಿ ಕೊಟ್ಟರೆ ಮಾತ್ರ ಅರ್ಥಪೂರ್ಣ ಆಗಿರುತ್ತದೆ. ಇಂದು ಎರಡು ವರ್ಷದ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಕೆಲವೇ ದಿನಗಳಲ್ಲಿ ಹಳೆ ಸರ್ಕಾರದ ಅವಧಿಯ ಇನ್ನೆರಡು ವರ್ಷದ ಸಿನಿಮಾ ಪ್ರಶಸ್ತಿಗಳನ್ನು ನೀಡಲು ಸೂಚನೆ ನೀಡಿದ್ದೇನೆ. ಬಳಿಕ ಆಯಾ ವರ್ಷದ ಪ್ರಶಸ್ತಿಗಳನ್ನು ಮರು ವರ್ಷದ ಆರಂಭದಲ್ಲೇ ನೀಡಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

ಈಗಿನ ಸಿನಿಮಾಗಳಲ್ಲಿ ಸಾಮಾಜಿಕ ಕಾಳಜಿ, ಗುಣಮಟ್ಟ ಕ್ಷೀಣ: ಮೊದಲೆಲ್ಲಾ ಸಿನಿಮಾಗಳ ಸಂಖ್ಯೆ ಕಡಿಮೆ ಇತ್ತು. ನಾವು ನೋಡಿದ್ದನ್ನೇ ಮತ್ತೆ ಮತ್ತೆ ನೋಡುತ್ತಿದ್ದೆವು. ಈಗ ಸಿಕ್ಕಾಪಟ್ಟೆ ಸಿನಿಮಾಗಳು ಬರುತ್ತಿವೆ. ಆದರೆ, ಸಾಮಾಜಿಕ ಕಾಳಜಿ ಮತ್ತು ಗುಣಮಟ್ಟ ಕಡಿಮೆ ಆಗುತ್ತಿದೆ. ಆದ್ದರಿಂದ ಈಗ ಸಿನಿಮಾ ನೋಡುವುದನ್ನೇ ಕಡಿಮೆ ಮಾಡಿದ್ದೇನೆ ಎಂದು ತಿಳಿಸಿದರು.

## ತೆಲಂಗಾಣದಲ್ಲಿ ಬಸ್–ಟ್ರಕ್ ನಡುವೆ ಭೀಕರ ರಸ್ತೆ ಅಪಘಾತ: 20 ಮಂದಿ ದುರ್ಮರಣ

**ರಂಗಾರೆಡ್ಡಿ(ತೆಲಂಗಾಣ),ನ.3–** ಜಲ್ಲಿಕಲ್ಲು ಸಾಗಿಸುತ್ತಿದ್ದ ಟಿಪ್ಪರ್ ಲಾರಿ, ಸಾರಿಗೆ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಬಸ್‌ನಲ್ಲಿದ್ದ 20 ಪ್ರಯಾಣಿಕರು ಸಾವನ್ನಪ್ಪಿರುವ ಘಟನೆ ಇಂದು ಬೆಳಿಗ್ಗೆ ತೆಲಂಗಾಣಾದ ರಂಗಾರೆಡ್ಡಿ ಜಿಲ್ಲೆಯ ಚವೆಲ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಡಿಕ್ಕಿಯ ರಭಸಕ್ಕೆ ಟಿಪ್ಪರ್ ಲಾರಿಯಲ್ಲಿದ್ದ ಜಲ್ಲಿಕಲ್ಲು ಬಸ್‌ನೊಳಗೆ ತುಂಬಿಕೊಂಡ ಪರಿಣಾಮ ಅದರಡಿ ಸಿಲುಕಿ 20 ಜನರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ 15 ಮಂದಿ ಗಾಯಗೊಂಡಿದ್ದು, ಹತ್ತಿರದ ಆಸ್ಪತ್ರೆಗಳಿಗೆ ದಾಖಲು ಮಾಡಲಾಗಿದೆ. ಈ ಪೈಕಿ ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಅಪಘಾತದ ಸುದ್ದಿ ತಿಳಿದು ಸ್ಥಳಕ್ಕಾಗಮಿಸಿದ ಪೊಲೀಸರು ಸ್ಥಳೀಯರ ನೆರವಿನೊಂದಿಗೆ ಬಸ್‌ನೊಳಗೆ ಸಿಲುಕಿಕೊಂಡಿದ್ದ ಪ್ರಯಾಣಿಕರನ್ನು ಹರಸಾಹಸಪಟ್ಟು ಹೊರಗೆ ಕರೆತಂದಿದ್ದಾರೆ.

ವಿಕಾರಾಬಾದ್–ಹೈದರಾಬಾದ್ ಮಾರ್ಗದಲ್ಲಿ ಇಂದು ಬೆಳಿಗ್ಗೆ 7.30ರ ಸುಮಾರಿಗೆ ದ್ವಿಚಕ್ರ




ವಾಹನವನ್ನು ಹಿಂದಿಕ್ಕುವ ಪ್ರಯತ್ನದಲ್ಲಿ ಟಿಪ್ಪರ್ ಲಾರಿ ಅತಿವೇಗವಾಗಿ ಮುನ್ನುಗ್ಗಿ ಬಸ್‌ಗೆ ಡಿಕ್ಕಿ ಹೊಡೆದ ಪರಿಣಾಮ ಈ ದುರಂತ ಸಂಭವಿಸಿದೆ.

ಘಟನಾ ಸ್ಥಳಕ್ಕೆ ತೆಲಂಗಾಣ ಸಾರಿಗೆ ಸಚಿವ ಪೊನ್ನಂ ಪ್ರಭಾಕರ್ ಭೇಟಿ ನೀಡಿ ಅಪಘಾತದ ಕಾರಣದ ಬಗ್ಗೆ ಅವರು ತೆಲಂಗಾಣ ರಾಜ್ಯ ರಸ್ತೆ ಸಾರಿಗೆ ನಿಗಮ (ಟಿಜಿಎಸ್‌ಆರ್‌ಟಿಸಿ) ವ್ಯವಸ್ಥಾಪಕ ನಿರ್ದೇಶಕ ವೈ.ನಾಗಿರೆಡ್ಡಿ ಅವರೊಂದಿಗೆ ಮಾತನಾಡಿದರು.ಅಧಿಕೃತ ಸಂವಹನದ ಪ್ರಕಾರ, ಜಲ್ಲಿ ತುಂಬಿದ ಟಿಪ್ಪರ್ ಲಾರಿ ತಪ್ಪು ಮಾರ್ಗದಿಂದ ಬಂದು ಬಸ್‌ಗೆ ಡಿಕ್ಕಿ ಹೊಡೆದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ತಾಂಡೂರು ಡಿಪೋಗೆ ಸೇರಿದ ಈ ಬಸ್ ಹೈದರಾಬಾದ್‌ಗೆ ತೆರಳುತ್ತಿತ್ತು. ಬಸ್‌ನಲ್ಲಿ ಸುಮಾರು 40 ಜನರು ಪ್ರಯಾಣಿಸುತ್ತಿದ್ದರು ಎಂದು ತಿಳಿದುಬಂದಿದೆ.

## ಮೈಸೂರಿನ ಅರಣ್ಯ ಪ್ರದೇಶಗಳಲ್ಲಿ ಸಫಾರಿ ಚಟುವಟಿಕೆ ಕಡಿಮೆ ಮಾಡಿ: ಸಿದ್ದರಾಮಯ್ಯ



**ಮೈಸೂರು:** ಅಕ್ಟೋಬರ್‌ನಲ್ಲಿ ಎರಡು ವಾರಗಳ ಅವಧಿಯಲ್ಲಿ ಮೂವರು ರೈತರು ಸಾವಿಗೀಡಾದ ನಂತರ, ಮೈಸೂರಿನ ಅರಣ್ಯ ಪ್ರದೇಶಗಳಲ್ಲಿ ಸಫಾರಿ ಚಟುವಟಿಕೆಗಳನ್ನು ಕಡಿಮೆ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೋಮವಾರ ತಿಳಿಸಿದ್ದಾರೆ.

ಅರಣ್ಯ ವಲಯಗಳಲ್ಲಿ ಹೆಚ್ಚುತ್ತಿರುವ ಮಾನವ ಚಟುವಟಿಕೆಯಿಂದಾಗಿ ನೀರು ಮತ್ತು ಆಹಾರವನ್ನು ಅರಸಿ ಕಾಡು ಪ್ರಾಣಿಗಳು ನಾಡಿಗೆ ಬರುತ್ತಿವೆ ಎಂದು ಅವರು ಹೇಳಿದರು.

'ಇದೇನು ಸಂಭವಿಸಿದೆ ಎಂದರೆ ಅರಣ್ಯ ಪ್ರದೇಶದಲ್ಲಿ ಜನರ ಓಡಾಟ ಹೆಚ್ಚಾಗಿದೆ ಮತ್ತು ರೆಸಾರ್ಟ್‌ಗಳು ಬರುತ್ತಿವೆ. ಇದಲ್ಲದೆ, ಸಫಾರಿ ಚಟುವಟಿಕೆಗಳು ಹೆಚ್ಚಿವೆ– ಅದು ಒಂದು ಕಾರಣ. ಹೀಗಾಗಿ, ಕಾಡು ಪ್ರಾಣಿಗಳು ನೀರು ಮತ್ತು ಆಹಾರವನ್ನು ಅರಸಿ ಹಳ್ಳಿಗಳಿಗೆ ಬರುತ್ತಿವೆ ಎಂದು ಸಿದ್ದರಾಮಯ್ಯ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

'ನಿನ್ನೆ ಅರಣ್ಯ ಅಧಿಕಾರಿಗಳೊಂದಿಗೆ ಸಭೆ ನಡೆದಿತ್ತು. ಶೀಘ್ರದಲ್ಲೇ ಮತ್ತೊಮ್ಮೆ ಸಭೆ ನಡೆಸುತ್ತೇನೆ. ಅಕ್ರಮ ರೆಸಾರ್ಟ್‌ಗಳ ವಿರುದ್ಧ ನಾವು ಕ್ರಮ ಕೈಗೊಳ್ಳುತ್ತೇವೆ ಮತ್ತು ಕಾಡಿನಲ್ಲಿ ಸಫಾರಿ ಚಟುವಟಿಕೆಗಳನ್ನು ಕಡಿಮೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇನೆ' ಎಂದು ಹೇಳಿದರು.

## ಶೇ 100 ರಷ್ಟು ಜನನ, ಮರಣ ನೊಂದಣಿಯಾಗಬೇಕು

# ಮರಣ ಹೊಂದಿದವರಿಗೆ ಸರ್ಕಾರದ ಸೌಲಭ್ಯ, ಪರಿಶೀಲನೆಗೆ ಡಿಸಿ ಸೂಚನೆ

**ದಾವಣಗೆರೆ:** ಜಿಲ್ಲೆಯಲ್ಲಿನ ಜನನ ಮತ್ತು ಮರಣ ಪ್ರಕರಣಗಳಲ್ಲಿ ಶೇ 100 ರಷ್ಟು ಇ–ಜನ್ಮ ತಂತ್ರಾಂಶದಲ್ಲಿ ನೊಂದಣಿಯಾಗಬೇಕು. ನೊಂದಣಿಯಾಗುವುದರಿಂದ ಸರ್ಕಾರದ ಸೌಲಭ್ಯಗಳನ್ನು ಮರಣ ಹೊಂದಿದರೂ ಪಡೆಯುತ್ತಿರುವ ಮಾಹಿತಿ ಸಿಗಲಿದೆ. ಮರಣ ಪ್ರಕರಣಗಳಲ್ಲಿ ಅನೇಕರಿಗೆ ಸೌಲಭ್ಯಗಳು ಹೋಗುತ್ತಿದ್ದು ಪರಿಶೀಲನೆ ನಡೆಸಲು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಹೇಳಿದರು.

ಸೋಮವಾರ(ನ.3) ರಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ನಾಗರಿಕ ನೋಂದಣಿ ಪದ್ಧತಿಯ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮರಣದ ಬಗ್ಗೆ ಹೆಚ್ಚಾಗಿ ವರದಿಯಾಗುತ್ತಿಲ್ಲ, ಮರಣ ಪ್ರಮಾಣದಲ್ಲಿ ಮಹಿಳೆಯರ ಸಂಖ್ಯೆ ಕಡಿಮೆ ಇದ್ದು, ಪುರುಷರ ಸಂಖ್ಯೆ ಹೆಚ್ಚಾಗಿರುತ್ತದೆ. ಜನನ, ಮರಣ ದಾಖಲೆಗಳು ಸಾರ್ವಜನಿಕರಿಗೆ ತಮ್ಮ ಶೈಕ್ಷಣಿಕ ಹಾಗೂ ಆರ್ಥಿಕ ವ್ಯವಹಾರಗಳು ಸೇರಿದಂತೆ ವಿವಿಧ ಕೆಲಸಗಳಿಗೆ




ಅತ್ಯವಶ್ಯವಾಗಿದೆ. ಅವುಗಳ ನಿರ್ವಹಣೆಯನ್ನು ಸಮರ್ಪಕವಾಗಿ ಮಾಡಬೇಕು. ಆಹಾರ ಮತ್ತು ನಾಗರಿಕರ ಸರಬರಾಜು ಇಲಾಖೆಯವರು ತಮ್ಮ ಮೂಲಕವೂ ಜನನ ಮರಣದ ಮಾಹಿತಿಯನ್ನು ನೀಡಬೇಕು. ಗ್ರಾಮೀಣ ಮಟ್ಟದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು ನೋಂದಣಿ ಮಾಡಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸರ್ಕಾರಿ ಆಸ್ಪತ್ರೆಗಳ ವೈದ್ಯಾಧಿಕಾರಿಗಳು ಮಾಹಿತಿಯನ್ನು ನೋಂದಣಿ ಮಾಡಬೇಕು. ಖಾಸಗಿ ಆಸ್ಪತ್ರೆಗಳ ಮಾಹಿತಿಯೂ ಪೋರ್ಟಲ್‌ನಲ್ಲಿ ಅಪ್‌ಲೋಡ್ ಆಗಬೇಕು ಎಂದರು.

ಶಾಸಕರುಗಳಿಗೆ ಬೆಳೆ ಕಟಾವು ಪ್ರಯೋಗಗಳನ್ನು ಕೈಗೊಳ್ಳುವ ಕುರಿತು ಮಾನದಂಡಗಳ ಬಗ್ಗೆ ಮಾಹಿತಿ ನೀಡುವಂತೆ ಹಾಗೂ ವಿಮಾ ಕಂಪನಿಯವರು ಬೆಳೆ ಕಟಾವು ಪ್ರಯೋಗಗಳಲ್ಲಿ ಸುಳ್ಳು ಮಾಹಿತಿ ಕಂಡು ಬಂದಲ್ಲಿ ಎಫ್‌ಐಆರ್ ದಾಖಲಿಸುವಂತೆ ಡಿಎಸ್‌ಒ ಅಧಿಕಾರಿಗೆ ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಜಿಲ್ಲೆಯಲ್ಲಿ ಇರುವ ಎಲ್ಲಾ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರಿಗೆ , ಆಶಾ ಕಾರ್ಯಕರ್ತರಿಗಳಿಗೆ ಹಾಗೂ ವೈದ್ಯಾಧಿಕಾರಿಗಳಿ ಪಿ.ಹೆಚ್.ಸಿ ರವರಿಗೆ ಜನನ ಮತ್ತು ಮರಣ ನೋಂದಣಿ ಕಾರ್ಯದಲ್ಲಿ ಸಕ್ರಿಯವಾಗಿ ಭಾಗವಹಿಸಿ ಶೇ.100 ಪ್ರತಿಶತ ಗುರಿ ಸಾಧಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಬರುವ ಎಲ್ಲಾ ಅಂಗನವಾಡಿ ಕಾರ್ಯಕರ್ತರು ಜನನ ಮರಣ ನೋಂದಣಿ ಕಾರ್ಯದಲ್ಲಿ ಕಡ್ಡಾಯವಾಗಿ ಭಾಗವಹಿಸಿ ಶೇ.100 ಪ್ರತಿಶತ ಗುರಿ ಸಾಧಿಸಬೇಕೆಂದರು.

ಡಿ.ಎಸ್.ಓ ನೀಲಾ ಮಾತನಾಡಿ ಕಳೆದ ಜನವರಿಯಿಂದ ಸೆಪ್ಟೆಂಬರ್ ಮಾಹೆಯವರೆಗೆ ಜನನ ಗಂಡು–10462, ಹೆಣ್ಣು–9787 ಸೇರಿ 20249, ಮರಣ ಸಂಖ್ಯೆ ಗಂಡು–7555, ಹೆಣ್ಣು–5724 ಸೇರಿ 13279 ನೋಂದಣಿಯಾಗಿವೆ. ಜಿಲ್ಲೆಯಲ್ಲಿ ಗ್ರಾಮೀಣ 916, ನಗರ 20 ಸೇರಿ ಒಟ್ಟು 936 ನೊಂದಣಿ ಘಟಕಗಳಿವೆ ಎಂದರು.

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬೆಳೆ ಅಂದಾಜು ಸಮೀಕ್ಷೆಯಲ್ಲಿ ಒಟ್ಟು ಜಿಲ್ಲೆಗೆ 1888 ಪ್ರಯೋಗಗಳನ್ನು ಹಂಚಿಕೆ ಮಾಡಲಾಗಿದೆ.

ಜಿಲ್ಲಾ ಪಂಚಾಯತ್ ಸಿಇಓ ಗಿತ್ತೆ ಮಾಧವ್ ವಿಠ್ಠಲರಾವ್, ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಡಿಹೆಚ್‌ಓ ಡಾ.ಷಣ್ಮುಖಪ್ಪ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# 20 ಕೋಟಿ ರೂ ವೆಚ್ಚದಲ್ಲಿ ಕಡೂರು–ಬೀರೂರು ರೈಲ್ವೆನಿಲ್ದಾಣ ಮೇಲ್ದರ್ಜೆಗೆ: ಸಚಿವ ವಿ.ಸೋಮಣ್ಣ

**ಚಿಕ್ಕಮಗಳೂರು:** ಬೀರೂರು ಹಾಗೂ ಕಡೂರು ರೈಲು ನಿಲ್ದಾಣಗಳನ್ನು ಅಮೃತ್ ಭಾರತ್ ಯೋಜನೆಯಡಿ ತಲಾ 20 ಕೋಟಿ ರೂ. ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲಾಗುವುದು. ಒಂದೆರಡು ತಿಂಗಳಲ್ಲಿ ಕಾಮಗಾರಿ ಆರಂಭವಾಗಲಿದೆ ಎಂದು ರೈಲ್ವೇ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಅವರು ಶಿವನಿ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ರೈಲು ನಿಲುಗಡೆಗೆ ಹಸಿರು ನಿಶಾನೆ ತೋರಿಸಿ ನಂತರ ಬೀರೂರು ರೈಲ್ವೇ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದರು.

ಭಾರತ ಸರ್ಕಾರ ರೈಲ್ವೇ ಬಜೆಟ್ ಅನ್ನು ಸಾಮಾನ್ಯ ಬಜೆಟ್‌ನೊಂದಿಗೆ ವಿಲೀನಗೊಳಿಸಿದ ಮೇಲೆ ಇಡೀ ರಾಷ್ಟ್ರದ ರೈಲ್ವೇಯಲ್ಲಿ ಕ್ರಾಂತಿ ಆಗುತ್ತಿದೆ. ಲೆವೆಲ್ ಕ್ರಾಸಿಂಗ್ ಹಾಗೂ ಮೇಲ್‌ಸೇತುವೆ ಮತ್ತು ಕೆಳ ಸೇತುವೆ ನಿರ್ಮಾಣದ ದೊಡ್ಡ ಆಂಧೋಲನ ನಡೆಯುತ್ತಿದೆ ಎಂದು ಹೇಳಿದರು.

ನವೆಂಬರ್ 8 ರಂದು ಬೆಳಗ್ಗೆ ಬೆಂಗಳೂರು ಸುತ್ತಮುತ್ತ 100 ಕಿಮೀ ವ್ಯಾಪ್ತಿಯಲ್ಲಿ ಎಷ್ಟು ಕಾಮಗಾರಿ ನಡೆಯುತ್ತಿದೆ. ಎಷ್ಟು ಪೂರ್ಣಗೊಂಡಿ–ದೆ, ಎಷ್ಟು ಬಾಕಿ ಇದೆ. ಎನ್ನುವುದನ್ನು ಪರಿಶೀಲಿಸಿ, ಇಂದು ವೇಗವಾಗಿ ಬೆಳೆದಿರುವ ಬೆಂಗಳೂರಿನ ರೈಲು ಯೋಜನೆಗೆ ಏನು ಮಾಡಬೇಕು ಎಂಬುದನ್ನು ಪರಿಶೀಲಿಸಲು ನವೆಂಬರ್ 8 ರಂದು ಬೆಳಗ್ಗೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳನ್ನು ಕರೆಸಿ ಮುಂದಿನ 3 ವರ್ಷದಲ್ಲಿ ಶೇ.90 ರಷ್ಟು ಎಲ್ಲೂ ಎಲ್‌ಸಿ ಗೇಟ್ ಇಲ್ಲದ ಹಾಗೆ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ನವೆಂಬರ್ 7 ರಂದು ಪ್ರಧಾನಿ ನರೇಂದ್ರ ಮೋದಿ ಅವರು ಮತ್ತೆ 4 ವಂದೇ ಭಾರತ್ ರೈಲುಗಳನ್ನು ರಾಷ್ಟ್ರಕ್ಕೆ ಸಮರ್ಪಣೆ ಮಾಡಲಿದ್ದಾರೆ. ಅದರಲ್ಲಿ 780 ಕಿ.ಮೀ ಅತೀ ಹೆಚ್ಚು ಅಂತರದ ಕೇರಳದ ಎರ್ನಾಕುಲಂನಿಂದ ಬೆಂಗಳೂರುರಿಗೆ ಅತ್ಯಂತ ವೇಗದ ರೈಲಿಗೆ ಹಸಿರು ನಿಶಾನೆ ತೋರಲಿದ್ದಾರೆ ಎಂದರು.

ತಿರುಪತಿಯಿಂದ ಚಿಕ್ಕಮಗಳೂರಿಗೆ ಮತ್ತೊಂದು ರೈಲು ಬೇಕೆನ್ನುವ ಬೇಡಿಕೆ ಇದೆ. ಅದನ್ನು ಪರಿಶೀಲಿಸುತ್ತಿದ್ದೇವೆ. ಯಶವಂತಪುರ–



ವಾಸ್ಕೋಡಿಗಾಮ ರೈಲಿಗೆ ಬಹಳ ವರ್ಷದ ಬೇಡಿಕೆ ಇತ್ತು. ಅದನ್ನು ಪ್ರಾಯೋಗಿಕವಾಗಿ ಓಡಿಸಲಾಗುತ್ತಿದ್ದು, ಶಿವನಿಗೆ ಸಂಜೆ 6.11 ಕ್ಕೆ ಬರಲಿದೆ. ಬೆಳಗ್ಗೆ 8.11 ಕ್ಕೆ ಬರಲಿದೆ. ಒಂದರಡು ನಿಮಿಷ ನಿಲುಗಡೆ ಇರುತ್ತದೆ. ಕಳೆದ 10 ವರ್ಷದಲ್ಲಿ ಬೀರೂರು ರೈಲು ನಿಲ್ದಾಣದಲ್ಲಿ ಸಾಕಷ್ಟು ಬದಲಾವಣೆ ಆಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಕರ್ನಾಟಕಕ್ಕೆ 7646 ಕೋಟಿ ರೈಲ್ವೇ ಬಜೆಟ್ ನೀಡಿದ್ದಾರೆ. ಹಿಂದೆ ಯುಪಿಎ ಸರ್ಕಾರದಲ್ಲಿ ಕೇವಲ 830 ಕೋಟಿ ಕೊಡುತ್ತಿದ್ದರು ಎಂದರು.

ಹೊಸ ಲೈನ್‌ಗಳಿಗೆ 2009 ರಿಂದ 2014ರ ವರೆಗೆ 11500 ಕೋಟಿ ಕೊಟ್ಟಿದ್ದರು. ಮೋದಿ ಅವರು ಬಂದ ನಂತರ 70 ಸಾವಿರ ಕೋಟಿ ಕೊಟ್ಟರು. ಅಲ್ಲದೆ ಕಳೆದ 10 ವರ್ಷಗಳಲ್ಲಿ 45 ಸಾವಿರ ಕೋಟಿ ರೂ.ಗಳ ರೈಲ್ವೇ ಕಾಮಗಾರಿಯನ್ನು ರಾಜ್ಯದಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರಸ್ತುತ ಕರ್ನಾಟಕದಲ್ಲಿ 11800 ಕೋಟಿ ರೂಗಳ 9 ಪ್ರಮುಖ ಯೋಜನೆಗಳು ನಡೆಯುತ್ತಿವೆ ಎಂದು ತಿಳಿಸಿದರು.ಇದರಲ್ಲಿ ಹುಬ್ಬಳ್ಳಿ–ಅಂಕೋಲ ಯೋಜನೆ ಪ್ರಮುಖವಾದದ್ದು. ಇದನ್ನು ಯಾರೂ ಮಾಡುತ್ತಾರೆ ಎಂದು ಕನಸಿನಲ್ಲೂ ನೆನೆಸಿರಲಿಲ್ಲ. ಇದೀಗ 17000 ಕೋಟಿ ರೂ. ವೆಚ್ಚದಲ್ಲಿ ಪ್ರಧಾನಿ ಮೋದಿ ಹಾಗೂ ರೈಲ್ವೇ ಸಯತಿಚಿ ಅಶ್ವಿನಿ ವೈಷ್ಣವ್ ಅವರು ಅನುಷ್ಟಾನಗೊಳಿಸುತ್ತಿದ್ದಾರೆ. ಹಾಸನ–ಬೇಲೂರು, ಬೇಲೂರು–ಚಿಕ್ಕಮಗಳೂರು ಯೋಜನೆಗಳು ಇದರಲ್ಲಿ ಸೇರಿವೆ ಎಂದರು. ಬೇಲೂರು–ಹಾಸನ ರೈಲ್ವೇ ಯೋಜನೆಯ ಭೂ ಸ್ವಾಧೀನ ಆಗಿರಲಿಲ್ಲ. ನಾವೇ ಸ್ವತಃ ನಾವೇ ಜಿಲ್ಲಾಧಿಕಾರಿಗಳ ಕಚೇರಿಗೆ ತೆರಳಿ ಸಭೆ ಮಾಡಿದ್ದೇವೆ. ಸಧ್ಯದಲ್ಲೇ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಹೇಳಿದರು.

ಕಳೆದ 14 ತಿಂಗಳಲ್ಲಿ ರಾಜ್ಯದ 28 ಜಿಲ್ಲೆಗಳಿಗೆ ಭೇಟಿ ನೀಡಿದ್ದೇನೆ. ಹತ್ತಾರು ವರ್ಷಗಳಿಂದ ಸ್ಥಗಿತಗೊಂಡಿದ್ದ ಕಾಮಗಾರಿಗಳನ್ನು ಮತ್ತೆ ಕೈಗೆತ್ತಿಗೊಂಡು ಹಂತ ಹಂತರವಾಗಿ ಅನುಷ್ಠಾನಗೊಳಿಸುತ್ತಿದ್ದೇವೆ ಎಂದರು.

## ರಾಶಿ ಭವಿಷ್ಯ

### ಮೇಷ ರಾಶಿ

ಆರೋಗ್ಯದ ಬಗ್ಗೆ ಸ್ವಲ್ಪ ಗಮನ ನೀಡಬೇಕು. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ಮನ್ಮಥನ ಬಾಣದಿಂದ ತಪ್ಪಿಸಿಕೊಳ್ಳುವ ಅವಕಾಶ ಕಡಿಮೆಯಿದೆ. ಕೆಲಸದಲ್ಲಿ ನಿಮ್ಮ ಮೇಲಿನವರು ಇಂದು ದೈವದೂತರಂತೆ ಕೆಲಸ ಮಾಡುವಂತೆ ಕಾಣುತ್ತದೆ. ಈ ರಾಶಿಚಕ್ರದ ವೃದ್ಧರು ಇಂದು ತಮ್ಮ ಹಳೆಯ ಸ್ನೇಹಿತರನ್ನು ಉಚಿತ ಸಮಯದಲ್ಲಿ ಭೇಟಿಯಾಗಲು ಹೋಗಬಹುದು

### ವೃಷಭ ರಾಶಿ

ನಿಮ್ಮ ಆರೋಗ್ಯದ ಬಗ್ಗೆ ಚಿಂತಿಸುವುದು ನಿಮ್ಮ ಕಾಯಿಲೆಯನ್ನು ಇನ್ನಷ್ಟು ಉಲ್ಬಣಿಸಬಹುದಾದ್ದರಿಂದ ಹಾಗೆ ಮಾಡಬೇಡಿ. ಹೊಸ ಹಣಗಳಿಕೆಯ ಅವಕಾಶಗಳು ಲಾಭದಾಯಕವಾಗಿರುತ್ತವೆ. ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ. ಪ್ರೀತಿಪಾತ್ರರು ಪ್ರಣಯದ ಮೂಡ್‌ನಲ್ಲಿರುತ್ತಾರೆ.ನೀವು ಇಂದು ಕೆಲಸದಲ್ಲಿ ಓರ್ವ ಅದ್ಭುತ ವ್ಯಕ್ತಿಯನ್ನು ಭೇಟಿಯಾಗಬಹುದು.

### ಮಿಥುನ ರಾಶಿ

ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ಇಂದು ನೀವು ಇತರರ ಅಗತ್ಯಗಳಿಗೆ ಗಮನ ನೀಡಬೇಕಾದರೂ ಮಕ್ಕಳೊಂದಿಗೆ ಅತೀ ಉದಾರತೆ ತೋರಿಸುವುದು ತೊಂದರೆಗೆ ಕಾರಣವಾಗುತ್ತದೆ. ಈ ದಿನ ನಿಮಗೆ ಗುಲಾಬಿಗಳ ಸುಗಂಧವನ್ನು ತರುತ್ತದೆ. ಪ್ರೀತಿಯ ಭಾವಪರವಶತೆಯನ್ನು ಆನಂದಿಸಿ.

### ಕರ್ಕ ರಾಶಿ

ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಅದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ನೀವು ಪ್ರಯಾಣ ಮಾಡುವ ಮತ್ತು ಹಣ ಖರ್ಚು ಮಾಡುವ ಮನಸ್ಥಿತಿಯಲ್ಲಿರುತ್ತೀರಿ. ಅದರೆ ಹಾಗೆ ಮಾಡಿದಲ್ಲಿ ನೀವು ವಿಷಾದಿಸುತ್ತೀರಿ. ಸಂತೋಷದ ಚೈತನ್ಯದಾಯಕ – ಪ್ರಿಯವಾದ ಚಿತ್ತದ – ನಿಮ್ಮ ಖುಷಿಯ ಸ್ವಭಾವ ನಿಮ್ಮ ಸುತ್ತಲಿನವರಿಗೆ ಸಂತೋಷ ಮತ್ತು ಖುಷಿಯನ್ನು ತರುತ್ತದೆ.

### ಸಿಂಹ ರಾಶಿ

ಗಾಳಿಯಲ್ಲಿ ಮನೆ ಕಟ್ಟುವಲ್ಲಿ ನಿಮ್ಮ ಸಮಯ ವ್ಯರ್ಥ ಮಾಡಬೇಡಿ. ಬದಲಿಗೆ ಏನಾದರೂ ಅರ್ಥಪೂರ್ಣವಾದದ್ದನ್ನು ಮಾಡಲು ನಿಮ್ಮ ಶಕ್ತಿ ವ್ಯಯಿಸಿ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ಕುಟುಂಬದವರು, ಮಕ್ಕಳು ಮತ್ತು ಸ್ನೇಹಿತರೊಂದಿಗೆ ಕಳೆದ ಸಮಯ ನಿಮ್ಮ ಚೈತನ್ಯವನ್ನು ಮರಳಿ ನೀಡಲು ಮುಕ್ತವಾಗಿರುತ್ತದೆ.

### ಕನ್ಯಾ ರಾಶಿ

ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

### ತುಲಾ ರಾಶಿ

ನಿಮ್ಮ ಕೆಟ್ಟ ಚಟಗಳು ನಿಮ್ಮನ್ನು ನಾಶಗೊಳಿಸುತ್ತವೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ. ನಿಮ್ಮ ಸಣ್ಣ ಕೃತಜ್ಞತೆ ಅವರಿಗೆ ಚೈತನ್ಯ ನೀಡುತ್ತದೆ. ಕೃತಜ್ಞತೆ ಜೀವನದ ಸೊಗಸನ್ನು ಹೆಚ್ಚಿಸುತ್ತದೆ ಮತ್ತು ಕೃತಘ್ನತೆ ಅದಕ್ಕೆ ಕಲೆಗಳನ್ನು ಹಚ್ಚುತ್ತದೆ.

### ವೃಶ್ಚಿಕ ರಾಶಿ

ನಿರಾಶಾದಾಯಕ ಮನೋಭಾವವು ಕೇವಲ ನಿಮ್ಮ ಅವಕಾಶಗಳನ್ನು ಸೀಮಿತಗೊಳಿಸುವುದಷ್ಟೇ ಅಲ್ಲದೇ ದೇಹದ ಸಾಮರಸ್ಯವನ್ನೂ ಭಂಗಪಡಿಸುವುದರಿಂದ ಅವುಗಳನ್ನು ತಡೆಯಬೇಕು. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಇಂದು ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ದುರ್ಬಲವಾಗುತ್ತದೆ.

### ಧನು ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಆಪ್ತ ಸ್ನೇಹಿತನ ಸಹಾಯದಿಂದ ಇಂದು ಕೆಲವು ವ್ಯಾಪಾರಿಗಳಿಗೆ ಹಣದ ಲಾಭವಾಗುವ ಸಾಧ್ಯತೆ ಇದೆ. ಈ ಹಣ ನಿಮ್ಮ ಅನೇಕ ಸಮಸೆಗಳನ್ನು ದೂರ ಮಾಡಬಹುದು. ಇಂದು ನಿಮಗೆ ಗೊತ್ತಿರುವವರ ಮೇಲೆ ನೀವು ಯಾವುದೇ ನಿರ್ಧಾರ ಹೇರಲು ಪ್ರಯತ್ನಿಸಿದಲ್ಲಿ ನೀವು ನಿಮ್ಮದೇ ಹಿತಾಸಕ್ತಿಗೆ ಧಕ್ಕೆ ತರುತ್ತೀರಿ ಅನುಕೂಲಕರ ಫಲಿತಾಂಶಗಳನ್ನು ಪಡೆಯಲು ಪರಿಸ್ಥಿತಿಯನ್ನು ತಾಳ್ಮೆಯಿಂದ ನಿರ್ವಹಿಸುವುದೊಂದೇ ದಾರಿ.

### ಮಕರ ರಾಶಿ

ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ಇಂದು ಮಾಡಿದ ಹೂಡಿಕೆ ನಿಮ್ಮ ಅಭ್ಯುದಯ ಮತ್ತು ಆರ್ಥಿಕ ಭದ್ರತೆಯನ್ನು ಹೆಚ್ಚಿಸುತ್ತದೆ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರೀತಿಯಲ್ಲಿ ಬೀಳುವುದು ಇಂದು ನಿಮಗೆ ಕೆಟ್ಟದಾಗಿರಬಹುದಾದ್ದರಿಂದ ನೀವು ಜಾಗರೂಕರಾಗಿರಿ. ಇದು ಕೆಲಸದಲ್ಲಿ ಅದ್ಭುತ ದಿನದಂತೆ ತೋರುತ್ತಿದೆ.

### ಕುಂಭ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ. ನಿಮ್ಮ ಸಂಗಾತಿಯ ಸಂಗದಲ್ಲಿ– ಆರಾಮ ಮತ್ತು ಪ್ರೀತಿಯನ್ನು ಪಡೆಯಿರಿ. ನೀವು ಮೊದಲ ನೋಟದಲ್ಲೇ ಪ್ರೀತಿಯಲ್ಲಿ ಬೀಳಬಹುದು. ಚಿಲ್ಲರೆ ಮತ್ತು ಸಗಟು ವ್ಯಾಪಾರಿಗಳಿಗೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ.

# ಶ್ರೀಮತಿ ಪ್ರಭಾ ರವೀಂದ್ರರವರಿಗೆ ಕಲಾಕುಂಚದಿಂದ ಸನ್ಮಾನ



**ದಾವಣಗೆರೆ :** ಕಲಾಕುಂಚ ಎಂ.ಸಿ.ಸಿ. ಬ್ಲಾಕ್ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾ ರವೀಂದ್ರರವರಿಗೆ ಇತ್ತೀಚಿಗೆ ದಾವಣಗೆರೆಯಲ್ಲಿ ನಡೆದ ಲಿಂ. ವಾಗೀಶ್ ಪಂಡಿತಾರಾಧ್ಯ ಶಿವಾಚಾರ್ಯ ಶ್ರೀ ಲಿಂಗೈಕ್ಯ ಉಮಾಪತಿ ಪಂಡಿತಾರಾಧ್ಯ ಶಿವಾಚಾರ್ಯ ಶ್ರೀಗಳ ಸ್ಮರಣೋತ್ಸವ ಸಮಾರಂಭದಲ್ಲಿ ನಿರಂತರ ಆರು ದಶಕಗಳ ಕಾಲ ನಿರಂತರ ಸ್ವಯಂ ಪ್ರೇರಣೆಯಿಂದ ಸಮಾಜ ಸೇವೆಯನ್ನು ಗುರುತಿಸಿ "ಸಮಾಜ ಸೇವಾ ಭೂಷಣ" ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಲಾಕುಂಚ ಕಛೇರಿ ಹೊರಾಂಗಣದಲ್ಲಿ 70ನೇ ವರ್ಷದ ಕನ್ನಡ ರಾಜ್ಯೋತ್ಸವದ ಸಮಾರಂಭದಲ್ಲಿ ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್‌ರವರು ಅಭಿಮಾನದಿಂದ ಅಭಿನಂದಿಸಿ ಸನ್ಮಾನಿಸಿ ಗೌರವಿಸಿದರು. ಕಲಾಕುಂಚ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ, ಕಲಾಕುಂಚದ ಅಧ್ಯಕ್ಷರಾದ ಕೆ.ಹೆಚ್.ಮಂಜುನಾಥ್, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿ, ಗೌರವ ಅಧ್ಯಕ್ಷರಾದ ಶ್ರೀಮತಿ ವಸಂತಿ ಮಂಜುನಾಥ, ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್, ಸಮಿತಿ ಸದಸ್ಯರಾದ ಶ್ರೀಮತಿ ಕೋಮಲಾ ವಸಂತಕುಮಾರ್, ಶ್ರೀಮತಿ ಸಂಧ್ಯಾ ಶ್ರೀನಿವಾಸ್, ಶ್ರೀಮತಿ ಸುಚಿತ್ರಾ ಗಣೇಶ್ ರಾವ್, ಶ್ರೀಮತಿ ಶೈಲಜಾ ಪ್ರಶಾಂತ್, ಶ್ರೀಮತಿ ಸುಮಾ ಏಕಾಂತಪ್ಪ, ಶ್ರೀಮತಿ ರೇಣುಕಾ ರಾಮಣ್ಣ, ಎಂ.ಎಸ್.ಚನ್ನಬಸವ ಶೀಲವಂತ್, ಶ್ರೀಮತಿ ಪೂರ್ಣಿಮಾ ಲೋಹಿತಾಶ್ವಬಾಬು ಮುಂತಾದವರು ಉಪಸ್ಥಿತರಿದ್ದರು.

# ಮಾನವ–ಪ್ರಾಣಿ ಸಂಘರ್ಷಕ್ಕೆ ತುತ್ತಾಗಿ ಜೀವ ಕಳೆದುಕೊಳ್ಳುವ ಕುದುರೆಮುಖ ರಾಷ್ಟ್ರೀಯ ಉದ್ಯಾನದೊಳಗಿರುವ ಕುಟುಂಬಗಳು

**ಚಿಕ್ಕಮಗಳೂರು:** ಕುದುರೆಮುಖ ರಾಷ್ಟ್ರೀಯ ಉದ್ಯಾನದೊಳಗಿರುವ ಕುಟುಂಬಗಳನ್ನು ಸೂಕ್ತ ಪರಿಹಾರ ಹಾಗೂ ಅವರಿಗೆ ಬದಲಿ ಭೂಮಿ ನೀಡಿ ಉತ್ತಮ ಸ್ಥಳಾಂತರ ಯೋಜನೆ ರೂಪಿಸದೆ ಅಲ್ಲಿರುವ ಜನ ಮಾನವ–ಪ್ರಾಣಿ ಸಂಘರ್ಷಕ್ಕೆ ತುತ್ತಾಗಿ ಜೀವ ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಿದೆ.

ರಾಜ್ಯ ಸರ್ಕಾರ ಉದ್ಯಾನವನದೊಳಗಿರುವ ಕುಟುಂಬಗಳನ್ನು ಕಳೆದ 25 ವರ್ಷಗಳಿಂದಲೂ ಉತ್ತಮ ಪುನರ್ವಸತಿ ಪ್ಯಾಕೇಜ್ ನೀಡಿ ಸ್ಥಳಾಂತರಿಸುವುದಾಗಿ ಹೇಳುತ್ತಲೇ ಬರುತ್ತಿದ್ದು, ಕೇವಲ ಕೆಲವು ಕುಟುಂಬಗಳನ್ನು ಮಾತ್ರ ಸ್ಥಳಾಂತರಿಸಿ ಮೌನವಾಗಿದೆ. ಈವರೆಗೂ ಸ್ಥಳಾಂತರ ಯೋಜನೆಯನ್ನು ಪೂರ್ಣಗೊಳಿಸದೆ ಜನ ಕಾಡಾನೆಗಳ ಹಾವಳಿಗೆ ಸಿಕ್ಕಿ ಪ್ರಾಣ ಕಳೆದುಕೊಳ್ಳುವ ದುಸ್ಥಿತಿಗೆ ಸಿಲುಕುತ್ತಿದ್ದಾರೆ.

ಇಡೀ ದೇಶದಲ್ಲಿ ವನ್ಯಪ್ರಾಣಿಗಳ ಬಳಕೆಗೆ ರಕ್ಷಿತಾರಣ್ಯ, ಅಭಯಾರಣ್ಯ ಮತ್ತು ಉದ್ಯಾನವನಗಳು ಸೇರಿದಂತೆ ಕೇವಲ ಶೇ.3 ರಷ್ಟು ಭೂಮಿ ಮಾತ್ರ ಉಳಿದಿದೆ. ಮಿಕ್ಕ ಶೇ.97 ಭಾಗ ಮನುಷ್ಯ ಬದುಕಿಗೆ ಮೀಸಲಾಗಿದೆ. ಆದರೂ ಸಹ ಕಾಡಿನ ಅಕ್ಕಪಕ್ಕದ ವಸತಿ ಪ್ರದೇಶಗಳಲ್ಲಿ ವನ್ಯಪ್ರಾಣಿ ಹಾಗೂ ಮಾನವ ಸಂಘರ್ಷ ನಡೆಯುತ್ತಿದ್ದು, ಇದಕ್ಕೆ ಮುಖ್ಯ ಕಾರಣ ಸರ್ಕಾರ ವೈಜ್ಞಾನಿಕವಾಗಿ ಈ ಸಮಸ್ಯೆಯನ್ನು ನಿರ್ವಹಿಸದೇ ಇರುವುದು.

ವನ್ಯಪ್ರಾಣಿಗಳ ಹಾವಳಿ ಜನವಸತಿ ಪ್ರದೇಶಗಳಲ್ಲಿ ಅಧಿಕವಾಗಬಾರದೆಂಬ ಉದ್ದೇಶದಿಂದಲೇ ಅಭಯಾರಣ್ಯ ಹಾಗೂ ರಾಷ್ಟ್ರೀಯ ಉದ್ಯಾನವನ ಸೇರಿದಂತೆ ರಕ್ಷಿತ ಪ್ರದೇಶಗಳನ್ನು ಕಾದಿರಿಸಲಾಗಿದೆ. ಈ ಪ್ರದೇಶಗಳಿಂದ ಪ್ರಾಣಿಗಳು ಅವ್ಯಾಹತವಾಗಿ ಹೊರಗೆ ಬಂದಾಗ ಹಾಗೂ ಮನುಷ್ಯ ಜೀವನಕ್ಕೆ ಮಾರಕವೆನಿಸಿದಾಗ ಮಾತ್ರ ಅವುಗಳನ್ನು ಸೆರೆಹಿಡಿಯುವುದು ಸೂಕ್ತ. ಆದರೆ ಇತ್ತೀಚೆಗೆ ರಕ್ಷಿತ ಪ್ರದೇಶಗಳಲ್ಲಿರುವ ಆನೆಗಳನ್ನು ಸೆರೆಹಿಡಿಯಲು ಮುಂದಾಗಿದ್ದು, ಇದಕ್ಕೆ ಸ್ಪಷ್ಟ ಉದಾಹರಣೆಯೆಂದರೆ ಇತ್ತೀಚೆಗೆ ಜಿಲ್ಲೆಯ ಕೆರೆಕಟ್ಟೆ ಅರಣ್ಯ ಪ್ರದೇಶದಲ್ಲಿದ್ದ ಆನೆಯನ್ನು ಹಿಡಿಯಲು ಆಲೋಚಿಸುತ್ತಿರುವುದು. ಈ ಕಾರ್ಯಾಚರಣೆ ಎಷ್ಟು ಸರಿ ಎಂದು ಪ್ರಶ್ನಿಸಬೇಕಾಗಿದೆ.

ಮನುಷ್ಯ ಮತ್ತು ಪ್ರಾಣಿ ಸಂಘರ್ಷವನ್ನು ತಪ್ಪಿಸಬೇಕಾದುದು ಅಗತ್ಯ. ಆದರೆ ಕಾಡಾನೆಗಳು ಜನವಸತಿ ಪ್ರದೇಶಕ್ಕೆ ಆಗಾಗ ಬರುತ್ತಿರುವ ಕಾರಣಗಳನ್ನು ಸರ್ಕಾರ ಗುರುತಿಸಿ ಅವುಗಳ ನಡಿಗೆ ಪಥವನ್ನು ಸುಗಮಗೊಳಿಸುವ ಬಗ್ಗೆ ಸಹ ಆಲೋಚಿಸುವುದರಿಂದ ಮಾತ್ರ ಈ ಸಮಸ್ಯೆಗೆ ಪರಿಹಾರ ಹುಡುಕಬಹುದಾಗಿದೆ.

ಈ ದೇಶದಲ್ಲಿ ಹಿಂದಿನಿಂದಲೂ ಕಾಡಿನ ಬದಿಯಲ್ಲಿರುವ ಜನವಸತಿ ಪ್ರದೇಶಗಳಲ್ಲಿ ಪ್ರಾಣಿ ಮತ್ತು ಮಾನವ ಸಂಘರ್ಷ ನಡೆದುಕೊಂಡೇ ಬಂದಿದ್ದು, ಇತ್ತೀಚೆಗೆ ಅರಣ್ಯ ವ್ಯಾಪ್ತಿ ಕ್ಷೀಣಿಸಿದಂತೆ ಈ ಈ ದೇಶದಲ್ಲಿ ಹಿಂದಿನಿಂದಲೂ ಕಾಡಿನ ಬದಿಯಲ್ಲಿರುವ ಜನವಸತಿ ಪ್ರದೇಶಗಳಲ್ಲಿ ಪ್ರಾಣಿ ಮತ್ತು ಮಾನವ ಸಂಘರ್ಷ ನಡೆದುಕೊಂಡೇ ಬಂದಿದ್ದು, ಇತ್ತೀಚೆಗೆ ಅರಣ್ಯ ವ್ಯಾಪ್ತಿ ಕ್ಷೀಣಿಸಿದಂತೆ ಈ ಸಂಘರ್ಷ ಅಧಿಕಗೊಳ್ಳುತ್ತಿದೆ. ಈ ಸಮಸ್ಯೆಯ ಬೇರಿನ ಮೂಲವನ್ನು ಸರ್ಕಾರ ಹುಡುಕಿ ಪರಿಹರಿಸಬೇಕೇ ಹೊರತು ಕಾಡಿನಲ್ಲಿರುವ ಪ್ರಾಣಿಗಳನ್ನು ಹಿಡಿದು ಅವುಗಳನ್ನು ಪಳಗಿಸಲು ಮುಂದಾಗಬಾರದು.

ರಾಜ್ಯ ಸರ್ಕಾರ ಪ್ರವಾಸೋದ್ಯಮಕ್ಕೆ ಒತ್ತು ಕೊಡುತ್ತಿರುವುದು ಅಗತ್ಯವೆನಿಸಿದರೂ ಅಭಯಾರಣ್ಯ ಸೇರಿದಂತೆ ವನ್ಯಪ್ರಾಣಿಗಳ ಆವಾಸ ಸ್ಥಾನದಲ್ಲೂ ಪ್ರವಾಸಿಗರ ಅಧಿಕ ಓಡಾಟ ಆರಂಭವಾಗಿದ್ದು, ಇದರ ಉತ್ತೇಜನದಿಂದ ವನ್ಯಪ್ರಾಣಿಗಳ ಬದುಕಿಗೆ ಭಂಗ ಉಂಟಾಗುತ್ತಿದೆ. ಈ ಬಗ್ಗೆ ಎಚ್ಚರ ವಹಿಸಿ ನಿಯಂತ್ರಿಸುವುದು ಅತ್ಯಂತ ಅವಶ್ಯಕ. ಕುದುರೆಮುಖ ಸೇರಿದಂತೆ ವನ್ಯಪ್ರಾಣಿಗಳ ಓಡಾಟವಿರುವ ಪ್ರದೇಶಗಳಲ್ಲಿ ಅತ್ಯಂತ ಅವೈಜ್ಞಾನಿಕವಾಗಿ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವುದಕ್ಕೆ ಸರ್ಕಾರ ತಕ್ಷಣ ವಿರಾಮ ಹಾಕಬೇಕಾಗಿದೆ.

# 'ಕನೆಕ್ಟ್–2025' ಕಾರ್ಯಕ್ರಮಕ್ಕೆ ಸಚಿವ ಎಚ್ ಕೆ ಪಾಟೀಲ ಚಾಲನೆ

**ಗದಗ :** ಪ್ರಸಕ್ತ ಸಾಲಿನ ಕರ್ನಾಟಕ ಇಂಟರ್ ನ್ಯಾಷನಲ್ ಟ್ರಾವೆಲ್ ಕನೆಕ್ಟ್–2025 ರ ಅಂಗವಾಗಿ ಕರ್ನಾಟಕ ಟೂರಿಸಂ ಸೊಸೈಟಿ ಸಹಯೋಗದೊಂದಿಗೆ ಶುಕ್ರವಾರ ಗದಗ ಜಿಲ್ಲೆಯ ಮಹಾತ್ಮಗಾಂಧಿ ಆಡಿಪಿಆರ್ ವಿಶ್ವವಿದ್ಯಾಲಯದಲ್ಲಿ 'ಕನೆಕ್ಟ್–2025ರ ಕಾರ್ಯಕ್ರಮ ಅತ್ಯಂತ ಯಶಸ್ವಿಯಾಗಿ ಜರುಗಿತು.



ಗದಗ, ಹಾವೇರಿ, ಧಾರವಾಡ, ಉತ್ತರ ಕನ್ನಡ, ಬಳ್ಳಾರಿ, ಹೊಸಪೇಟೆ, ಕೊಪ್ಪಳ, ಬಾಲಕೋಟೆ, ವಿಜಯಪುರ ಹಾಗೂ ರಾಜ್ಯ ಪ್ರವಾಸೋದ್ಯಮ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ

ಕನೆಕ್ಟ್–2025 ಕಾರ್ಯಕ್ರಮಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕನೆಕ್ಟ್ 2025 ಕ್ಕೆ ಚಾಲನೆ ನೀಡಿ ಮಾತನಾಡಿದರು.

ಕರ್ನಾಟಕ ರಾಜ್ಯದಲ್ಲಿಯೇ ಗದಗ ಜಿಲ್ಲೆ ಒಂದು ಉತ್ತಮ ಪ್ರವಾಸಿ ಸ್ಥಾನವಾಗಿದೆ. ಕೃತಪುರ ಎಂಬ ನಗರ ಕಲ್ಯಾಣ ಚಾಲುಕ್ಯರು, ರಾಷ್ಟ್ರಕೂಟರು, ಕುಮಾರವ್ಯಾಸರ ಕಾಲದಿಂದಲೂ ವೀರನಾರಾಯಣ ದೇವಾಲಯ, ತಿಕುಟೇಶ್ವರ ದೇವಾಲಯ ಕಲೆ, ಶಿಲ್ಪಕಲೆ, ಆರ್ಷಿಣಿಯ ಕೆತ್ತನೆಯ ನೋಡುಗರ ಗಮನ ಸೆಳೆಯುತ್ತವೆ. ಅದು ಈಗ ಗದಗ ಎಂಬ ಹೆಸರಿನ ಜಿಲ್ಲೆಯಾಗಿದ್ದು ಇದೊಂದು ಐತಿಹಾಸಿಕ ಸ್ಥಳವಾಗಿದೆ ಎಂದರು.

ಲಕ್ಕುಂಡಿ ಗ್ರಾಮದಲ್ಲಿ ಇರುವಂತ ಕಲಾಕೃತಿ, ಐತಿಹಾಸಿಕ 101 ಬಾವಿಗಳು, ವಿಶೇಷ ಕೆತ್ತನೆಯ ಮೂಲಕ ಹಲವಾರು ದೇವಾಲಯಗಳು, ಶಾಸನಗಳು, ಶಿಲಾಶಾಸನಗಳು, ರಾಷ್ಟ್ರಮಟ್ಟದಲ್ಲಿ ಕಣ್ಮನ ಸೆಳೆದ ಸ್ಥಳವಾಗಿದೆ. ಇಂದು ವಿಶ್ವದಲ್ಲಿಯೇ ಗಮನ ಸೆಳೆದ ಐತಿಹಾಸಿಕ ಸ್ಥಳವಾಗಿದೆ ಎಂದು ಅಭಿಪ್ರಾಯ ಪಟ್ಟರು.

ರಾಜ್ಯದಲ್ಲಿ 460 ಪ್ರವಾಸಿ ಸ್ಥಾನಗಳಲ್ಲಿ ಗದಗ ಜಿಲ್ಲೆಯಲ್ಲಿಯೆ 48 ಪ್ರವಾಸಿ ಸ್ಥಾನಗಳನ್ನು ಗುರುತಿಸಿರುವುದು ಜಿಲ್ಲೆಯ ಹೆಮ್ಮೆಯಾಗಿದೆ.

ಪ್ರಮುಖವಾಗಿ ಜಿಲ್ಲೆಯಲ್ಲಿ ಪ್ರಸ್ತುತ ಪ್ರವಾಸೋದ್ಯಮ ಇಲಾಖೆಯಲ್ಲಿ ಹಣ ಹೂಡಿಕೆ ಮಾಡುವಂತಹ ಸಂಸ್ಥೆಗಳು ಮತ್ತು ಏಜೆನ್ಸಿ ಅವರು ಗದಗ ಜಿಲ್ಲೆಯಲ್ಲಿನ ಕನೆಕ್ಟ್ 2025 ಕಾರ್ಯಕ್ರಮದಲ್ಲಿ ಪಾಲ್ಗೊಂಡಿರುವದು ಹೆಮ್ಮೆಯಾಗಿದೆ.

ಗದಗ ಜಿಲ್ಲೆಯ ಸುತ್ತಮುತ್ತಲಿನ ವಾತಾವರಣದಲ್ಲಿ ಗದಗ ಮಧ್ಯ ಭಾಗದಲ್ಲಿರುವ 108 ಅಡಿಯ ಬಸವಣ್ಣನವರ ಏಕತೆ ಸಾರುವ ಮೂರ್ತಿಯನ್ನು ನೋಡಲು ಸಾವಿರಾರು ಜನರು ಪ್ರತಿದಿನ ಆಗಮಿಸುತ್ತಾರೆ. ಹಾಗೂ ಭೀಷ್ಮ ಕೆರೆಯ ಬೋಟಿಂಗ್ ವ್ಯವಸ್ಥೆ ಕಲ್ಪಿಸಲಾಗಿದ್ದು ಸ್ಥಳೀಯರು ಸುತ್ತಮುತ್ತಲಿನ ಜಿಲ್ಲೆಯವರು ಇದರ ಅನುಭವವನ್ನು ಪಡೆಯುತ್ತಿದ್ದಾರೆ. ಐತಿಹಾಸಿಕ ಸ್ಥಳ ಎಲ್ಲವುಗಳನ್ನು ಪ್ರೇಕ್ಷಣೀಯ ಸ್ಥಳವಾಗಿ ಮಾರ್ಪಡಿಸಲಾಗಿದೆ ಎಂದರು.

ಗದಗ ಬಿಂಕದಕಟ್ಟಿಯ ಮೃಗಾಲಯವನ್ನು ವಿಸ್ತರಿಸಿ ಸಾರ್ವಜನಿಕರ ಆಕರ್ಷಣೀವಾಗಿಸಲು ಅಭಿವೃದ್ಧಿ ಮಾಡಲಾಗುತ್ತಿದೆ. ಜೊತೆಗೆ ಸಾಲುಮರದ ತಿಮ್ಮಕ್ಕ ಉದ್ಯಾನವನದಲ್ಲಿ ಸಾರ್ವಜನಿಕರಿಗೆ ಜಿಪ್ ಲೈನ್ ಅಳವಡಿಕೆ ಮಾಡಲಾಗಿದೆ ಎಂದು ಸಚಿವ ಎಚ್ ಕೆ ಪಾಟೀಲ ಹೇಳಿದರು.

ಈ ಸಂದರ್ಭದಲ್ಲಿ ಪ್ರವಾಸೋದ್ಯಮ ಇಲಾಖೆ ಆಯುಕ್ತ ಅಕ್ರಂ ಪಾಷಾ, ಕೆ. ಎಸ್.ಎ.ಡಿ.ಸಿ ವ್ಯವಸ್ಥಾಪಕ ನಿರ್ದೇಶಕ ಪ್ರಶಾಂತ್ ಮಿಶ್ರ,

ಪ್ರಶಾಂತ್ ಸಂಕಿಣಮಠ, ವಿವಿ ಕುಲಸಚಿವ ಡಾ. ಸುರೇಶ್ ನಾಡಗೌಡರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಎಸ್ ಎನ್ ಬಳ್ಳಾರಿ, ಲಕ್ಕುಂಡಿ ಪ್ರಾಧಿಕಾರದ ಸದಸ್ಯ ಸಿದ್ದು ಪಾಟೀಲ, ದಾಸನೂರು, ಉತ್ತರ ಕರ್ನಾಟಕ ಭಾಗದ ಹಲವಾರು ಜಿಲ್ಲೆಯ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯಿಂದ 70ನೇ ಕರ್ನಾಟಕ ರಾಜ್ಯೋತ್ಸವದ ನಿಮಿತ್ತ ಚಿತ್ರಕಲಾ ಸ್ಪರ್ಧೆ ಉದ್ಘಾಟನೆ

**ದಾವಣಗೆರೆ:** ವಿಶ್ವ ಕರ್ನಾಟಕ ರಕ್ಷಣಾ ವೇದಿಕೆಯಿಂದ

ದಿ. 8–11–2025 ನಡೆಯಲಿರುವ ಕನ್ನಡ ರಾಜ್ಯೋತ್ಸವದ ಅಂಗವಾಗಿ ದಿ. 2–11–2025ರಂದು ಶ್ರೀ ಶಿವಯೋಗಿ ಮಂದಿರದಲ್ಲಿ ಏರ್ಪಡಿಸಲಾಗಿರುವ ಚಿತ್ರಕಲಾ ಸ್ಪರ್ಧೆಯನ್ನು ವಿರಕ್ತಮಠದ ಶ್ರೀ ಬಸವಪ್ರಭು ಸ್ವಾಮಿಗಳು ಇವರ ಅಮೃತ ಹಸ್ತದಿಂದ ಉದ್ಘಾಟಿಸಲಾಯಿತು.




ಈ ಸಂದರ್ಭದಲ್ಲಿ ವಿಶ್ವ ಕರ್ನಾಟಕ ವೇದಿಕೆಯ ರಾಜ್ಯಾಧ್ಯಕ್ಷರಾದ ಕೆ.ಜಿ.ಯಲ್ಲಪ್ಪನವರು, ಜಿಲ್ಲಾ ಅಧ್ಯಕ್ಷರಾದ ಬಾಬುರಾವ್, ಉಪಾಧ್ಯಕ್ಷರಾದ ಜಿ. ಮಹಾಲಿಂಗಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಆಜಮ್ ರಜ್ವಿ. ಜಿಲ್ಲಾ ಯುವ ಘಟಕದ ಅಧ್ಯಕ್ಷರಾದ ಎಸ್ ಸಿದ್ದೇಶ. ಸಂಘಟನಾ ಕಾರ್ಯದರ್ಶಿ ಸೈಯದ್ ಶಹಬಾಜ್, ಪದಾಧಿಕಾರಿಗಳಾದ. ಚಂದ್ರಶೇಖರ್ ಗಣಪ, ಆರ್ ಅಶ್ವಥ್ ನಾರಾಯಣ. ಗಿರೀಶ್ ನವಲೆ. ಮಂಜುನಾಥ್ ಶೆಟ್ಟಿ ಉಪಸ್ಥಿತರಿದ್ದರು.

# ನಿಮ್ಮ ಹಣ ನಿಮ್ಮ ಹಕ್ಕು" ಅಭಿಯಾನಕ್ಕೆ ನ್ಯಾ. ಮಹಾವೀರ ಮ. ಕರೆಣ್ಣವರ ಚಾಲನೆ

**ದಾವಣಗೆರೆ :** ಜಿಲ್ಲೆಯ ಎಲ್ಲಾ ಸರ್ಕಾರಿ ಬ್ಯಾಂಕುಗಳಲ್ಲಿ ಠೇವಣಿ ಅಥವಾ ಇತರೆ ಕಾರಣದಿಂದ ಬಾಕಿ ಉಳಿದು, ಗ್ರಾಹಕರು ಹಣ ಹಿಂಪಡೆಯದೆ ಇರುವ ನಿಮ್ಮ ಹಣ ನಿಮ್ಮ ಹಕ್ಕು"* ಪ್ರಚಾರ ಅಭಿಯಾನಕ್ಕೆ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ಚಾಲನೆ ನೀಡಿದರು.

ಮಹಾವೀರ ಮ. ಕರಣ್ಣವರ್ ಮಾತನಾಡಿ, ಜಿಲ್ಲೆಯಲ್ಲಿನ ಎಸ್‌ಬಿಐ, ಕೆನಾರಾ ಬ್ಯಾಂಕ್, ಕರ್ನಾಟಕ ಬ್ಯಾಂಕ್, ಕೆಜಿಬಿ, ಇಂಡಿಯನ್ ಬ್ಯಾಂಕ್ ಸೇರಿದಂತೆ ಒಟ್ಟು 23 ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ 2,67,508 ಖಾತೆಗಳಲ್ಲಿ ಸುಮಾರು 61.69 ಕೋಟಿಗಿಂತ ಹೆಚ್ಚಿನ ಹಣ ಡೋರ್ ಮ್ಯಾಟ್ ಅಕೌಂಟ್‌ನಲ್ಲಿ ಸೇರ್ಪಡೆಯಾಗಿದೆ. ಈ ಮೊತ್ತವು ಸಂಬಂಧಪಟ್ಟ ಖಾತೆದಾರರಿಗೆ ಅಥವಾ ಅವರ ವಾಸುದಾರರಿಗೆ ಸೇರಬೇಕಾಗಿದೆ ಎಂದು ತಿಳಿಸಿದರು.

ಇದು ಸರ್ಕಾರದ ಮತ್ತು ಬ್ಯಾಂಕುಗಳ ಅತ್ಯುತ್ತಮ ಕೆಲಸವಾಗಿದ್ದು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಸಲಹೆ ನೀಡಿದರು.

ಲೀಡ್ ಬ್ಯಾಂಕಿನ ಮ್ಯಾನೇಜರ್ ಪಡದಯ್ಯ ಹಿರೇಮಠ್‌ರವರು ಮಾತನಾಡಿ, ಸಾರ್ವಜನಿಕರ ಖಾತೆಗಳಿಗೆ ಸಂಬಂಧಿಸಿದಂತೆ ಹಲವು ಬ್ಯಾಂಕುಗಳಲ್ಲಿ ಪಾವತಿಯಾಗದೆ ಸುಮಾರು 10 ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಬಾಕಿ ಬಿದ್ದು ಅಲ್ಲಿಯೇ ಉಳಿದಿರುವ ಹಣವನ್ನು ಗ್ರಾಹಕರಿಗೆ ಹಿಂದಿರುಗಿಸುವುದೇ ಕಾರ್ಯಕ್ರಮದ ಉದ್ದೇಶ. ಈ ಹಣವನ್ನು ಹಿಂಪಡೆಯಲು ಕೆ ವೈ ಸಿ (ಏಜಅ) ದಾಖಲೆ ಕೊಟ್ಟರೆ ಸಾಕು. ಅದಕ್ಕೆ ಸಂಬಂಧಿಸಿದ ಬ್ಯಾಂಕ್ ಸಿಬ್ಬಂದಿಯವರು ಕೂಡ ಸಹಕಾರ ನೀಡಲಿದ್ದಾರೆ ಎಂದು ಮಾಹಿತಿ ನೀಡಿದರು. ಅಷ್ಟೇ ಅಲ್ಲದೆ ಆನ್ಲೈನ್ ಮೂಲಕವೂ ಸಹ ಹಣ ಹಿಂಪಡೆಯಬಹುದು ಎಂದು ಮಾಹಿತಿ ಎಂದರು.

ಇದೇ ಸಂದರ್ಭದಲ್ಲಿ ವಿವಿಧ ವಿನ್ಯಾಸದ ಬಿತ್ತಿ ಪತ್ರಗಳನ್ನು ಮತ್ತು ಸಾರ್ವಜನಿಕ ಮಾಹಿತಿ ಪತ್ರಗಳನ್ನು ಬಿಡುಗಡೆ ಮಾಡಲಾಯಿತು.

# ಮರಣವನ್ನಪ್ಪಿದ ಹೈ ಸ್ಪೀಡ್ ಖ್ಯಾತಿಯ ಮಣಿ



**ದಾವಣಗೆರೆ :** ರಾಜ್ಯಾದ್ಯಂತ ಹೆಸರು ಮಾಡಿದ್ದ ಹೈ ಸ್ಪೀಡ್ ಖ್ಯಾತಿಯ ಮಣಿ ಎಂಬ ಕುರಿಯು ನವೆಂಬರ್ 2,2025 ರಂದು ಮರಣವಣ್ಣಪ್ಪಿದೆ.

ಹೊಸ ಕುಂದುವಾಡ ಗ್ರಾಮದ ಹೆಸರಾಂತ ಟಗರು ಹೈ ಸ್ಪೀಡ್ ಮಣಿ ಈ ಹಿಂದೆ ಮೂರು ಕಣಗಳಲ್ಲಿ ಉತ್ತಮ ಪ್ರದರ್ಶನ ನೀಡಿ ಪ್ರಶಸ್ತಿ ಪಡೆದು ಮೂರು ಬೈಕ್ ಗಳ ಬಹುಮಾನವನ್ನು ತನ್ನದಾಗಿಸಿಕೊಂಡಿತು. ರಾಜ್ಯಾದ್ಯಂತ ಹೆಸರು ಮಾಡಿತ್ತು. ಹಾಲೇಶ್ ಎಂಬುವರು ಈ ಕುರಿಯನ್ನು ಚೆನ್ನಾಗಿ ಪೋಷಣೆ ಮಾಡಿದ್ದರು.

ಕುರಿ ಕಾಳಗದಲ್ಲಿ ತನ್ನದೇ ಆದಂತಹ ಚಾಪನ್ನು ಮಾಡಿಸಿತ್ತು. ಆದರೆ ಇಂದು ಭಾನುವಾರ ಕುರಿ ಸಾವನ್ನಪ್ಪಿದ್ದಕ್ಕೆ ಕುರಿ ಮಾಲೀಕನ ಕಣ್ಣೀರು ಹಾಕುತ್ತಾ ವೇದನೆಯನ್ನು ಯಾರಿಗೂ ಹೇಳಿಕೊಳ್ಳಲಾಗದೆ ಸ್ಥಿತಿ ಅವನದಾಗಿತ್ತು.

ಟಗರು ಹೈ ಸ್ಪೀಡ್ ಮಣಿಯನ್ನು ಹೊಸ ಕುಂದುವಾಡದ ತುಂಬಾ ಮೆರವಣಿಗೆ ಮಾಡಿ ತಮ್ಮ ನಿವಾಸದಲ್ಲಿ ಸಮಾಧಿ ಮಾಡಿದರು.

# ಯುವನಿಧಿ ಯೋಜನೆಯಲ್ಲಿ ನಿರುದ್ಯೋಗಿ ಭತ್ಯೆ ಪಡೆಯಲು ಅರ್ಜಿ ಆಹ್ವಾನ

**ದಾವಣಗೆರೆ;** – 2022–23 ಹಾಗೂ 2023–24 ಮತ್ತು 2024–25ನೇ ಸಾಲಿನಲ್ಲಿ ಪದವಿ, ಸ್ನಾತಕೋತ್ತರ ಹಾಗೂ ಡಿಪ್ಲಮೋ ತೇರ್ಗಡೆಯಾದ ಅಭ್ಯರ್ಥಿಗಳು ಯುವನಿಧಿ ಯೋಜನೆಯಡಿ ನಿರುದ್ಯೋಗ ಭತ್ಯೆ ಪಡೆಯಲು ಸೇವಾ ಸಿಂಧು ಪೋರ್ಟಲ್ https://sevasindhugs.karnataka.gov.in) ಮೂಲಕ ಅಥವಾ ದಾವಣಗೆರೆ ಒನ್/ಗ್ರಾಮ ಒನ್/ಕರ್ನಾಟಕ ಒನ್/ಬಾಪೂಜಿ ಸೇವಾ ಕೇಂದ್ರಗಳಲ್ಲೂ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಈಗಾಗಲೇ ಹಣ ಪಡೆಯುತ್ತಿರುವ ಯುವನಿಧಿ ಯೋಜನೆಯ ಫಲಾನುಭವಿಗಳು ಪ್ರಸ್ತುತ ತ್ರೈಮಾಸಿಕವಾಗಿ ದಾಖಲಿಸುತ್ತಿರುವ ಸ್ವಯಂ ಘೋಷಣೆಯನ್ನು ಇನ್ನುಮುಂದೆ ಈ ಮೊದಲಿನಂತೆ ಮಾಸಿಕವಾಗಿ ಪ್ರತಿ ತಿಂಗಳ 25ನೇ ತಾರೀಕಿನೊಳಗೆ ಆನ್‌ಲೈನ್ ಮೂಲಕ ದಾಖಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಪಿ.ಬಿ. ರಸ್ತೆ, ದಾವಣಗೆರೆಯನ್ನು ಸಂಪರ್ಕಿಸದೆಂದು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ.ಡಿ. ತಿಳಿಸಿದ್ದಾರೆ.

# ನಾಗರೀಕ ನೋಂದಣಿ ಪದ್ದತಿ, ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ

**ದಾವಣಗೆರೆ :** ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಜನನ ಮರಣಗಳ ನೋಂದಣಾಧಿಕಾರಿಯವರ ಅಧ್ಯಕ್ಷತೆಯಲ್ಲಿ ನವಂಬರ್ 3 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜನನ ಮತ್ತು ಮರಣ ನೋಂದಣಿಯ ನಾಗರಿಕ ನೋಂದಣಿ ಪದ್ಧತಿಯಡಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾ ಜನನ ನೋಂದಣಾಧಿಕಾರಿಗಳು ಹಾಗೂ ಜಿಲ್ಲಾ ಸಮನ್ವಯ ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

# ಪೌರಕಾರ್ಮಿಕರ ವಿಶೇಷ ನೇರ ನೇಮಕಾತಿಗೆ ಅರ್ಜಿ ಆಹ್ವಾನ

**ದಾವಣಗೆರೆ :** ಪೌರಾಡಳಿತ ನಿರ್ದೇಶನದಂತೆ ಗ್ರೇಡ್1 ನಗರಸಭೆಗಳಿಗೆ 8, ಗ್ರೇಡ್ 2 ನಗರಸಭೆಗಳಿಗೆ 6, ಪುರಸಭೆ 3 ಮತ್ತು ಪಟ್ಟಣ ಪಂಚಾಯಿತಿಗಳಿಗೆ 3 ಪೌರಕಾರ್ಮಿಕರ ಹುದ್ದೆಗಳನ್ನು ನೇರ ನೇಮಕಾತಿಗೆ ಹಂಚಿಕೆ ಮಾಡಲಾಗಿತ್ತು. ಈ ಹುದ್ದೆಗಳಿಗೆ ಒಳಮೀಸಲಾತಿ ಅಳವಡಿಸಿಕೊಂಡು ರೋಸ್ಟರ್ ಬಿಂದುವಿನ ಅನುಬಂಧದಂತೆ ವರ್ಗವಾರು ವರ್ಗೀಕರಿಸಿಕೊಂಡು ಸರ್ಕಾರದ ವಿಶೇಷ ನೇಮಕಾತಿ ನಿಯಮಗಳ ರೀತ್ಯಾ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ನವಂಬರ್ 28 ರೊಳಗಾಗಿ ಅರ್ಜಿಯನ್ನು ನಗರ ಸ್ಥಳೀಯ ಸಂಸ್ಥೆಗಳ ಕಚೇರಿಗಳಲ್ಲಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಧಿಕೃತ ವೆಬ್ ಸೈಟ್ http://davanageredudc.mrc.gov.in ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕೃತ ವೆಬ್ ಸೈಟ್ ಸಂಪರ್ಕಿಸಬೇಕೆಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಡಾ.ಎನ್ ಮಹಾಂತೇಶ್ ತಿಳಿಸಿದ್ದಾರೆ.

# ಕನ್ನಡ ಭಾಷೆಗಾಗಿ ಕನ್ನಡಿಗರೆಲ್ಲರೂ ಒಗ್ಗಟ್ಟಾಗಬೇಕು: ಡಾ. ಎಂ.ಸಾಣಿಕೊಪ್ಪ

**ತುಮಕೂರು:** ಬೇರೆ ಬೇರೆ ರಾಜ್ಯಗಳಿಂದ ಬಂದವರಿಗೆ ನಾವು ನಮ್ಮ ರಾಜ್ಯದಲ್ಲಿ ಬದುಕಲು ಅವಕಾಶಕೊಡುತ್ತೇವೆ ಯಾಕೆಂದರೆ ನಾವು ವಿಶಾಲ ಹೃದಯದವರು ಆದರೆ ಅವರಿಗೆ ಕನ್ನಡವನ್ನು ಕಲಿಸುವಲ್ಲಿ ಸೋಲುತ್ತಿದ್ದೇವೆ ಎಂದು ಶ್ರೀ ಸಿದ್ಧಾರ್ಥ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಮಲ್ಲಿಕಾರ್ಜುನ ಬಿ. ಸಾಣಿಕೊಪ್ಪ ವಿಶಾದ ವ್ಯಕ್ತಪಡಿಸಿದರು.



ನಗರದ ಹೊರವಲಯದಲ್ಲಿರುವ ಶ್ರೀ ಸಿದ್ಧಾರ್ಥ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ನಡೆದ 69ನೇ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮ ಸಡಗರದಿಂದ ಆಚರಿಸಿದರು. ಈ ಒಂದು ಸಂದರ್ಭದಲ್ಲಿ ಕನ್ನಡ ತಾಯಿ ಭುವನೇಶ್ವರಿಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಪ್ರಾಂಶುಪಾಲರು ಕನ್ನಡ ಭಾಷೆಗಾಗಿ ನಾವೆಲ್ಲರೂ ಒಗ್ಗಟ್ಟಾಗಬೇಕು, ಕನ್ನಡ ಭಾಷೆ ನಮ್ಮ ಮಾತೃಭಾಷೆ, ನಮ್ಮ ಭಾವನೆಗಳು ವ್ಯಕ್ತವಾಗುವುದು ಕನ್ನಡದಲ್ಲಿ ಕನ್ನಡವನ್ನು ನಾವು ಹೆಚ್ಚಾಗಿ ಬಳಸಿ ಮತ್ತಷ್ಟು ಜನರಿಗೆ ಕನ್ನಡ ಕಲಿಸುವಂತಹ ಪ್ರಯತ್ನವನ್ನು ಮಾಡಬೇಕು ಎಂದು ಹೇಳಿದರು.

ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಉಪಪ್ರಾಂಶುಪಾಲರಾದ ಡಾ. ಪ್ರಭಾಕರ್ ಮಾತನಾಡಿ ಕೇವಲ ಕನ್ನಡವನ್ನು ಕನ್ನಡ ರಾಜ್ಯೋತ್ಸವದಂದೇ ಮಾತನಾಡಿದರೆ ಸಾಲದು ಪ್ರತಿ ನಿತ್ಯ ಕನ್ನಡವನ್ನು ಮಾತನಾಡಿದರೆ ಕನ್ನಡ ಭಾಷೆಗೆ ಗೌರವವನ್ನು ಕೊಟ್ಟಂತಾಗುತ್ತದೆ. ವ್ಯವಹಾರಕ್ಕೆ ಬೇಕಾದ ಭಾಷೆಯಾದ ಆಂಗ್ಲಭಾಷೆಯನ್ನು ಕೇವಲ ವ್ಯವಹಾರಕ್ಕೆ ಬಳಸಿ ನಮ್ಮ ಕನ್ನಡ ಭಾಷೆಯನ್ನು ಹೆಚ್ಚಾಗಿ ಬಳಸಿ, ಮತ್ತೊಬ್ಬರಿಗೆ ಕನ್ನಡವನ್ನು ಕಲಿಸಿದಾಗ ನಮ್ಮ ಕನ್ನಡ ನಾಡು ನುಡಿ ಉಳಿದು ಬೆಳೆಯುತ್ತದೆ ಎಂದು ತಿಳಿಸಿದರು.

ಕನ್ನಡ ಭಾಷೆ ಗಡಿನಾಡಿನಲ್ಲಿ ಬೇರೆ ಬೇರೆ ಭಾಷೆಗಳ ಪ್ರಭಾವಕ್ಕೆ ಒಳಗಾಗಿ ಕನ್ನಡ ಬಳಕೆ ಕಡಿಮೆಯಾಗುತ್ತಿದೆ. ಜೊತೆಗೆ ಇತ್ತೀಚಿನ ದಿನಗಳಲ್ಲಿ ಗ್ರಾಮೀಣ ಪ್ರದೇಶಳಲ್ಲೂ ಕೂಡ ಆಂಗ್ಲ ಭಾಷೆಯ ಪ್ರಭಾವಕ್ಕೆ ಒಳಗಾಗಿ ಕನ್ನಡ ಭಾಷೆ ಕಡಿಮೆಯಾಗುತ್ತಿದೆ. ಇದರಿಂದ ನಾವು ಎಚ್ಚೆತ್ತುಕೊಂಡು ಮುಂದಿನ ಪೀಳಿಗೆಯ ಮಕ್ಕಳಿಗೆ ಕನ್ನಡ ನೆಲೆ ಜಲ ಭಾಷೆಯ ಮೇಲೆ ಅಭಿಮಾನ ಮೂಡಿಸುವಂತಹ ಕೆಲಸವನ್ನು ನಾವು ಮಾಡಬೇಕಿದೆ, ಹೆಚ್ಚು ಹೆಚ್ಚು ಸಾಹಿತ್ಯಾಸಕ್ತಿ ಮೂಡಿಸುವಂತಹ ಪ್ರಯತ್ನವನ್ನು ಮಾಡಬೇಕಿದೆ ಎಂದು ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ವೈದ್ಯಕೀಯ ಅಧೀಕ್ಷಕರಾದ ಡಾ. ರಾಜೇಶ್ವರಿಯವರು ತಿಳಿಸಿದರು.

ಇನ್ನು ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಂದ ಕನ್ನಡ ಭಾಷೆಗೆ ಸಂಬಂಧಪಟ್ಟ ಸುಮಧುರ ಗೀತೆಗಳು ಕೇಳಿದವು ಹಾಗೂ ಭರತನಾಟ್ಯ ನೃತ್ಯಗಳು ಪ್ರದರ್ಶನಗಳು ಎಲ್ಲರ ಗಮನ ಸೆಳೆದವು.

ಇನ್ನು ಈ ಸಂದರ್ಭದಲ್ಲಿ ಡಾ. ಹಾಲೇಶ್, ಡಾ. ಸತೀಶ್ ಬಾಬು, ಮೆಡಿಕಲ್ ಕಾಲೇಜಿನ ದೈಹಿಕ ಶಿಕ್ಷಕರಾದ ಶಶಿಕುಮಾರ್, ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಹಾಗೂ ಎಲ್ಲಾ ವಿದ್ಯಾರ್ಥಿಗಳು ಹಾಜರಿದ್ದರು.

# ಜ್ಞಾನದೀಪ ಪಬ್ಲಿಕ್ ಶಾಲೆಯಲ್ಲಿ 70ನೇ ಕನ್ನಡ ರಾಜ್ಯೋತ್ಸವ




**ದಾವಣಗೆರೆ:** ಜ್ಞಾನದೀಪ ಪಬ್ಲಿಕ್ ಶಾಲೆಯಲ್ಲಿ ದಿ. 1-11-2025ರ ಶನಿವಾರದಂದು ಬೆಳಿಗ್ಗೆ 9 ಗಂಟೆಗೆ ಶಾಲಾ ಆವರಣದಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಧ್ವಜಾರೋಹಣವನ್ನು ಶಾಲಾ ನಿರ್ದೇಶಕ ಕೆ. ಪ್ರಭು ಜೊತೆಯಲ್ಲಿ ಕಾರ್ಯದರ್ಶಿ ಕೆ. ಬಸವರಾಜಪ್ಪ ಇವರುಗಳು ನೆರವೇರಿಸಿದರು.

ಮುಖ್ಯಅತಿಥಿಗಳಾಗಿ ಆಗಮಿಸಿದ್ದ ಕೆ. ಪ್ರಭು ಅವರು ಮಾತನಾಡಿ, ನಾಡು, ನುಡಿ ಸಂಸ್ಕೃತಿಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಗೌರವ ಭಾವವನ್ನು ಮೂಡಿಸುವಂತೆ ಶಿಕ್ಷಕರಿಗೆ ಸಲಹೆ ನೀಡಿದರು.

ಸಂಸ್ಥೆಯ ಕಾರ್ಯದರ್ಶಿಗಳಾದ ಡಾ. ಕೆ. ಬಸವರಾಜಪ್ಪ ಮಾತನಾಡಿ, ಕನ್ನಡ ಭಾಷೆಗೆ ಪ್ರಾಮುಖ್ಯತೆಯನ್ನು ಕೊಡಬೇಕು ಹಾಗೂ ಇಂಗ್ಲೀಷ್ ಭಾಷೆಯು ಅನಿವಾರ್ಯವಾಗಿ ಬೇಕಾಗುತ್ತದೆ. ಕನ್ನಡ ಕವಿಗಳಾದ ಕುವೆಂಪು, ದ.ರಾ.ಬೇಂದ್ರೆ, ಗೋವಿಂದ ಪೈ, ನಿಸಾರ್ ಅಹ್ಮದ್ ರವರು ಸಾಹಿತ್ಯ ರಚನೆಯಲ್ಲಿ ಹೆಚ್ಚಿನ ಪ್ರಸಿದ್ಧಿಯನ್ನು ಹೊಂದಿದವರಾಗಿದ್ದಾರೆ, ತಾವುಗಳು ಸಹ ಅವರುಗಳಂತೆ ಕನ್ನಡ, ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಎತ್ತಿ ಹಿಡಿಯುವಂತಹ ಸಾಹಿತ್ಯ ರಚನೆ ಮಾಡಲು ಪ್ರಯತ್ನಿಸಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹ ಶಿಕ್ಷಕಿಯರಾದ ಮಮತಾ ಇವರಿಗೆ ಗೌರವ ಸಮರ್ಪಣೆ ಮಾಡಲಾಯಿತು.

ಶಾಲಾ ಶಿಕ್ಷಕಿಯವರು ಕನ್ನಡ ರಾಜ್ಯೋತ್ಸವದ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಮುಖ್ಯಶಿಕ್ಷಕರಾದ ನಾಗರಾಜ್ ಪಿ., ಸಹಶಿಕ್ಷಕಿಯರಾದ ಶ್ರೀಮತಿ ರಶ್ಮಿ ವಿ., ಶ್ರೀಮತಿ ರೂಪಾ ಡಿ.ಕೆ., ಶ್ರೀಮತಿ ಉಷಾ, ಶ್ರೀಮತಿ ರಚನಾ, ಶ್ರೀಮತಿ ಗೀತಾ, ಶ್ರೀಮತಿ ಅಂಬಿಕಾ, ಶ್ರೀಮತಿ ಮಮತಾ, ಶ್ರೀಮತಿ ರಮ್ಯಾ, ಕು॥ ಆಲಿಯಾ, ನರ್ಸರಿ ತರಬೇತಿ ಶಿಕ್ಷಕಿಯರಾದ ಶ್ರೀಮತಿ ಕವಿತಾ, ಶ್ರೀಮತಿ ವೀಣಾ, ಶ್ರೀಮತಿ ಸಿಂಧು, ಶ್ರೀಮತಿ ಶಾಲಿನಿ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ರಚನಾ ನಿರೂಪಿಸಿದರು, ಶಾಂತಲಾ ಅವರಿಂದ ಪ್ರಾರ್ಥನೆ ನೆರವೇರಿತು. ಮುಖ್ಯ ಶಿಕ್ಷಕ ನಾಗರಾಜ್ ಪಿ. ಸ್ವಾಗತ ಕೋರಿದರು. ಸರ್ವರನ್ನೂ ಶ್ರೀಮತಿ ಗೀತಾ ವಂದಿಸಿದರು.

ವಿದ್ಯಾರ್ಥಿಗಳು ಕನ್ನಡ ರಾಜ್ಯೋತ್ಸವ ಕುರಿತು ಮಾತನಾಡಿದರು. ಪುಟಾಣಿ ವಿದ್ಯಾರ್ಥಿಗಳಿಗೆ ಸಿಹಿಯನ್ನು ಹಂಚಲಾಯಿತು. ಪುಟಾಣಿ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಶಿಕ್ಷಕರ ಹಿತನುಡಿಗಳನ್ನು ಆಲಿಸಿದರು.

# ಸರಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರುಗಳ ಸಾಮಾನ್ಯ ಕೋರಿಕೆ ವರ್ಗಾವಣೆ ಗಣಕೀಕೃತ ವೇಳಾಪಟ್ಟಿಯಂತೆ ಕೌನ್ಸಿಲಿಂಗ್

**ಗದಗ :** 2024-25 ನೇ ಸಾಲಿನ ಸರಕಾರಿ ಪ್ರಾಥಮಿಕ/ ಪ್ರೌಢಶಾಲೆಗಳ ಶಿಕ್ಷಕರು/ ಮುಖ್ಯ ಶಿಕ್ಷಕರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ಚಾಲ್ತಿಯಯಲ್ಲಿದ್ದು, ಜಿಲ್ಲೆಯ ಒಳಗಿನ ಪ್ರಾಥಮಿಕ ಶಾಲಾ ಹಿರಿಯ ಮುಖ್ಯ ಶಿಕ್ಷಕರು/ ಮುಖ್ಯ ಶಿಕ್ಷಕರು/ ಸಹ ಶಿಕ್ಷಕರು/ ದೈಹಿಕ ಶಿಕ್ಷಕರು/ ವಿಶೇಷ ಶಿಕ್ಷಕರುಗಳ ವರ್ಗಾವಣೆಯನ್ನು ಹಾಗೂ ಪ್ರೌಢಶಾಲಾ ಸಹ ಶಿಕ್ಷಕರು/ ದೈಹಿಕ ಶಿಕ್ಷಣ ಶಿಕ್ಷಕರು/ ವಿಶೇಷ ಶಿಕ್ಷಕರುಗಳ ಕೋರಿಕೆ ವರ್ಗಾವಣೆ ಕುರಿತಂತೆ ಪರಿಷ್ಕೃತ ವೇಳಾಪಟ್ಟಿಯಂತೆ ಅಂತಿಮ ಪಟ್ಟಿ ಪ್ರಕಾರ ಕೌನ್ಸಿಲಿಂಗ್ ನಡೆಸಲಾಗುವುದು. ಶಿಕ್ಷಕರು ನಿಗದಿಪಡಿಸಿದ ದಿನಾಂಕದಂದು ನಗರದ ಹಳೆ ಕೋರ್ಟ ಹತ್ತಿರ ಸಮನ್ವಯಾಧಿಕಾರಿಗಳ ಕಚೇರಿಯಲ್ಲಿ ಕೌನ್ಸಿಲಿಂಗ್ ಸಮಯದಲ್ಲಿ ಹಾಜರಿರಲು ತಿಳಿಸಿದೆ.

ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯಿಂದ ಅಂತಿಮ ಪಟ್ಟಿಯಲ್ಲಿರುವ ಎಲ್ಲ ಪ್ರಾಥಮಿಕ ಹಿರಿಯ ಮುಖ್ಯ ಶಿಕ್ಷಕರು/ ಮುಖ್ಯ ಶಿಕ್ಷಕರು / ದೈಹಿಕ ಶಿಕ್ಷಕರು ಮತ್ತು ವಿಶೇಷ ಶಿಕ್ಷಕರು ಕ್ರ.ಸಂ 1 ರಿಂದ 200 ರವರೆಗೆ , ನವೆಂಬರ್ 5 ರಂದು ಬೆಳಿಗ್ಗೆ 9.30 ಗಂಟೆಯಿಂದ ಪ್ರಾಥಮಿಕ ಶಾಲಾ ಸಹ ಶಿಕ್ಷಕರ ವೃಂದ ಜೇಷ್ಠತಾ ಪಟ್ಟಿ ಕ್ರ.ಸಂ.201 ರಿಂದ 500 ರವರೆಗೆ, ನವೆಂಬರ್ 6 ರಂದು ಬೆಳಿಗ್ಗೆ 9.30 ಗಂಟೆಯಿಂದ ಪ್ರಾಥಮಿಕ ಶಾಲಾ ಸಹ ಶಿಕ್ಷಕರ ವೃಂದ ಜೆ.ಪ. ಕ್ರ.ಸಂ.501 ರಿಂದ ಮುಕ್ತಾಯವಾಗುವವರೆಗೆ, ನವೆಂಬರ್ 7 ರಂದು ಬೆಳಿಗ್ಗೆ 9.30 ಗಂಟೆಯಿಂದ ಅಂತಿಮ ಪಟ್ಟಿಯಲ್ಲಿರುವ ಎಲ್ಲ ಪ್ರೌಢ ಶಾಲಾ ವಿಶೇಷ ಶಿಕ್ಷಕರು/ ದೈಹಿಕ ಶಿಕ್ಷಕರು/ ಸಹ ಶಿಕ್ಷಕರ ವೃಂದದ ಕೌನ್ಸಿಲಿಂಗ್ ನಡೆಸಲಾಗುವುದು.

# ಅಕ್ಕ ಪಡೆಗೆ ಗುತ್ತಿಗೆ ಆಧಾರದಡಿ ಮಹಿಳೆಯರ ಆಯ್ಕೆ: ಆಹ್ವಾನ

**ಬಳ್ಳಾರಿ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಅಕ್ಕ ಪಡೆ ಯೋಜನೆಯಡಿ ಗುತ್ತಿಗೆ ಆಧಾರದ ಮೇರೆಗೆ 05 ಮಹಿಳಾ ಎನ್‌ಸಿಸಿ ಕೆಡೆಟ್ಸ್ ಅಭ್ಯರ್ಥಿಗಳ ಆಯ್ಕೆಗಾಗಿ ಅರ್ಹರಿಂದ ಆಹ್ವಾನಿಸಲಾಗಿದೆ.

ಅಪಾಯದಲ್ಲಿರುವ ಅಥವಾ ಸಂಕಷ್ಟದಲ್ಲಿರುವ ದುರ್ಬಲ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣದ ರಕ್ಷಣೆ ನೀಡುವುದು ಅಕ್ಕ ಪಡೆ ಯೋಜನೆಯ ಪ್ರಾಥಮಿಕ ಉದ್ದೇಶವಾಗಿದೆ.

ಸಹಾನುಭೂತಿ ಮತ್ತು ಸಮುದಾಯ ಸೇವೆಯಲ್ಲಿ ಚಾಲಿತವಾಗಿರುವ ಅಕ್ಕ ಪಡೆ ಸಮಾಜದಲ್ಲಿ ಸ್ಪಂದಿಸುವ ಸುರಕ್ಷತಾ ಘಟಕವಾಗಿ ಮತ್ತು ಶೈಕ್ಷಣಿಕ ಶಕ್ತಿಯಾಗಿ ಕಾರ್ಯನಿರ್ವಹಿಸಬಲ್ಲವರು ಅರ್ಹರಾಗಿರುತ್ತಾರೆ.

*ಆಯ್ಕೆ ಮಾನದಂಡ:*

ಎನ್‌ಸಿಸಿ 'ಸಿ' ಸರ್ಟಿಫಿಕೇಟ್ ಹೊಂದಿರುವ 35-45 ವಯೋಮಾನದ ಮಹಿಳಾ ಎನ್‌ಸಿಸಿ ಕೆಡೆಟ್ಸ್ ಅರ್ಹರು. ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ ಪಾಸಾಗಿರಬೇಕು. ದೈಹಿಕ ಸದೃಢತೆ ಹೊಂದಿರಬೇಕು.

ಸ್ಥಳೀಯ ನಿವಾಸಿಗಳಿಗೆ ಆದ್ಯತೆ ನೀಡಲಾಗುವುದು. ಉತ್ತಮ ನಡವಳಿಕೆ ಸಂವಹನ ಕಲೆ, ಕಾರ್ಯದಕ್ಷತೆ ಉಳ್ಳವರಾಗಿರಬೇಕು. ಶಿಫ್ಟ್ ವೇಳೆ ಕೆಲಸ ನಿರ್ವಹಿಸಲು ಸಿದ್ಧರಿರಬೇಕು (7 ರಿಂದ ಸಂಜೆ 8 ರವರೆಗೆ 2 ಪಾಳಿಗಳಲ್ಲಿ ಅಂದರೆ ಬೆಳಿಗ್ಗೆ 7 ರಿಂದ ಮಧ್ಯಾಹ್ನ 2 ರವರೆಗೆ ಮತ್ತು ಮಧ್ಯಾಹ್ನ 2 ರಿಂದ ರಾತ್ರಿ 8 ರವರೆಗೆ).

ಗುತ್ತಿಗೆ ಅವಧಿ 11 ತಿಂಗಳಿಗೆ ಸೀಮಿತವಾಗಿದ್ದು, ಕರ್ತವ್ಯ ನಿರ್ವಹಣೆ ತೃಪ್ತಿಕರವಾಗಿದ್ದಲ್ಲಿ ಸೇವೆಯನ್ನು ಮುಂದುವರೆಸಲಾಗುವುದು.

ಆಸಕ್ತ ಮಹಿಳಾ ಎನ್‌ಸಿಸಿ ಮಹಿಳಾ ಕೆಡೆಟ್ಸ್ ಗಳು ನ.03 ರಿಂದ 10 ರ ವರೆಗೆ ನಗರದ ವಾಲ್ಮೀಕಿ ವೃತ್ತ(ಎಸ್.ಪಿ ವೃತ್ತ) ದ ಬಳಿಯ ದೇವಿನಗರದ ಸ್ತ್ರೀಸೇವಾನಿಕೇತನ ಆವರಣದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಕಚೇರಿಗೆ ಸ್ವ-ವಿವರವುಳ್ಳ ಬಯೋಡೇಟಾ, ಇತ್ತೀಚಿನ ಭಾವಚಿತ್ರ, ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರಗಳು, ಎನ್‌ಸಿಸಿ 'ಸಿ' ಸರ್ಟಿಫಿಕೇಟ್ ಪ್ರಮಾಣ ಪತ್ರ, ಸೇವಾ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಸೇರಿದಂತೆ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ದೃಢೀಕರಿಸಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.7353901862 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗನವಾಡಿ ಕಾರ್ಯಕರ್ತೆ ಗಾಯತ್ರಿ ಹೆಗ್ಡೆಗೆ ಕರ್ನಾಟಕ ಕೇಸರಿ ಪ್ರಶಸ್ತಿ



**ಶಿವಮೊಗ್ಗ:** ಕರ್ನಾಟಕ ನೇತಾಜಿ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಕನ್ನಡ ರಾಜ್ಯೋತ್ಸವದಂದು ನಡೆದ ಕಾರ್ಯಕ್ರಮದಲ್ಲಿ ತೀರ್ಥಹಳ್ಳಿ ತಾಲೂಕಿನ ಯಡಗುಡ್ಡೆ ಅಂಗನವಾಡಿ ಕೇಂದ್ರದಲ್ಲಿ ಕಾರ್ಯಕರ್ತೆಯಾಗಿರುವ ಗಾಯತ್ರಿ ಎನ್. ಹೆಗ್ಡೆ ಇವರಿಗೆ ಕರ್ನಾಟಕ ಕೇಸರಿ ಪ್ರಶಸ್ತಿ ನೀಡಿ ಪುರಸ್ಕರಿಸಲಾಯಿತು. ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ರವಿಕುಮಾರ್ ಉಪಸ್ಥಿತರಿದ್ದರು. ಗಾಯತ್ರಿ ಇವರು ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಫೆಡರೇಷನ್‌ಗೆ ಸತತ ನಾಲ್ಕು ಬಾರಿ ತಾಲೂಕು ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

# 8 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನ

**ಗದಗ :** ಗದಗ ತಾಲೂಕಿನಲ್ಲಿ 2025-2026 ನೇ ಸಾಲಿನ ರಾಷ್ಟ್ರೀಯ ಜಾನುವಾರು ಆರೋಗ್ಯ ಮತ್ತು ರೋಗ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ 8 ನೇ ಸುತ್ತಿನ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ದಿನಾಂಕ 3-11-2025 ರಿಂದ 2-12-2025 ರವರೆಗೆ ಒಂದು ತಿಂಗಳು ನಡೆಯಲಿದೆ. ಈ ಅಭಿಯಾನದಲ್ಲಿ ಗದಗ ತಾಲೂಕಿನ ಎಲ್ಲ ಹಳ್ಳಿಗಳಲ್ಲಿ ನಿಗದಿಪಡಿಸಿದ ದಿನಾಂಕದಂದು ಒಟ್ಟು 55 ಸಿಬ್ಬಂದಿಗಳು ಪಾಲ್ಗೊಂಡು ಎಲ್ಲ ದನ, ಎಮ್ಮೆಗಳಿಗೆ ಕಾಲು ಬಾಯಿ ಬೇನೆ ರೋಗಕ್ಕೆ ಮುಂಜಾಗ್ರತಾ ಕ್ರಮವಾಗಿ ಲಸಿಕೆಯನ್ನು ಮನೆ ಮನೆಗೆ ಬಂದು ಹಾಕಲಾಗುವುದು.

ತಾಲೂಕಿನ ಎಲ್ಲ ರೈತ ಬಾಂಧವರು ತಮ್ಮ ತಮ್ಮ ಜಾನುವಾರುಗಳಿಗೆ ಕಡ್ಡಾಯವಾಗಿ ಲಸಿಕೆ ಹಾಕಿಸಿ , ರೋಗ ನಿಯಂತ್ರಣಕ್ಕೆ ಸಹಕರಿಸಲು ಪಶುಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆಯ ಪಶು ವೈದ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನವೆಂಬರ್ 18 ರಂದು ನೇರ ಸಂದರ್ಶನ

**ಗದಗ :** ಅಂಚೆ ಅಧೀಕ್ಷಕರು ಗದಗ ವಿಭಾಗ, ಗದಗ ರವರು ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ನಿಯುಕ್ತಿಗಾಗಿ ಪ್ರಸ್ತಾಪಿಸಿದ್ದು,
ಅರ್ಹ ಅಭ್ಯರ್ಥಿಗಳುತಮ್ಮ ಇತ್ತೀಚಿನ ಭಾವಚಿತ್ರ ಮತ್ತು ಶೈಕ್ಷಣಿಕ ಪ್ರಮಾಣ ಪತ್ರದ ನಕಲುಗಳೊಂದಿಗೆ ನವೆಂಬರ್ 18 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಎಪಿಎಂಸಿ ಯಾರ್ಡ , ಚೇಂಬರ್ ಆಫ್ ಕಾಮರ್ಸ ಎದುರುಗಡೆ ಇರುವ ಅಂಚೆ ಅಧೀಕ್ಷಕರ ಕಾರ್ಯಾಲಯದಲ್ಲಿ ನಡೆಯಲಿರುವ ನೇರ ಸಂದರ್ಶನಕ್ಕೆ ಹಾಜರಾಗಲು ಸಲ್ಲಿಸಿದೆ.
ಅಭ್ಯರ್ಥಿಗಳು ಹತ್ತನೇ ತರಗತಿ ಉತ್ತೀರ್ಣರಾಗಿದ್ದು ಕಡ್ಡಾಯವಾಗಿ 18 ವರ್ಷ ಮೇಲ್ಪಟ್ಟವರು ಆಗಿರಬೇಕು.
ನಿರುದ್ಯೋಗಿ ಹಾಗೂ ಸ್ವಯಂ ಉದ್ಯೋಗ ನಿರತ ಯುವಕರು,
ವಿಮಾ ಕಂಪನಿಗಳ ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ಮಾಜಿ ಗ್ರಾಮ ಪಂಚಾಯತಿಯ ಸದಸ್ಯರು

## ಜಿಲ್ಲೆಯಲ್ಲಿ ನ.03 ರಿಂದ 19 ರ ವರೆಗೆ ನಡೆಯುವ ಕುಷ್ಠರೋಗ ಪ್ರಕರಣ ಪತ್ತೆಹಚ್ಚುವ ಅಭಿಯಾನಕ್ಕೆ ಪಾಲಿಕೆ ಸದಸ್ಯ ಇಬ್ರಾಹಿಂಬಾಬು ಚಾಲನೆ

# ಕುಷ್ಠರೋಗ ಪ್ರಕರಣ ಪತ್ತೆಹಚ್ಚುವ ಅಭಿಯಾನ ಯಶಸ್ವಿಗೊಳಿಸಲು ಕರೆ

**ಬಳ್ಳಾರಿ:** ಕುಷ್ಠರೋಗವು ಮಾರಣಾಂತಿಕ ಕಾಯಿಲೆಯಲ್ಲ. ಇದು ಗುಣಪಡಿಸುವಂತಹ ಕಾಯಿಲೆಯಾಗಿದ್ದು, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು ಮನೆ ಭೇಟಿ ನೀಡಿದಾಗ ಮನೆಯ ಸದಸ್ಯರೆಲ್ಲರು ಪರೀಕ್ಷಿಸಿಕೊಳ್ಳಬೇಕು ಎಂದು ಮಹಾನಗರ ಪಾಲಿಕೆಯ ಸದಸ್ಯ ಇಬ್ರಾಹಿಂಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಹಾನಗರ ಪಾಲಿಕೆ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ ವಿಭಾಗ ಹಾಗೂ ಮಿಲ್ಲರ್‌ಪೇಟೆ ನಗರ ಆರೋಗ್ಯ ಕೇಂದ್ರ ಬಳ್ಳಾರಿ ಇವರ ಸಂಯುಕ್ತಾಶ್ರಯದಲ್ಲಿ ನಗರದ ಮಿಲ್ಲರ್ ಪೇಟೆಯ ವಾರ್ಡ್ ನಂ.13 ರಲ್ಲಿ ಸೋಮವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ (ನ.03 ರಿಂದ ನ.19 ರವರೆಗೆ 14 ದಿನಗಳ ಕಾಲ) ಕುಷ್ಠರೋಗ ಪತ್ತೆ ಹಚ್ಚುವ ಅಂದೋಲನಾ ಸಮೀಕ್ಷೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ದೇಶದಲ್ಲಿ ಸಾಂಕ್ರಾಮಿಕ ರೋಗಗಳಾದ ಪ್ಲೇಗ್, ಕಾಲಾರಾ ಇನ್ನೂ ಮುಂತಾದ ರೋಗಗಳನ್ನು ನಿರ್ಮೂಲನೆಗೊಳಿಸಿದ್ದೇವೆ. ಕುಷ್ಠರೋಗವನ್ನು ಸಹ 2027 ರೊಳಗೆ ನಿರ್ಮೂಲನೆಗೊಳಿಸಲು ನಾವೆಲ್ಲರೂ ಪಣತೊಡಬೇಕಿದೆ. ಹಾಗಾಗಿ ಆಶಾ ಕಾರ್ಯಕರ್ತೆಯರು ಸಮೀಕ್ಷೆಗೆ ಮನೆಗೆ ಬಂದಾಗ ಅವರಿಗೆ ಸಹಕರಿಸಿ ಸರಿಯಾದ ಮಾಹಿತಿ ನೀಡಬೇಕು. ಪ್ರಾಥಮಿಕ ಹಂತದಲ್ಲೇ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಕುಷ್ಠರೋಗ ಸಾಂಕ್ರಾಮಿಕ ರೋಗವಾಗಿದ್ದು, ಮೈಕೋಬ್ಯಾಕ್ಟೀರಿಯಂ ಲೆಪ್ರೈ ಎಂಬ ರೋಗಾಣುವಿನಿಂದ ಬರುತ್ತದೆ, ಇದು ಚಿಕಿತ್ಸೆ ಪಡೆಯದೇ ಇರುವ ಕುಷ್ಠರೋಗಿಯು ಕೆಮ್ಮಿದಾಗ ಸೀನಿದಾಗ ತುಂತುರು ಹನಿಗಳು ಉಸಿರಾಡುವ ಗಾಳಿಯ ಮೂಲಕ ಒಬ್ಬರಿಂದ ಒಬ್ಬರಿಗೆ ಹರಡುವಂತಹ ರೋಗವಾಗಿದ್ದು, ಪ್ರಾರಂಭಿಕ ಹಂತದಲ್ಲೇ ಪತ್ತೆ ಹಚ್ಚಿ ಚಿಕಿತ್ಸೆ ನೀಡುವುದರಿಂದ ಅಂಗವಿಕಲತೆಯಾಗುವುದನ್ನು ತಪ್ಪಿಸಬಹುದು ಎಂದು ತಿಳಿಸಿದರು.




ಹೊಸದಾಗಿ ಕುಷ್ಠರೋಗ ಪ್ರಕರಣಗಳಿಗೆ ಉಂಟಾಗುವ ಅಂಗವಿಕಲತೆಯನ್ನು 10 ಲಕ್ಷ ಜನಸಂಖ್ಯೆಗೆ ಒಂದಕ್ಕಿಂತ ಕಡಿಮೆ ಮಾಡಲು ಮತ್ತು ಸುಪ್ತ ಕುಷ್ಠರೋಗ ಪ್ರಕರಣಗಳನ್ನು ಅತೀ ಶೀಘ್ರವಾಗಿ ಪತ್ತೆ ಹಚ್ಚಲು ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪ್ರಸ್ತುತ ಜಿಲ್ಲೆಯಲ್ಲಿ 77 ಪ್ರಕರಣಗಳಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಹೇಳಿದರು.

ಆಶಾ ಕಾರ್ಯಕರ್ತೆಯರು ಮತ್ತು ಪುರುಷ ಸ್ವಯಂಸೇವಕರು ಮನೆ-ಮನೆ ಭೇಟಿ ಮಾಡಿ ಮನೆಯಲ್ಲಿರುವ 2 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರನ್ನು ತಪಾಸಣೆ ಮಾಡಿ ಕುಷ್ಠರೋಗದ ಬಗ್ಗೆ ಮಾಹಿತಿ ನೀಡಿ ಶಂಕಿತ ಪ್ರಕರಣಗಳನ್ನು ಪತ್ತೆಹಚ್ಚಿ ವೈದ್ಯಾಧಿಕಾರಿಗಳ ಹತ್ತಿರ ರೆಫರಲ್ ಫಾರಂ ನೀಡಿ ತಪಾಸಣೆ ಮಾಡಿಸಿಕೊಳ್ಳಲು ಕಳುಹಿಸಿಕೊಡುತ್ತಾರೆ. ವೈದ್ಯಾಧಿಕಾರಿಗಳು ತಪಾಸಣೆ ಮಾಡಿ ಕುಷ್ಠರೋಗ ಎಂದು ದೃಢಪಡಿಸಿದ ಮೇಲೆ ಅಗತ್ಯ ಚಿಕಿತ್ಸೆ ನೀಡುತ್ತಾರೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 187327 ಮನೆಗಳು ತಪಾಸಣಾ ಸಮೀಕ್ಷೆಗೆ ಒಳಪಡಿಸಲಾಗಿದ್ದು, ಸಮೀಕ್ಷೆ ಮಾಡಲು 667 ತಂಡಗಳನ್ನು ರಚಿಸಲಾಗಿದೆ. ಒಂದು ತಂಡದಲ್ಲಿ ಆಶಾ ಕಾರ್ಯಕರ್ತೆಯರು ಮತ್ತು ಪುರುಷ ಸ್ವಯಂಸೇವಕರು ಒಳಗೊಂಡಿದ್ದು, ಈ ತಂಡಗಳ ಮೇಲ್ವಿಚಾರಣೆಗೆ 67 ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ ಎಂದರು.


ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಮಹಾತ್ಮ ಗಾಂಧೀಜಿಯವರು ಕಂಡ ಕನಸು "ಕುಷ್ಠರೋಗ ಮುಕ್ತ ಭಾರತ" ನನಸು ಮಾಡಲು ಎಲ್ಲರ ಸಹಕಾರ ಮತ್ತು ಸಹಭಾಗಿತ್ವ ಅವಶ್ಯಕವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕುಷ್ಠರೋಗ ನಿರ್ಮೂಲನೆ ಕುರಿತ ಭಿತ್ತಿಪತ್ರಗಳನ್ನು ಗಣ್ಯರು ಅನಾವರಣಗೊಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಹಾಗೂ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಆರ್.ಅಬ್ದುಲ್ಲಾ, ಮಿಲ್ಲರ್ ಪೇಟೆಯ ವೈದ್ಯಾಧಿಕಾರಿಗಳಾದ ಡಾ.ನವೀನ್ ಕುಮಾರ್, ಡಾ.ಶೋಭ, ಬಿಸಿಲಹಳ್ಳಿಯ ನಮ್ಮ ಕ್ಲಿನಿಕ್ ವೈದ್ಯಾಧಿಕಾರಿ ಡಾ.ಹರೀಶ, ಯುನಾನಿ ವೈದ್ಯಾಧಿಕಾರಿ ಡಾ.ಜೈನುಲ್ಲಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮುಸ್ತಕ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಮಾನಪ್ಪ, ಪಂಪಯ್ಯ ಸೇರಿದಂತೆ ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಕನ್ನಡ ಚಳವಳಿ ಕೇಂದ್ರ ಸಮಿತಿ ಜಿಲ್ಲಾಧ್ಯಕ್ಷ ಶಿವರತನ್ ನೇತೃತ್ವದಲ್ಲಿ ರಾಜ್ಯೋತ್ಸವ ಸಮಾರಂಭ

**ದಾವಣಗೆರೆ :** ನಗರದ ಜಯದೇವ ವೃತ್ತದಲ್ಲಿರುವ ಜಿಲ್ಲಾ ಕನ್ನಡ ಚಳವಳಿ ಕೇಂದ್ರ ಸಮಿತಿ ಕಚೇರಿಯ ಆವರಣದಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ನಂತರ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ಅಖಿಲ ಕರ್ನಾಟಕ ಕನ್ನಡ ಚಳವಳಿ ಕೇಂದ್ರ ಸಮಿತಿ ರಾಜ್ಯ ಉಪಧ್ಯಕ್ಷರಾದ ಟಿ. ಶಿವಕುಮಾರ್ ರವರು ಹಾಗೂ ಮಾಯಕೊಂಡ ಶಾಸಕರಾದ ಬಸವಂತಪ್ಪ ರವರು ಸೇರಿ ಧ್ವಜಾರೋಹಣವನ್ನು ನೆರವೇರಿಸಿದರು.



ಮುಂದುವರೆದು ಮಾತನಾಡುತ್ತಾ ಕನ್ನಡ ನುಡಿ ನಾಡಿನ ಸಮಸ್ಯೆ ಬಂದಾಗ ಎಲ್ಲ ಕನ್ನಡಪರ ಸಂಘಟನೆಗಳು ಒಟ್ಟಾಗಿ ಹೋರಾಟಕ್ಕಿಳಿದು ಕನ್ನಡದ ಅಸ್ತಿತ್ವವನ್ನು ಕಾಪಾಡಬೇಕೆಂದು ಕರೆ ನೀಡಿದರು.

ಜಿಲ್ಲಾ ಕನ್ನಡ ಚಳವಳಿ ಕೇಂದ್ರ ಸಮಿತಿ ಜಿಲ್ಲಾಧ್ಯಕ್ಷರಾದ ಶಿವರತನ್ ಮಾತನಾಡಿ ಇದೇ ನವೆಂಬರ್ 21 ರಂದು ವಿಶ್ವ ದಾಖಲೆಯತ್ತ ದಾವಣಗೆರೆ ಕನ್ನಡೋತ್ಸವ ಎಂಬ ವಿನೂತನ ಅದ್ದೂರಿ ಕಾರ್ಯಕ್ರಮದ ಬಗ್ಗೆ ವಿವರಿಸಿದರು.

ಕೆ.ಡಿ. ಡ್ಯಾನ್ಸ್ ಕಂಪನಿಯಿಂದ ಕನ್ನಡದ ವಿವಿಧ ಗೀತೆಗಳಿಗೆ ಮಕ್ಕಳು ಹೆಜ್ಜೆ ಹಾಕಿ ನೃತ್ಯ ಪ್ರದರ್ಶನವನ್ನು ನೀಡಿ ರಂಜಿಸಿದರು.

ಜಯದೇವ ವೃತ್ತದ ಸುತ್ತಲೂ ಕನ್ನಡದ ಬಾವುಟ ರಾರಾಜಿಸುತ್ತಿದ್ದವು, ಕಾರ್ಯಕ್ರಮದಲ್ಲಿ ಸಾರ್ವಜನಿಕರು, ಮಕ್ಕಳು, ಪೋಷಕ ವರ್ಗದವರು ಹಾಗೂ ಅನೇಕ ಕನ್ನಡ ಪರ ಸಂಘಟನೆಗಳ ಹೋರಾಟಗಾರರು ಎಲ್ಲರೂ ಸೇರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಈ ಕಾರ್ಯಕ್ರಮದಲ್ಲಿ ಕನ್ನಡ ಚಳವಳಿ ಹೋರಾಟಗಾರರಾದ ಜಿ.ನಾ. ಕು. ಪ್ರಶಸ್ತಿ ಪುರಸ್ಕೃತರಾದ ಐರಾಣಿ ಬಸವರಾಜ್, ಮಾಜಿ ನಗರಸಭಾ ಅಧ್ಯಕ್ಷರಾದ ಕೆ. ಜಿ.ಶಿವಕುಮಾರ್. ಆದಾಪುರ ನಾಗಣ್ಣ, ದಾ.ಹ ಶಿವಕುಮಾರ್, ಶಮಂತ ಕುಮಾರ್, ಪರಿಸರ ಸಂರಕ್ಷಣೆ ವೇದಿಕೆ ಗಿರೀಶ್ ದೇವರಮನೆ, ವಾರ್ತಾ ಇಲಾಖೆ ನಿವೃತ್ತ ನೌಕರ ಬಿ.ಎಸ್. ಬಸವರಾಜ್, ದಾವಣಗೆರೆ ಜಿಲ್ಲಾ ಛಾಯಾಗ್ರಾಹಕರ ಸಂಘದ ನಿರ್ದೇಶಕರಾದ.ಡಿ.ಬಿ. ಶಶಿಕುಮಾರ್ , ಸಂತೋಷ್, ವಿಜಯ್ ಸುರೇಶ್, ನವೀನ್, ಪ್ರಶಾಂತ್ ಹಾಗೂ ಅನೇಕರು ಭಾಗವಹಿಸಿದ್ದರು

# ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದಿಂದ ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಗದಗ :** ಕರ್ನಾಟಕ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ನಿಗಮದಿಂದ 2025-26 ನೇ ಸಾಲಿನ ಸಾಲ/ ಸಹಾಯಧನ ಯೋಜನೆಗಳಲ್ಲಿ ಸೌಲಭ್ಯ ಒದಗಿಸಲು ನಿಗಮದ ಅಂತರ್ಜಾಲ https:kccdclonline.karnataka.gov.in ರಲ್ಲಿ ಅರಿವು ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯದಲ್ಲಿ ಉನ್ನತ ಶಿಕ್ಷಣಕ್ಕಾಗಿ ಬಡ್ಡಿ ರಹಿತ ಸಾಲ, ಸ್ವಾವಲಂಬಿ ಸಾರಥಿ ಯೋಜನೆ, ಶ್ರಮಶಕ್ತಿ ಸಾಲ ಯೋಜನೆ, ಶ್ರಮಶಕ್ತಿ ವಿಶೇಷ ಮಹಿಳಾ ಸಾಲ ಯೋಜನೆ, ವೃತ್ತಿ ಪ್ರೋತ್ಸಾಹ ಯೋಜನೆ, ಗಂಗಾ ಕಲ್ಯಾಣ ಯೋಜನೆ, ನೇರ ಸಾಲ ಯೋಜನೆ, ಕ್ರೈಸ್ತ ಸಮುದಾಯದ ಮಹಿಳಾ ಸ್ವ ಸಹಾಯ ಗುಂಪುಗಳಿಗೆ ಸಹಾಯಧನ ಯೋಜನೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.2025-26 ನೇ ಸಾಲಿನ ವಿವಿಧ ಯೋಜನೆಗಳಿಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ನಿಗಮದ ಅಂತರ್ಜಾಲ https:kccdclonline.karnataka.gov.in ಮೂಲಕ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಕೊನೆಯ ನವೆಂಬರ್ 30 ಕೊನೆಯ ದಿನ.

## ಯುವಜನೋತ್ಸವ

**ಚಿಕ್ಕಮಗಳೂರು:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ನೆಹರೂ ಯುವ ಕೇಂದ್ರದ ಸಹಯೋಗದಲ್ಲಿ ಅಕ್ಟೋಬರ್ 28 ರಂದು ನಿಗದಿಪಡಿಸಲಾಗಿದ್ದ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಮುಂದೂಡಿ ನವೆಂಬರ್ 4 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಕುವೆಂಪು ಕಲಾ ಮಂದಿರದಲ್ಲಿ ಆಯೋಜಿಸಲಾಗಿದೆ.ಜಿಲ್ಲೆಯ ಎಲ್ಲ ತಾಲ್ಲೂಕುಗಳ ಯುವಜನರಿಗೆ ಜನಪದ ನೃತ್ಯ, ಜನಪದ ಗೀತೆ, ಕಥೆ ಬರೆಯುವುದು, ಕವಿತೆ ಬರೆಯುವುದು, ಘೋಷಣೆ, ಚಿತ್ರಕಲೆ, ವಿಜ್ಞಾನ ಮೇಳ ಸ್ಪರ್ಧೆಗಳಲ್ಲಿ ಭಾಗವಹಿಸುವ ಅವಕಾಶವಿದೆ. 15 ರಿಂದ 29ರ ವಯೋಮಿತಿಯ ಎಲ್ಲ ಯುವಕ, ಯುವತಿಯರು ಈ ಸ್ಪರ್ಧಾ ಕಾರ್ಯಕ್ರಮದಲ್ಲಿ ಮುಕ್ತವಾಗಿ ಭಾಗವಹಿಸಬಹುದು. ಆಸಕ್ತ ಯುವಜನರು ತಮ್ಮ ಹೆಸರು,ವಿವರಗಳೊಂದಿಗೆ ನವೆಂಬರ್ 4 ರಂದು ಬೆಳಿಗ್ಗೆ 9.30 ಗಂಟೆಯೊಳಗೆ ಕುವೆಂಪು ಕಲಾ ಮಂದಿರದಲ್ಲಿ ವರದಿ ಮಾಡಿಕೊಳ್ಳಲು ಕೋರಲಾಗಿದೆ. ವಿಜೇತರಿಗೆ ಪಾರಿತೋಷಕ, ಪ್ರಶಸ್ತಿ ಪತ್ರ ಹಾಗೂ ನಗದು ಬಹುಮಾನವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗೆ ಕಚೇರಿ ವೇಳೆಯಲ್ಲಿ (ದೂರವಾಣಿ ಸಂಖ್ಯೆ:–08262–295724) ಸಂಪರ್ಕಿಸಬಹುದು. ವಿಜ್ಞಾನ ಮೇಳಕ್ಕೆ ಸಂಪರ್ಕಿಸಬೇಕಾದ ಸಂಖ್ಯೆ: 7892442286 ಹಾಗೂ ಚಿತ್ರಕಲೆ ಸ್ಪರ್ಧೆಗೆ ಸಂಪರ್ಕಿಸಬೇಕಾದ ಸಂಖ್ಯೆ: 6360448844 ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ

**ಚಿತ್ರದುರ್ಗ:** ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಾಗೂ ಶೈಕ್ಷಣಿಕವಾಗಿ ಪ್ರೋತ್ಸಾಯಿಸಲು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ/ನಂತರದ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.2025–26ನೇ ಸಾಲಿಗೆ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಲು "ವಿದ್ಯಾರ್ಥಿ ವೇತನ ಅಭಿಯಾನ" ಕಾರ್ಯಕ್ರಮವನ್ನು ಚಿತ್ರದುರ್ಗ ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಅಭಿಯಾನ ಕಾರ್ಯಕ್ರಮದಲ್ಲಿ ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಇಲಾಖಾ ಅಂತರ್ ಜಾಲದಲ್ಲಿ ಲಿಂಕ್ ಬಳಸಿ ಅರ್ಜಿಗಳನ್ನು ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಗ್ರೇಡ್–1 ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಆರಗ ಪುರಂದರದಾಸರ ಹುಟ್ಟೂರಿನ ಹೆಮ್ಮೆ ಆಗುವುದ್ಯಾವಾಗ?

ಶ್ರೀ ಆದಿಚುಂಚನಗಿರಿ ಶಾಖ ಮಠದ 35ನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ನವೆಂಬರ್ 4ರಂದು ತೀರ್ಥಹಳ್ಳಿ ತಾಲೂಕಿನ ಆರಗದಲ್ಲಿ ಪುರಂದರದಾಸರ ಕೀರ್ತನೋತ್ಸವ ಆಯೋಜಿಸಿರುವುದು ಸಂತಸದ ಸಂಗತಿ. ಆದರೆ ಈ ಕೀರ್ತನೋತ್ಸವ ಕೇವಲ ಶ್ರೀಮಠದ ವಾರ್ಷಿಕೋತ್ಸವದ ಆಚರಣೆಗಷ್ಟೇ ಸೀಮಿತಗೊಳ್ಳದೆ ಪುರಂದರದಾಸರ ಹುಟ್ಟಿನ ಸ್ಥಳ ಈ ಹಿಂದಿನ ಆರಗ ಪ್ರಾಂತ್ಯ ಎಂಬ ಬಗ್ಗೆ ಸರ್ಕಾರ ಅಧಿಕೃತವಾಗಿ ಘೋಷಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯನ್ನಿಡಲಿ ಎಂಬ ಆಶಯದೊಂದಿಗೆ ಈ ಲೇಖನ...

ಕರ್ನಾಟಕ ಸಂಗೀತದ ಪಿತಾಮಹ, ದಾಸವರೇಣ್ಯ ಪುರಂದರದಾಸರ ಹುಟ್ಟೂರಿನ ಬಗ್ಗೆ ಇಂದಿಗೂ ಜಿಜ್ಞಾಸೆ, ಚರ್ಚೆ ಮತ್ತು ಗೊಂದಲಗಳಿವೆ. ಮಹಾರಾಷ್ಟ್ರದ ಪುರಂದರಗಡ ಪುರಂದರರ ಹುಟ್ಟೂರು ಎಂದು ಪರಿಗಣಿಸಲ್ಪಟ್ಟಿದೆ. ಆದರೆ ಊರಿನ ಹೆಸರಿನೊಂದಿಗೆ ಪುರಂದರ ಸೇರಿರುವುದನ್ನು ಬಿಟ್ಟರೆ ಇದನ್ನು ಸಾಬೀತು ಪಡಿಸುವ ದಾಖಲೆಗಳಿಲ್ಲ. ಪುರಂದರರು ತಮ್ಮ ಕೀರ್ತನೆಗಳಲ್ಲಿ ಬಳಸಿರುವ ಭಾಷೆಯನ್ನು ಗಮನಿಸಿದರೆ ಅವರು ಮಹಾರಾಷ್ಟ್ರ ಮೂಲದವರಲ್ಲ ಎಂಬುದು ಮೇಲ್ನೋಟಕ್ಕೆ ಖಚಿತವಾಗುತ್ತದೆ.

ಊರುಗಳ ಹೆಸರು, ಕೆಲವು ಐತಿಹ್ಯಗಳು, ಕೀರ್ತನೆಗಳಲ್ಲಿ ಬಳಸಿರುವ ಭಾಷೆ, ದಾಸ ಸಾಹಿತ್ಯದ ಪರಂಪರೆಯ ಆಧಾರದ ಮೇಲೆ ತೀರ್ಥಹಳ್ಳಿ ತಾಲೂಕಿನ ಆರಗ ಪ್ರಾಂತ್ಯ ಪುರಂದರದಾಸರ ಹುಟ್ಟೂರು ಎಂಬ ವಾದವಿದೆ. ಇದಕ್ಕೆ ಪೂರಕವೆಂಬಂತೆ ಆರಗ ಸುತ್ತಮುತ್ತ ಇರುವ ಕೆಲವು ಊರುಗಳು, ದೇವಸ್ಥಾನಗಳು, ಐತಿಹ್ಯಗಳು ಪುರಂದರರ ಹುಟ್ಟೂರು ಆರಗ ಪ್ರಾಂತ್ಯದ ಕ್ಷೇಮಪುರ ಎಂಬುದಕ್ಕೆ ಪುಷ್ಟಿ ನೀಡುವಂತಿವೆ.

ಪುರಂದರದಾಸರು 1484ರಲ್ಲಿ ಜನಿಸಿ, 1564ರಲ್ಲಿ ಕಾಲವಾದರು. ಇವರ ಕೀರ್ತನೆಗಳಲ್ಲಿನ ಭಾಷೆಯ ಆಧಾರದಿಂದ ನೋಡಿದರೆ ಪುರಂದರದಾಸರು ಉತ್ತರ ಕರ್ನಾಟಕ ಭಾಗದವರಿರಬಹುದು ಎಂದು ಸಂಶೋಧಕ ಪಾಂಡುರಂಗರಾವ್ ದೇಸಾಯಿ ಹೇಳಿದ್ದಾರೆ. ಇದನ್ನು ಅಲ್ಲಗಳೆದಿರುವ ಖ್ಯಾತ ಸಂಶೋಧಕ ಕಪಟರಾಳ ಕೃಷ್ಣರಾಯರು, ಹರಿದಾಸ ಪರಂಪರೆ ಅಂದಿನ ಆರಗ ರಾಜ್ಯದಲ್ಲಿ ಮೊಟ್ಟಮೊದಲು ಉಗಮವಾಯಿತು ಎಂಬುದಕ್ಕೆ ಅನೇಕ ಪುರಾವೆಗಳನ್ನು ನೀಡಿದ್ದಾರೆ.

ಆ ಕಾಲಕ್ಕೆ ರಾಜಧಾನಿಯಾಗಿದ್ದ ಆರಗ ಪ್ರಾಂತ್ಯ ಪ್ರಮುಖ ವ್ಯಾಪಾರ ಕೇಂದ್ರವೂ ಆಗಿತ್ತು. ಅಂದು ವ್ಯಾಪಾರ ವಹಿವಾಟು ನಡೆಯುತ್ತಿದ್ದ ವರ್ತಕರ ಕೇರಿಯೇ ಕಾಲಕ್ರಮೇಣ ವರ್ತೇಕೇರಿ ಎಂದು ಮಾರ್ಪಾಡಾಗಿದೆ. ವರ್ತೇಕೇರಿ ಎಂಬ ಊರು ಕೂಡ ಸಮೀಪದಲ್ಲೇ ಇದೆ. ವಿಠಲಗುಂಡಿ, ಕಾಳಮ್ಮನಗುಡಿ, ದಾಸರಿಗೆ ಉಂಬಳಿ ನೀಡಿದ್ದ ಗದ್ದೆಗಳಿಂದ ಮಾರ್ಪಾಡಾದ ದಾಸನಗದ್ದೆ ಎಂಬ ಊರುಗಳೂ ಇವೆ.

ಪುರಂದರದಾಸರು ಎಲ್ಲಿಯೂ ತಮ್ಮ ಹುಟ್ಟೂರಿನ ಗುಟ್ಟು ಬಿಟ್ಟುಕೊಟ್ಟಿಲ್ಲವಾದರೂ ಅವರ ಹುಟ್ಟೂರಿನ ಬಗ್ಗೆ ಹಲವು ವರ್ಷಗಳಿಂದ ಚರ್ಚೆ ನಡೆಯುತ್ತಿದೆ. ಹಿರಿಯ ಪತ್ರಕರ್ತರಾದ ಆರಗ ರವಿ ಅವರು 2012ರಲ್ಲಿ ವರದಿಯ ಮೂಲಕ ಪುರಂದರದಾಸರ ಹುಟ್ಟೂರು ಮಲೆನಾಡು ಪ್ರಾಂತ್ಯವೇ ಆಗಿರಬೇಕು ಎಂಬ ಬಗ್ಗೆ ಬೆಳಕು ಚೆಲ್ಲಿದ್ದರು.



2016ರಲ್ಲಿ 'ಪುರಂದರರ ಹುಟ್ಟೂರು ಮಲೆಸೀಮೆ?' ಶೀರ್ಷಿಕೆಯಲ್ಲಿ ಹಲವು ಐತಿಹ್ಯ, ಕೀರ್ತನೆಗಳಲ್ಲಿ ಬರುವ ಮಲೆನಾಡು ಭಾಗದಲ್ಲಿ ಮಾತ್ರ ಪ್ರಚಲಿತದಲ್ಲಿರುವ ಪದಗಳು, ಊರುಗಳು, ಐತಿಹಾಸಿಕ ಮಾಹಿತಿಯೊಂದಿಗೆ ವಿಸ್ತೃತ ವರದಿ ಪ್ರಕಟಿಸಿ ಗಮನ ಸೆಳೆದಿದ್ದರು. ಅಂದಿನ ಸರ್ಕಾರ ಮತ್ತು ಸಚಿವರಿಗೆ ಪತ್ರ ಬರೆದು ಆರಗ ಪ್ರಾಂತ್ಯಕ್ಕೆ ಪುರಂದರದಾಸರ ಹುಟ್ಟೂರಿನ ಹೆಮ್ಮೆ ತಂದು ಕೊಡಲು ದಶಕಗಳಿಂದಲೂ ನಿರಂತರವಾಗಿ ಪ್ರಯತ್ನಿಸುತ್ತಲೇ ಬರುತ್ತಿದ್ದಾರೆ.

ತೀರ್ಥಹಳ್ಳಿ ಕ್ಷೇತ್ರದ ಮಾಜಿ ಶಾಸಕರಾದ ಪಟಮಕ್ಕಿ ರತ್ನಾಕರ್ ಆರಗ ಪ್ರಾಂತ್ಯ ಪುರಂದರದಾಸರ ಜನ್ಮಸ್ಥಳ ಎಂಬುದು ಸಾಬೀತಾಗಬೇಕೆಂದು ಬಯಸಿ ಈ ನಿಟ್ಟಿನಲ್ಲಿ ಕ್ರಮ ವಹಿಸಿದ್ದರು. ತೀರ್ಥಹಳ್ಳಿಯಲ್ಲಿ ಪುರಂದರ ವೇದಿಕೆಯಿಂದ ಪ್ರತಿವರ್ಷ ಕಾರ್ಯಕ್ರಮ ಆಯೋಜಿಸುತ್ತಿದ್ದ ಹಿರಿಯ ಸಹಕಾರಿ ಧುರೀಣ ಬಿ.ಎಸ್.ವಿಶ್ವನಾಥನ್, ಮಾಜಿ ಶಾಸಕ ಕೋಣಂದೂರು ಲಿಂಗಪ್ಪ ಮತ್ತಿತರರು ಈ ಬಗ್ಗೆ ಆಸ್ಥೆ ವಹಿಸಿ ಪುರಂದರರ ಹುಟ್ಟೂರಿನ ಬಗ್ಗೆ ಸಂಶೋಧನೆ ನಡೆಸುವಂತೆ ಸರಕಾರದ ಮೇಲೆ ಒತ್ತಡ ಹೇರಿದ್ದರು.

ಅಂದಿನ ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ಅವರ ಸೂಚನೆಯಂತೆ ಹಂಪಿ ವಿವಿ ಕುಲಪತಿ ಡಾ.ಮಲ್ಲಿಕಾ ಎಸ್.ಘಂಟಿ ವಿಶೇಷ ಆಸಕ್ತಿ ವಹಿಸಿ, ಗಾನ ಕಲಾಭೂಷಣ ಆರ್.ಕೆ.ಪದ್ಮನಾಭ ಅವರ ಅಧ್ಯಕ್ಷತೆಯಲ್ಲಿ 5 ವಿದ್ವಾಂಸರ ಸಮಿತಿ ರಚಿಸಿದದರು. ಅರಳುಮಲ್ಲಿಗೆ ಪಾರ್ಥಸಾರಥಿ, ಮಾಜಿ ಸಚಿವೆ ಲೀಲಾದೇವಿ ಆರ್.ಪ್ರಸಾದ್, ವಿವಿಯ ನಾಮ ನಿರ್ದೇಶಿತ ತಜ್ಞರಾದ ಪ್ರೊ.ವೀರಣ್ಣ ರಾಜೂರ, ಪ್ರೊ.ಎ.ವಿ.ನಾವುಡ ಸದಸ್ಯರಾಗಿದ್ದರು.

ಈ ಸಮಿತಿ ಪುರಂದರದಾಸರ ಹುಟ್ಟೂರು ಆರಗ ಪ್ರಾಂತ್ಯ ಎಂದು 2018ರಲ್ಲೇ ಸರ್ಕಾರಕ್ಕೆ ವರದಿ ಸಲ್ಲಿಸಿತು. ಆಶ್ಚರ್ಯಕರವೆಂದರೆ ಆನಂತರ ಯಾವ ಬೆಳವಣಿಗೆಗಳೂ ಆಗಲಿಲ್ಲ. ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಮುದ್ರಣಗೊಂಡ ಕರ್ನಾಟಕ ದರ್ಶನದ ನಾಲ್ಕು ಸಂಪುಟಗಳಲ್ಲಿ ಪುರಂದರರ ಹುಟ್ಟೂರು ಆರಗ ಪ್ರಾಂತ್ಯ ಎಂದು ಉಲ್ಲೇಖಿಸಲಾಗಿದೆ.

ಆದರೆ ಪುರಂದರದಾಸರ ಹುಟ್ಟೂರಿನ ಹೆಮ್ಮೆ ಅಧಿಕೃತವಾಗಿ ರಾಜ್ಯಕ್ಕೆ ಅದರಲ್ಲೂ ಮಲೆನಾಡಿಗೆ ಪ್ರಾಪ್ತಿಯಾಗಿಲ್ಲ. ಇಂತಹ ಸಂದರ್ಭದಲ್ಲಿ ನವೆಂಬರ್ 4ರಂದು ಆರಗದಲ್ಲಿ ಪುರಂದರದಾಸರ ಕೀರ್ತನೋತ್ಸವ ಆಯೋಜಿಸಿರುವುದು ಅತ್ಯಂತ ಮಹತ್ವದ್ದಾಗಿದೆ. ಆದರೆ ಈ ಕಾರ್ಯಕ್ರಮವು ಕೇವಲ ಒಂದು ದಿನಕ್ಕಷ್ಟೇ ಸೀಮಿತವಾಗದೆ ಪುರಂದರದಾಸರ ಹುಟ್ಟೂರಿನ ಬಗ್ಗೆ ಹಂಪಿ ವಿವಿಯ ಸಮಿತಿ ಸಲ್ಲಿಸಿರುವ ವರದಿ ಪರಿಶೀಲಿಸಿ ಅಧಿಕೃತ ಘೋಷಣೆ ಮಾಡುವ ನಿಟ್ಟಿನಲ್ಲಿ ನಾಂದಿ ಹಾಡಲಿ. ಸರ್ಕಾರ ಪುರಂದರದಾಸರ ಪ್ರಾಧಿಕಾರ ರಚಿಸಿ ನಿರಂತರ ಚಟುವಟಿಕೆಗಳು ನಡೆಯುವಂತೆ ಕ್ರಮ ಕೈಗೊಳ್ಳವಂತಾಗಲಿ ಎಂಬುವುದೇ ಆಶಯವಾಗಿದೆ.



ಬಿ. ವರಲಕ್ಷ್ಮಿ ಪ್ರಕಾಶ್, ಸದಸ್ಯರು,
ಜಿಲ್ಲಾ ಧಾರ್ಮಿಕ ಪರಿಷತ್,
ಹಿಂದೂ ಧಾರ್ಮಿಕ ಹಾಗೂ ಧರ್ಮಾದಾಯ ದತ್ತಿಗಳ ಇಲಾಖೆ, ಶಿವಮೊಗ್ಗ.
ಮೊ:6366091445

# ರೈತರಿಗೆ ಕೃಷಿ ಯಂತ್ರೋಪಕರಣದಲ್ಲಿ ಹೊಸ ಕ್ರಾಂತಿ ಸೃಷ್ಟಿಸಲು ಬದ್ಧ : ರಾಘವೇಂದ್ರ ಪಿ.ಎಂ.




**ತುಮಕೂರು:** ಇತ್ತೀಚಿನ ದಿನಗಳಲ್ಲಿ ರೈತರ ವಿಶ್ವಾಸ ಮತ್ತು ನಿರಂತರ ಬೆಂಬಲಕ್ಕಾಗಿ ಉತ್ಪನ್ನಗಳು ಮತ್ತು ಸೇವೆಗಳ ಮೂಲಕ ಕೃಷಿಯನ್ನು ಹೆಚ್ಚು ಪರಿಣಾಮಕಾರಿಯಾಗಿದೆ. ರೈತರು ಮತ್ತು ಲ್ಯಾಂಡ್ ಸ್ಕೇಪರ್‌ಗಳ ಕಾರ್ಯವನ್ನು ಸುಲಭಗೊಳಿಸಿ ಉತ್ಪಾದಕತೆಯನ್ನು ಹೆಚ್ಚಿಸುವ ಮೂಲಕ "ಶಕ್ತಿಶಾಲಿ ಮತ್ತು ದೀರ್ಘಕಾಲಿಕ ಸಾಧನಗಳನ್ನು ರೈತರಿಗೆ ಒದಗಿಸುವಂತೆ ಬದ್ಧವಾಗಿದೆ" ಎಂದು ಸ್ಟೀಲ್ ಇಂಡಿಯಾ ಮಾರಾಟ ನಿರ್ದೇಶಕರಾದ ರಾಘವೇಂದ್ರ ಪಿ.ಎಂ.ರವರು ತಿಳಿಸಿದರು.

ನಗರದ ಜೆ.ಸಿ.ರಸ್ತೆಯ ವಿನಾಯಕ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ "ಸ್ಟೀಲ್ ಇಂಡಿಯಾ ಮತ್ತು ಶ್ರೀರಂಗನಾಥ ಅಗ್ರಿ ಮಾರ್ಟ್‌ನ" ವತಿಯಿಂದ ನ.1 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ "ರೈತರಿಗೆ ರಾಷ್ಟ್ರಮಟ್ಟದ ಸ್ಕ್ರ್ಯಾಚ್ ಮತ್ತು ವಿನ್ ಬಹುಮಾನ ವಿತರಣಾ" ಹಾಗೂ ಕನ್ನಡ ರಾಜ್ಯೋತ್ಸವದ ಕರುನಾಡಿನ ರೈತರನ್ನು ಸನ್ಮಾನಿಸಿ ಗೌರವಿಸಿ ಸನ್ಮಾನಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ರಾಘವೇಂದ್ರ ಪಿ.ಎಂ.ರವರು ಮಾತನಾಡುತ್ತಾ ಸ್ಕ್ರ್ಯಾಚ್ ಮತ್ತು ವಿನ್ ಬಹುಮಾನವು ಇದೇ ತಿಂಗಳ ನ.30 ರವರೆಗೆ ವಿಸ್ತರಿಸಲಾಗಿದೆ. ಆದ್ದರಿಂದ ರೈತರಿಗೆ ಹೆಚ್ಚು–ಹೆಚ್ಚು ಅರಿವು ಮೂಡಿಸಬೇಕು ಎನ್ನುತ್ತಾ, ಸ್ಟೀಲ್ ಕಂಪನಿಯ ಎಲೆಕ್ಟ್ರಿಕ್, ಬ್ಯಾಟರಿ ಮತ್ತು ಎಂ.ಹೆಚ್.ವೀಡರ್ ಉತ್ಪನ್ನಗಳ ಮೇಲೆ ಅನ್ವಯಿಸುತ್ತದೆ. ರೈತರು ಈ ಆಕರ್ಷಕ ಬಹುಮಾನಗಳನ್ನು ಗೆಲ್ಲುವ ಅವಕಾಶಗಳ ಜೊತೆಗೆ ಸ್ಟೀಲ್ ಇಂಡಿಯಾ ವಿಶ್ವಪ್ರಸಿದ್ಧ ಜರ್ಮನ್ ಇಂಜಿನಿಯರಿಂಗ್‌ನ ಅನುಭವವನ್ನೂ ಪಡೆಯಬಹುದು. ಸ್ಟೀಲ್ ಇಂಡಿಯಾ ದೇಶದಾದ್ಯಂತ ಕೃಷಿ ಯಂತ್ರೋಪಕರಣದಲ್ಲಿ ಹೊಸ ಕ್ರಾಂತಿಯನ್ನು ಸೃಷ್ಟಿಸಿದೆ.

ಇದೇ ಸಂದರ್ಭದಲ್ಲಿ ಸ್ಟೀಲ್ ಇಂಡಿಯಾ ದಕ್ಷಿಣ ವಿಭಾದ ಮುಖ್ಯಸ್ಥರಾದ ಸಂಜಯ್ ವರ್ಮಾರವರು ಮಾತನಾಡುತ್ತಾ ಕನ್ನಡ ರಾಜ್ಯೋತ್ಸವ ದಿನದಲ್ಲಿ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಪವರ್ ಟೂಲ್ ಮತ್ತು ರೈತರ ಕೃಷಿ ಯಂತ್ರೋಪಕರಣಗಳನ್ನು ವಿವಿಧ ಕ್ಷೇತ್ರದ ಜಾಗತಿಕ ಮಟ್ಟದ ಸ್ಟೀಲ್ ಇಂಡಿಯಾ ಮತ್ತು ಶ್ರೀರಂಗನಾಥ ಅಗ್ರಿ ಮಾರ್ಟ್ ಇವರುಗಳ ಸಹಯೋಗದೊಂದಿಗೆ ರೈತರಿಗಾಗಿ ಸ್ಟೀಲ್ ಕಂಪನಿಯ ವತಿಯಿಂದ ಸ್ಕ್ರ್ಯಾಚ್ ಮಾಡಿ ಗೆಲ್ಲಿರಿ ಧ್ಯೇಯವಾಕ್ಯದಲ್ಲಿ ರೈತರಿಗೆ ವಿಶೇಷವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಗ್ರ್ಯಾಂಡ್ ಪ್ರೈಜ್ ವಿಜೇತರಾದ ಬ್ಯಾಟರಂಗಯ್ಯರವರು ಮಾತನಾಡುತ್ತಾ ಸ್ಟೀಲ್ ಇಂಡಿಯಾ ಮತ್ತು ಶ್ರೀರಂಗನಾಥ ಅಗ್ರಿ ಮಾರ್ಟ್ ಇವರುಗಳು ರೈತರಿಗೆ ಆಧುನಿಕ ಕೃಷಿ ಪರಿಹಾರಗಳನ್ನು ಒದಗಿಸಲು ಅಮೂಲ್ಯ ಸೇವೆಯನ್ನು ನೀಡುತ್ತಿದ್ದಾರೆ. ಕನ್ನಡ ರಾಜ್ಯೋತ್ಸವದಂದು ಆಕರ್ಷಕ ಬಹುಮಾನಗಳನ್ನ ಎಲೆಕ್ಟ್ರಿಕ್ ಸ್ಕೂಟರ್, ಸ್ಟೀಲ್ ಎಂಹೆಚ್–710 ಪವರ್ ವೀಡರ್, ಓಲಾ ಸ್ಕೂಟರ್ ಗೆದ್ದ ಸಂತೋಷವನ್ನು ಹಂಚಿಕೊಂಡರು.

ಇದೇ ಸಂದರ್ಭದಲ್ಲಿ ಶ್ರೀರಂಗನಾಥ ಅಗ್ರಿ ಹೌಸ್ ಮಾಲೀಕರಾದ ಶಶಿಧರ ಬಿ.ಆರ್.ರವರು ಮಾತನಾಡುತ್ತಾ ರೈತರಿಗೆ ಅತ್ಯುತ್ತಮ ಗುಣಮಟ್ಟದ ಸಾಧನಗಳನ್ನು ಒದಗಿಸಲು ಕಂಪನಿಯೂ ಬದ್ಧತೆಯನ್ನು ಪ್ರತಿಬಿಂಬಿಸಿದೆ ಎಂದು ವಿವರಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಸ್ಟೇಟ್ ಹೆಡ್ ಶರತ್‌ಶೆಟ್ಟಿ, ದಯಾನಂದ್ ಹಾಗೂ ತುಮಕೂರು ಮತ್ತು ವಿವಿಧ ಜಿಲ್ಲೆಗಳಿಂದ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಫೋಟೋ ಕ್ಯಾಪ್ಷನ್:

ನಗರದ ಜೆ.ಸಿ.ರಸ್ತೆಯ ವಿನಾಯಕ ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಸ್ಟೀಲ್ ಇಂಡಿಯಾ ಮತ್ತು ಶ್ರೀರಂಗನಾಥ ಅಗ್ರಿ ಮಾರ್ಟ್ ವತಿಯಿಂದ ನ.1 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ "ರೈತರಿಗೆ ರಾಷ್ಟ್ರಮಟ್ಟದ ಸ್ಕ್ರ್ಯಾಚ್ ಮತ್ತು ವಿನ್ ಬಹುಮಾನ ವಿತರಣಾ" ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಸ್ಟೀಲ್ ಇಂಡಿಯಾ ಮಾರಾಟ ನಿರ್ದೇಶಕರಾದ ರಾಘವೇಂದ್ರ ಪಿ.ಎಂ, ಸ್ಟೀಲ್ ಇಂಡಿಯಾ ದಕ್ಷಿಣ ವಿಭಾದ ಮುಖ್ಯಸ್ಥರಾದ ಸಂಜಯ್ ವರ್ಮಾ, ಶ್ರೀರಂಗನಾಥ ಅಗ್ರಿ ಹೌಸ್ ಮಾಲೀಕರಾದ ಶಶಿಧರ ಬಿ.ಆರ್., ಸ್ಟೇಟ್ ಹೆಡ್ ಶರತ್‌ಶೆಟ್ಟಿ, ದಯಾನಂದ್ ಹಾಗೂ ತುಮಕೂರು ಮತ್ತು ವಿವಿಧ ಜಿಲ್ಲೆಗಳಿಂದ ರೈತರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ರಾಜ್ಯಮಟ್ಟದ ಕವನ ವಾಚನದಲ್ಲಿ ಗುರುತಿಸಿಕೊಂಡ ಮಂಜನಾಯಕ್ ಬಿ.ಆರ್.

**ಶಿವಮೊಗ್ಗ** : ಭದ್ರಾವತಿ ತಾಲೂಕಿನ ಪ್ರತಿಷ್ಠಿತ ಸಂಸ್ಥೆಯಾದ ಶ್ರೀ ಬಸವೇಶ್ವರ ವಿದ್ಯಾವರ್ಧಕ ಸಂಘ, ಜನ್ನಾಪುರ ಇವರ ಆಶ್ರಯದಲ್ಲಿ ನಡೆಯುತ್ತಿರುವ ಶ್ರೀ ಬಸವೇಶ್ವರ ಹಿರಿಯ ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿರುವ ಮಂಜನಾಯಕ್ ಬಿ. ಆರ್. ಅವರು ತಮ್ಮ ಕಾವ್ಯಪ್ರತಿಭೆಯಿಂದ ಹೆಸರನ್ನು ಗಳಿಸಿದ್ದಾರೆ.

ಇತ್ತೀಚೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ನಡೆದ ಶಿಕಾರಿಪುರ ತಾಲೂಕು ಮಟ್ಟದ ದಸರಾ ಕವಿ ಗೋಷ್ಠಿಗೆ ಆಯ್ಕೆಯಾಗಿ ಕವನವಾಚನ ಮಾಡಿದ ಅವರು, ನಂತರ ಕನ್ನಡ ಸಾಹಿತ್ಯ ಪರಿಷತ್ ಮತ್ತು ಕರ್ನಾಟಕ ಜಾನಪದ ಪರಿಷತ್‌ಗಳ ಸಹಯೋಗದಲ್ಲಿ ಶಿವಮೊಗ್ಗದಲ್ಲಿ ಆಯೋಜಿಸಲಾದ ರಾಜ್ಯಮಟ್ಟದ ದಸರಾ ಕವನ ವಾಚನ ಕಾರ್ಯಕ್ರಮಕ್ಕೂ ಆಯ್ಕೆಯಾಗಿ ತಮ್ಮ ಮನಮೋಹಕ ಕವನ ವಾಚನದಿಂದ ಪ್ರಶಂಸೆಯನ್ನು ಗಳಿಸಿದ್ದಾರೆ.



ಇವರ ಈ ಸಾಧನೆ ಭದ್ರಾವತಿ ತಾಲ್ಲೂಕಿನ ಶಿಕ್ಷಕ ವೃಂದಕ್ಕೆ ಹಾಗೂ ಶ್ರೀ ಬಸವೇಶ್ವರ ವಿದ್ಯಾವರ್ಧಕ ಸಂಘದ ಆಡಳಿತ ಮಂಡಳಿಗೆ ಗೌರವ ತಂದುಕೊಟ್ಟಿದೆ.

# ಬಡ್ಡಿ ಸಹಿತ ಹಣ ವಾಪಸಿಗೆ ಆದೇಶ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ತೀರ್ಪು

**ಚಿಕ್ಕಮಗಳೂರು:** ಒಪ್ಪಿಗೆ ಪಡೆಯದೆ ಗುಂಪು ಆರೋಗ್ಯ ವಿಮೆಗಾಗಿ ಹಣ ಕಡಿತಗೊಳಿಸಿ ಸೇವಾ ನ್ಯೂನತೆ ಎಸಗಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬ್ಯಾಂಕ್ ಹಾಗೂ ಇನ್‌ಶೂರೆನ್ಸ್ ಕಂಪನಿಗಳ ವಿರುದ್ಧ ತೀರ್ಪು ನೀಡಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಬಡ್ಡಿ ಸಹಿತ ಹಣ ಮರಳಿಸುವಂತೆ ಕಂಪನಿಗಳಿಗೆ ಆದೇಶ ನೀಡಿದೆ.ನಗರದ ಕೋಟೆ ಚೆನ್ನಾಪುರದ ಎ.ಪಿ.ನಾಗೇಶ್ ಗೌಡ ಎಂಬುವವರು ಇಂಡಿಯನ್ ಓವರ್‌ಸೀಸ್ ಬ್ಯಾಂಕ್‌ನ ವಸ್ತಾರೆ ಶಾಖೆಯಲ್ಲಿ ಉಳಿತಾಯ ಖಾತೆ ಹೊಂದಿದ್ದಾರೆ. ನಾಗೇಶ್ ಗೌಡರ ಖಾತೆಯಿಂದ ತಲಾ 76,793 ರೂ.ಗಳಂತೆ ಒಟ್ಟು 1,53,586 ರೂ.ಗಳನ್ನು ಕಡಿತಗೊಳಿಸಿದ್ದು, ಈ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕರನ್ನು ಸಂಪರ್ಕಿಸಿದ ಅವರು ಈ ಹಣವನ್ನು ಮರಳಿಸುವಂತೆ ಮನವಿ ಮಾಡಿಕೊಂಡಿದ್ದರು. ಆದರೆ ಹಣ ಮರಳಿಸದೆ ಸೇವಾ ನ್ಯೂನತೆ ಎಸಗಿದ್ದರೆನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಬ್ಯಾಂಕ್ ವ್ಯವಸ್ಥಾಪಕರು, ಹೆಚ್‌ಡಿಎಫ್‌ಸಿ ಎರ್ಗೋ ಜನರಲ್ ಇನ್‌ಶೂರೆನ್ಸ್ ಕಂಪನಿಯ ಮಂಗಳೂರು ಹಾಗೂ ಬೆಂಗಳೂರು ಕಚೇರಿಯ ವ್ಯವಸ್ಥಾಪಕರುಗಳು ಹಾಗೂ ಈ ಸಂಸ್ಥೆಯ ಕಾರ್ಯಾಚರಣೆ ಮತ್ತು ಸೇವಾ ಗುಂಪಿನ ಹಿರಿಯ ಉಪಾಧ್ಯಕ್ಷರು ಹಾಗೂ ಅಧ್ಯಕ್ಷರ ವಿರುದ್ಧ ಕಳೆದ ಡಿಸೆಂಬರ್ 4 ರಂದು ನಾಗೇಶ್‌ಗೌಡ ಅವರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ಸಲ್ಲಿಸಿದ್ದರು.ಈ ಬಗ್ಗೆ ವಿಚಾರಣೆ ನಡೆಸಿದ ಆಯೋಗವು ಇತ್ತೀಚೆಗೆ ತೀರ್ಪು ನೀಡಿ ವಿಮೆ ಮೊತ್ತವಾದ ಎರಡು ಬಾರಿ ಖಾತೆಯಿಂದ ಕಡಿತಗೊಳಿಸಿದ ಒಟ್ಟು ಮೊತ್ತ 1,53,586 ರೂ.ಗಳನ್ನು ಶೇ.9ರ ವಾರ್ಷಿಕ ಬಡ್ಡಿ ಸಹಿತ ದೂರುದಾರರಿಗೆ ಮರಳಿಸುವಂತೆ ಹಾಗೂ ಪರಿಹಾರವಾಗಿ 20 ಸಾವಿರ ರೂ.ಗಳು ಮತ್ತು ಪ್ರಕರಣದ ಖರ್ಚು–ವೆಚ್ಚಕ್ಕಾಗಿ 10 ಸಾವಿರ ರೂ.ಗಳನ್ನು ನೀಡುವಂತೆ ಆದೇಶ ನೀಡಿದೆ.

# ಹಸಿವು ಮುಕ್ತ ಸಮಾಜಕ್ಕಾಗಿ ನ.4ಕ್ಕೆ ನವ್ಯಶ್ರೀ ಅನ್ನದಾನಂ – 100ನೇ ಕಾರ್ಯಕ್ರಮ



**ಶಿವಮೊಗ್ಗ:** ಹಸಿರುಯುಕ್ತ ಹಾಗೂ ಹಸಿವು ಮುಕ್ತ ಸಮಾಜಕ್ಕಾಗಿ ರೂಪುಗೊಂಡ ನವ್ಯಶ್ರೀ ಈಶ್ವರವನ ಚಾರಿಟೇಬಲ್ ಟ್ರಸ್ಟ್ ವತಿಯಿಂದ 'ನವ್ಯಶ್ರೀ ಅನ್ನದಾನಂ' ಸೇವಾ ಕಾರ್ಯವು ನಡೆಯುತ್ತಿದ್ದು, ನ. 04ರಂದು 100ರ ಗಡಿ ತಲುಪಲಿರುವ ಹಿನ್ನೆಲೆಯಲ್ಲಿ ಅಂದು ಮಧ್ಯಾಹ್ನ 12.30ಕ್ಕೆ ನಗರದ ಮೆಗ್ಗಾನ್ ಆಸ್ಪತ್ರೆಯ ಆವರಣದ ಚೌಡೇಶ್ವರಿ ದೇವಸ್ಥಾನ ಬಳಿ ನವ್ಯಶ್ರೀ ಅನ್ನದಾನಂ– 100ರ ಸಂಭ್ರಮ' ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ನವ್ಯಶ್ರೀ ಚಾರಿಟೆಬಲ್ ಟ್ರಸ್ಟ್ ಅಧ್ಯಕ್ಷ ನವ್ಯಶ್ರೀ ನಾಗೇಶ್, ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶಿವಗಂಗಾ ಯೋಗ ಕೇಂದ್ರದ ಯೋಗ ಗುರು ಸಿ.ವಿ. ರುದ್ರಾರಾಧ್ಯ, ವಿಧಾನ ಪರಿಷತ್ ಸದಸ್ಯ ಡಾ. ಧನಂಜಯ ಸರ್ಜಿ ಉಪಸ್ಥಿತರಿರುವರು. ವಿಶೇಷ ಆಹ್ವಾನಿತರಾಗಿ ರೋಟರಿ ಝೋನ್ 10ರ ಅಸಿಸ್ಟೆಂಟ್ ಗವರ್ನರ್ ಕೆ.ಪಿ.ಶೆಟ್ಟಿ, ನವ್ಯಶ್ರೀ ಈಶ್ವರವನ ಚಾರಿಟಬಲ್ ಟ್ರಸ್ಟ್ ನವ್ಯಶ್ರೀ ನಾಗೇಶ್ ಅವರು ಆಗಮಿಸುವರು ಎಂದರು.

ಮೆಗ್ಗಾನ್ ಆಸ್ಪತ್ರೆಗೆ ಬಡವರು, ಆರ್ಥಿಕವಾಗಿ ಅಶಕ್ತರೇ ಹೆಚ್ಚಾಗಿ ಬರುತ್ತಾರೆ. ಇಲ್ಲಿ ದಾಖಲಾಗುವ ಒಳ ರೋಗಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಊಟ ದೊರೆಯುತ್ತದೆ.

ಆದರೆ ಅವರ ಅವಲಂಬಿತರಿಗೆ ಹಾಗೂ ದೊರೆಯುವುದಿಲ್ಲ. ಎಷ್ಟೋ ಬಾರಿ ಭೇಟಿಯಾಗಲು ಬಂದವರಿಗೆ ಊಟ ಅವರು ಆ ಸಂದರ್ಭಗಳಲ್ಲಿ ಊಟವಿಲ್ಲದೇ ಪರದಾಡುವುದನ್ನು ಗಮನಿಸಿ ಅವರ ಹಸಿವು ನೀಗಿಸುವ ಸದುದ್ದೇಶ ಹೊತ್ತು ನವ್ಯಶ್ರೀ ಈಶ್ವರವನ ಚಾರಿಟಬಲ್ ಟ್ರಸ್ಟ್ ವತಿಯಿಂದ 2024ರ ನವೆಂಬರ್ 11 ರಂದು ನವ್ಯಶ್ರೀ ಅನ್ನದಾನಂ ಯೋಜನೆ ಪ್ರಾರಂಭಿಸಿದೆ ಎಂದರು.

ಅಂದಿನಿಂದ ಈವರೆಗೂ ಹಸಿದವರಿಗೆ ಅನ್ನದಾನದ ಸೇವಾ ಕಾರ್ಯವನ್ನು ನಿರಂತರವಾಗಿ ಪ್ರತಿ ಮಂಗಳವಾರ ಹಾಗೂ ಶನಿವಾರಗಳಂದು ನಡೆಸಿಕೊಂಡು ಬರಲಾಗುತ್ತಿದೆ. 'ನವ್ಯಶ್ರೀ ಅನ್ನದಾನಂ' ಸೇವಾ ಕಾರ್ಯಕ್ಕೆ ಸ್ವಯಂ ಪ್ರೇರಿತರಾಗಿ ದಾನಿಗಳು ನಗದು ಅಥವಾ ಆಹಾರ ಪದಾರ್ಥಗಳ ರೂಪದಲ್ಲಿ ನೆರವು ನೀಡುತ್ತಿದ್ದಾರೆ. ಹುಟ್ಟುಹಬ್ಬ, ವಿವಾಹ ವಾರ್ಷಿಕೋತ್ಸವ, ಕುಟುಂಬದ ಅಗಲಿದವರ ಪುಣ್ಯ ಸ್ಮರಣೆ ಸೇರಿದಂತೆ ಹಸಿವುಮುಕ್ತ ಸಮಾಜಕ್ಕಾಗಿ

ಕೈಜೋಡಿಸುವವರ ಸಂಖ್ಯೆ ಹೆಚ್ಚುತ್ತಿದ್ದು, ಇತ್ತೀಚೆಗೆ ಈ ಆಚರಣೆಗಳ ದಿಕ್ಕು ಈ ರೀತಿಯ ಅನ್ನದಾನಗಳ ಮೂಲಕ ನಡೆಯುತ್ತಿರುವುದು ಒಂದು ಉತ್ತಮ ಬೆಳವಣಿಗೆಯಾಗಿದೆ ಎಂದರು.

ಯುವಜನರು ಕೂಡ ತಮ್ಮ ಹುಟ್ಟು ಹಬ್ಬಗಳನ್ನು ಇಲ್ಲಿ ಅನ್ನದಾನದ ಮೂಲಕ ಆಚರಿಸಿಕೊಳ್ಳುತ್ತಿರುವುದು ವಿಶೇಷ ಎನಿಸಿದೆ. ಈ ಸತ್ಕಾರ್ಯಕ್ಕೆ ಸೇವೆ ಸಲ್ಲಿಸುವ ಮನಸು ಹೊಂದಿರುವ ಯಾವುದೇ ವ್ಯಕಿಗಳಿಗೆ ತೆರೆದ ವೇದಿಕೆ ಇದೆ. ಪ್ರಸ್ತುತ 400ರಷ್ಟು ಜನರಿಗೆ ಊಟ ಕೊಡಲಾಗುತ್ತಿದೆ.ಆಹಾರ ಪದಾರ್ಥ ಅಥವಾ ನಗದು ರೂಪದಲ್ಲಿ ಸಹಾಯ ಮಾಡುವವರು 9844282504, 9448139271 ಇಲ್ಲಿಗೆ ಸಂಪರ್ಕಿಸಬಹುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಟ್ರಸ್ಟ್ ಸದಸ್ಯರಾದ ನಾಗರಾಜ ಶೆಟ್ಟರ್, ಪುಟ್ಟಯ್ಯ, ಸಂತೋಷ್ ಎಲಿಗಾರ್, ಸುಬ್ರಹ್ಮಣ್ಯ ಮೊದಲಾದವರಿದ್ದರು.

# ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತಿ ಕಾರ್ಯಕ್ರಮ


**ಬಳ್ಳಾರಿ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ನ.08 ರಂದು ಮಧ್ಯಾಹ್ನ 01 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 09 ಗಂಟೆಗೆ ನಗರದ ಕನಕ ವೃತ್ತದಲ್ಲಿರುವ ಭಕ್ತ ಕನಕದಾಸರ ಪುತ್ಥಳಿಗೆ ಮಾಲಾರ್ಪಣೆ ಮಾಡಲಾಗುವುದು. ಬಳಿಕ ಬೆಳಿಗ್ಗೆ 10 ಗಂಟೆಗೆ ಭವ್ಯ ಮೆರವಣಿಗೆ ನಡೆಯಲಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕರಾದ ಬಿ.ನಾಗೇಂದ್ರ, ಜೆ.ಎನ್.ಗಣೇಶ್, ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಕರ್ನಾಟಕ ರಾಜ್ಯ ಖನಿಜ ನಿಗಮ ನಿಯಮಿತದ ಉಪಾಧ್ಯಕ್ಷ ಹೆಚ್.ಲಕ್ಷ್ಮಣ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಕುರುಬರ ಸಂಘದ ಅಧ್ಯಕ್ಷ ಡಾ.ಪಿ.ಎಲ್.ಗಾದಿಲಿಂಗನಗೌಡ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.



ವೀರಶೈವ ಪದವಿ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ.ನೀಲಮ್ಮ ಕೆ ಅವರು ಜಯಂತಿ ಕುರಿತು ವಿಶೇಷ ಉಪನ್ಯಾಸ ನೀಡುವರು.

## ಮೆರವಣಿಗೆ

**ಭಕ್ತ ಶ್ರೇಷ್ಠ ಶ್ರೀ ಕನಕದಾಸರ ಜಯಂತಿ ಅಂಗವಾಗಿ ಮೆರವಣಿಗೆ ನಡೆಯಲಿದ್ದು, ಅಂದು ಬೆಳಿಗ್ಗೆ 10 ಗಂಟೆಗೆ ಡಾ.ರಾಜ್ ಕುಮಾರ್ ರಸ್ತೆಯ ಮುನ್ಸಿಪಾಲ್ ಕಾಲೇಜು ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ– ಬೆಂಗಳೂರು ರಸ್ತೆ– ಬ್ರೂಸ್‌ಪೇಟೆ ಹಳೆ ಪೊಲೀಸ್ ಠಾಣೆ– ತೇರುಬೀದಿ– ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆಯ ವರೆಗೆ ನಡೆಯಲಿದೆ.**

ಬಳ್ಳಾರಿಯ ಕವಿತಾ ಗಂಗೂರು ಅವರಿಂದ ದಾಸರ ಪದಗಳ ಸಂಗೀತ ಕಾರ್ಯಕ್ರಮ ಇರಲಿದೆ.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಮಹಾನಗರ ಪಾಲಿಕೆಯ ಆಯುಕ್ತ ಮಂಜುನಾಥ ಪಿ.ಎಸ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ‘ಮೆಜೆಸ್ಟಿಕ್-2’ ಬಿಡುಗಡೆಗೆ ಸಜ್ಜು



ಚಾಲೆಂಜಿಂಗ್ ಸ್ಟಾರ್ ದರ್ಶನ್ 2002ರಲ್ಲಿ ಮೆಜೆಸ್ಟಿಕ್ ಚಿತ್ರದ ಮೂಲಕ ನಾಯಕನಾಗಿ ಸ್ಯಾಂಡಲ್‌ವುಡ್‌ಗೆ ಪದಾರ್ಪಣೆ ಮಾಡಿದರು. ಇದೀಗ ಮೆಜೆಸ್ಟಿಕ್- 2 ಎಂಬ ಶೀರ್ಷಿಕೆಯ ಚಿತ್ರ ಬಿಡುಗಡೆಗೆ ಸಜ್ಜಾಗಿದೆ. ಅಮ್ಮ ಎಂಟರ್‌ಪ್ರೈಸಸ್ ಬ್ಯಾನರ್ ಅಡಿಯಲ್ಲಿ ಎಚ್ ಆನಂದಪ್ಪ ನಿರ್ಮಿಸಿರುವ ಈ ಚಿತ್ರವು ಈಗ ಸೆನ್ಸಾರ್ ಮಂಡಳಿಯಿಂದ ಯು/ಎ ಪ್ರಮಾಣಪತ್ರವನ್ನು ಪಡೆದಿದ್ದು, ನವೆಂಬರ್‌ನಲ್ಲಿ ಬಿಡುಗಡೆಯಾಗಲಿದೆ.

ಈ ಬಾರಿ, ಹಿರಿಯ ನಿರ್ಮಾಪಕಿ ಶಿಲ್ಪಾ ಶ್ರೀನಿವಾಸ್ ಅವರ ಪುತ್ರ ಭರತ್ ಕುಮಾರ್ ಚಿತ್ರದಲ್ಲಿ ನಟಿಸಿದ್ದಾರೆ. ರಾಮು ಬರೆದು ನಿರ್ದೇಶಿಸಿರುವ ಮೆಜೆಸ್ಟಿಕ್-2 ಬೆಂಗಳೂರಿನ ಮೆಜೆಸ್ಟಿಕ್‌ನಲ್ಲಿ ಬೆಳೆದ ಹುಡುಗನ ಜೀವನದ ಕುರಿತು ಹೇಳುತ್ತದೆ. ಒಂದು ಸ್ಥಳವು ವ್ಯಕ್ತಿಯ ಭವಿಷ್ಯವನ್ನು ಹೇಗೆ ರೂಪಿಸುತ್ತದೆ ಎಂಬುದನ್ನು ಪ್ರತಿಬಿಂಬಿಸುತ್ತದೆ.

ಭರತ್ ಜೊತೆ ಸಂಹಿತಾ ವಿನ್ಯಾ ಜೋಡಿಯಾಗಿ ನಟಿಸಿದ್ದಾರೆ. ನಟಿ ಶ್ರುತಿ ನಾಯಕನ ತಾಯಿಯ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ಈ ಚಿತ್ರವನ್ನು ಮೆಜೆಸ್ಟಿಕ್, ರಾಮೋಹಳ್ಳಿ, ಎಚ್‌ಎಂಟಿ, ಮಾಕಳಿ ಬಳಿಯ ಸಕ್ರೆ ಅಡ್ಡಾ, ಆರ್‌ಟಿ ನಗರದ ನಿಸರ್ಗ ಹೌಸ್ ಮತ್ತು ಚಿತ್ರದುರ್ಗದ ಮುರುಘಾ ಮಠದ ಸುತ್ತಮುತ್ತ ಚಿತ್ರೀಕರಿಸಲಾಗಿದೆ.

ನಿರ್ಮಾಪಕರ ಪ್ರಕಾರ, ಚಿತ್ರದಲ್ಲಿ ನಾಯಕನ ಪರಿಚಯದ ವಿಶೇಷ ಹಾಡೊಂದಿದ್ದು, ಇದರಲ್ಲಿ ನಟಿ ಮಾಲಾಶ್ರೀ ಕಾಣಿಸಿಕೊಂಡಿದ್ದಾರೆ. ಆರ್‌ಎಸ್ ಗೌಡ ಸ್ಟುಡಿಯೋದಲ್ಲಿ ಹಾಡನ್ನು ಚಿತ್ರೀಕರಿಸಲಾಗಿದೆ. ಮೆಜೆಸ್ಟಿಕ್-2 ಚಿತ್ರಕ್ಕೆ ವಿನು ಮನಸು ಸಂಗೀತ, ವೀನಸ್ ಮೂರ್ತಿ ಛಾಯಾಗ್ರಹಣ ಮತ್ತು ಚಿನ್ನಯ್ಯ ಆಕ್ಷನ್ ಕೊರಿಯೋಗ್ರಫಿ ಇದೆ.

ಮೆಜೆಸ್ಟಿಕ್ ಚಿತ್ರದ ಶೀರ್ಷಿಕೆಯನ್ನು ಹೊಂದಿದ್ದರೂ ಇದು ಸ್ವತಂತ್ರ ಕಥೆ ಎಂದು ಹೇಳಲಾಗುತ್ತಿದೆ.

# ’ರೂಬಿ’ ಮೂಲಕ ಕನ್ನಡ ಚಿತ್ರರಂಗಕ್ಕೆ ಹಿಮೇಶ್ ರೇಶಮಿಯಾ ಎಂಟ್ರಿ

**ಲೀಲಾ ಚಿತ್ರಕ್ಕೆ ರಾಜ್ಯ ಪ್ರಶಸ್ತಿ ವಿಜೇತ ಬರಹಗಾರ ರಘು ಕೋವಿ ಅವರು ‘ರೂಬಿ’ ಚಿತ್ರದ ಮೂಲಕ ನಿರ್ದೇಶನಕ್ಕೆ ಸಜ್ಜಾಗಿದ್ದಾರೆ. ಹೈದರಾಬಾದ್-ಕರ್ನಾಟಕ ಗಡಿಯಲ್ಲಿ ನಡೆದ ನೈಜ ಘಟನೆಯನ್ನು ಆಧರಿಸಿದ ಈ ಚಿತ್ರವು ಹಲವು ಅಂಶಗಳನ್ನು, ಆಸಕ್ತಿದಾಯಕ ನಟರು, ಪ್ರಮುಖ ಪ್ರತಿಭೆಗಳ ಪುನರಾಗಮನ ಮತ್ತು ಪ್ರಭಾವಶಾಲಿ ಸಂಗೀತ ಮತ್ತು ತಾಂತ್ರಿಕ ಸೆಟಪ್ ಅನ್ನು ಹೊಂದಿದೆ.**

**ಇತ್ತೀಚೆಗೆ ದಿಲ್‌ಮಾರ್‌ನೊಂದಿಗೆ ನಟನೆಗೆ ಪಾದಾರ್ಪಣೆ ಮಾಡಿದ ರಾಮ್ ಗೌಡ ಅವರು ಈಗ ರೂಬಿಯಲ್ಲಿ ಅಭಿನಯಿಸುತ್ತಿದ್ದು, ಮತ್ತೆ ಕನ್ನಡ ಚಿತ್ರರಂಗಕ್ಕೆ ಮರಳುತ್ತಿರುವ ‘ಕಿಕ್’ ಖ್ಯಾತಿಯ ತಮಿಳು ನಟ ಶಾಮ್ ಅವರೊಂದಿಗೆ ಕಾಣಿಸಿಕೊಳ್ಳಲಿದ್ದಾರೆ.**

‘ಗಾಳಿಪಟ 2’ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ ಮತ್ತು ಕೊನೆಯದಾಗಿ ‘ಮಾರ್ಟಿನ್’ ಚಿತ್ರದಲ್ಲಿ ಕಾಣಿಸಿಕೊಂಡಿದ್ದ ವೈಭವಿ ಶಾಂಡಿಲ್ಯ ಕೂಡ



ಈ ಚಿತ್ರದಲ್ಲಿ ನಾಯಕಿಯಾಗಿ ನಟಿಸಿದ್ದಾರೆ.

ಇನ್ನು ಜನಪ್ರಿಯ ಬಾಲಿವುಡ್ ಸಂಯೋಜಕ-ಗಾಯಕ ಹಿಮೇಶ್ ರೇಶಮಿಯಾ ಅವರು ಈ ಚಿತ್ರದ ಮೂಲಕ ದಕ್ಷಿಣ ಭಾರತದ ಗಾಯನಕ್ಕೆ ಪಾದಾರ್ಪಣೆ ಮಾಡಿದ್ದಾರೆ. ಚಾರ್ಟ್‌ಬಸ್ಟರ್‌ಗಳು ಮತ್ತು ವಿಶಿಷ್ಟ ಸಂಯೋಜನೆಗೆ ಹೆಸರುವಾಸಿಯಾದ ಹಿಮೇಶ್ ಅವರು, ವಂಶಿ, ಆಕಾಶ್ ಮತ್ತು ಎಕ್ಸ್‌ಕ್ಯೂಸ್ ಮಿ ಯ ನಂತರ ಮೆಚ್ಚುಗೆ ಪಡೆದ ಸಂಗೀತ ಸಂಯೋಜಕ ಆರ್‌ಪಿ ಪಟ್ನಾಯಕ್ ಸಂಯೋಜಿಸಿದ ಎರಡು ಹಾಡುಗಳನ್ನು ರೆಕಾರ್ಡ್ ಮಾಡಿದ್ದಾರೆ. ಸಾಹಿತ್ಯವನ್ನು ಜಯಂತ್ ಕಾಯ್ಕಿಣಿ, ನಾಗೇಂದ್ರ ಪ್ರಸಾದ್, ನಾಗಾರ್ಜುನ ಶರ್ಮಾ ಮತ್ತು ಚಾಯಾಂಕ ಬರೆದಿದ್ದಾರೆ.

ರೂಬಿ ಚಿತ್ರವು ಅನುಭವಿ ತಾಂತ್ರಿಕ ತಂಡವನ್ನು ಹೊಂದಿದ್ದು, ರಾಜಕುಮಾರ ಮತ್ತು ಯುವರತ್ನ ಚಿತ್ರಗಳ ಛಾಯಾಗ್ರಾಹಕ ವೆಂಕಟೇಶ್ ಅಂಗುರಾಜ್ ದೃಶ್ಯಗಳನ್ನು ಸೆರೆ ಹಿಡಿಯಲಿದ್ದಾರೆ. ರೋಜಾ, ಬಾಂಬೆ ಮತ್ತು ದಿಲ್ ಸೇ ಮುಂತಾದ ಚಿತ್ರಗಳಿಗೆ ಹೆಸರುವಾಸಿಯಾದ ಅನುಭವಿ ಸುರೇಶ್ ಅರಸ್ ಸಂಕಲನ ಮಾಡುತ್ತಿದ್ದಾರೆ.

ಕೆಜಿಎಫ್ ಖ್ಯಾತಿಯ ರಾಷ್ಟ್ರೀಯ ಪ್ರಶಸ್ತಿ ವಿಜೇತ ಸ್ಟಂಟ್ ಕೊರಿಯೋಗ್ರಾಫರ್ ವಿಕ್ರಮ್ ಮೋರ್ ಅವರು ಈ ಚಿತ್ರಕ್ಕೆ ಸಾಹಸ ನಿರ್ದೇಶನ ಮಾಡುತ್ತಿದ್ದಾರೆ.

ಈ ಚಿತ್ರವನ್ನು ಈ ಹಿಂದೆ ಓ ಮೈ ಗಾಡ್ 2 ನಿರ್ಮಿಸಿದ ಬಾಲಿವುಡ್ ಬ್ಯಾನರ್ ನಿಖಿಲ್ ದೇಸಾಯಿ ಅವರ ಇವಾನ್ ಫಿಲ್ಮ್ಸ್ ನಿರ್ಮಿಸುತ್ತಿದ್ದು, ಶಿವರಾಜ್ ಅವರ ನವಿಶಾ ಫಿಲ್ಮ್ಸ್ ಸಹಯೋಗದೊಂದಿಗೆ ಮೊದಲ ಬಾರಿ ಕನ್ನಡ ಚಿತ್ರ ಎಂಟ್ರಿ ಕೊಡುತ್ತಿದೆ.

# ಹಿರಿಯ ನಟಿ ಉಮಾಶ್ರೀಗೆ 2019 ನೇ ಸಾಲಿನ ಡಾ. ರಾಜ್ ಕುಮಾರ್ ಪ್ರಶಸ್ತಿ: ಪುಟ್ಟಣ್ಣ ಕಣಗಾಲ್, ಡಾ. ವಿಷ್ಣುವರ್ಧನ್ ಪ್ರಶಸ್ತಿ ಪ್ರಕಟ



**ಬೆಂಗಳೂರು:** 2019ನೇ ಸಾಲಿನ ಡಾ. ರಾಜ್ ಕುಮಾರ್, ಪುಟ್ಟಣ್ಣ ಕಣಗಾಲ್ , ಡಾ. ವಿಷ್ಣುವರ್ಧನ್ ಪ್ರಶಸ್ತಿ ಪ್ರಕಟಗೊಂಡಿದೆ. ನಟಿ ಉಮಾಶ್ರೀಗೆ 2019ನೇ ಸಾಲಿನ ಡಾ. ರಾಜ್ ಕುಮಾರ್ ಪ್ರಶಸ್ತಿ ಲಭಿಸಿದೆ. ಉಮಾಶ್ರೀ ಅವರು ಚಿತ್ರರಂಗಕ್ಕೆ ಸಲ್ಲಿಸಿರುವ ಸೇವೆ, ಅವರ ಅತ್ಯುತ್ತಮ ನಟನೆಯನ್ನು ಗುರುತಿಸಿ ರಾಜ್‌ಕುಮಾರ್ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ವಿಷ್ಣುವರ್ಧನ್ ಪ್ರಶಸ್ತಿಗೆ ಹಿರಿಯ ನಟ ರಿಚರ್ಡ್ ಕ್ಯಾಸ್ಟಲಿನೋ ಅವರನ್ನು ಆಯ್ಕೆ ಮಾಡಲಾಗಿದೆ. ರಿಚರ್ಡ್ ಕ್ಯಾಸ್ಟಲಿನೋ ಅವರು ಕನ್ನಡ, ತುಳು, ಕೊಂಕಣಿ ಸಿನಿಮಾಗಳಲ್ಲಿ ವರ್ಷಗಳ ಕಾಲ ನಟಿಸಿದ್ದಾರೆ.

ಪುಟ್ಟಣ್ಣ ಕಣಗಾಲ್ ಪ್ರಶಸ್ತಿಗೆ ನಿರ್ದೇಶಕ ಎನ್‌ಆರ್ ನಂಜುಂಡೇಗೌಡ ಅವರನ್ನು ಆಯ್ಕೆ ಮಾಡಲಾಗಿದೆ. ಈ ಪ್ರಶಸ್ತಿಗಳು ಐದು ಲಕ್ಷ ರೂಪಾಯಿ ನಗದು ಬಹುಮಾನದ ಜೊತೆಗೆ ಚಿನ್ನ ಲೇಪಿತ ಪದಕ ಒಳಗೊಂಡಿರಲಿವೆ.

ಪ್ರಶಸ್ತಿಗಳ ಜೊತೆಗೆ ಬೆಳ್ಳಿ ತೊರೆಗೆ ಉತ್ತಮ ಸಿನಿಮಾ ಪ್ರಬಂಧ ಮತ್ತು ‘ಗುಳೆ’ ಸಿನಿಮಾಕ್ಕೆ ಉತ್ತಮ ಕಿರುಚಿತ್ರ ಪ್ರಶಸ್ತಿಗಳನ್ನು ಸಹ ಸರ್ಕಾರ ಘೋಷಿಸಿದೆ. ಈ ಪ್ರಶಸ್ತಿಗಳು 25 ಸಾವಿರ ರೂಪಾಯಿ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ಹಾಗೂ ಬೆಳ್ಳಿ ಪದಕಗಳನ್ನು ಒಳಗೊಂಡಿರಲಿವೆ.

# ನಟ ರಾಮ್ ಚರಣ್ ಬಾಳಲ್ಲಿ ಎರಡನೇ ಮಗುವಿನ ಆಗಮನ ನಿರೀಕ್ಷೆ



ತೆಲುಗಿನ ಸ್ಟಾರ್ ನಟ ರಾಮ್ ಚರಣ್ ಮತ್ತು ಅವರ ಪತ್ನಿ ಉಪಾಸನಾ ಕಾಮಿನೇನಿ ಕೊನಿಡೇಲಾ ಅವರ ಜೀವನದಲ್ಲಿ ಎರಡನೇ ಮಗುವಿನ ಆಗಮನವಾಗುತ್ತಿದೆ. ಜೂನ್ 2023 ರಲ್ಲಿ ಮೊದಲ ಮಗು ಕ್ಲಿನ್ ಕಾರಾಳಿಗೆ ಜನ್ಮ ನೀಡಿದ್ದ ಉಪಾಸನಾ ಎರಡನೇ ಮಗುವಿನ ನಿರೀಕ್ಷೆಯಲ್ಲಿದ್ದಾರೆ.

ಉಪಾಸನ ಅವರ ಇನ್‌ಸ್ಟಾಗ್ರಾಮ್ ಹ್ಯಾಂಡಲ್‌ನಲ್ಲಿ ಪೋಸ್ಟ್ ಮಾಡಲಾದ ಈ ವೀಡಿಯೊ ಈಗ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದ್ದು, ಅಭಿಮಾನಿಗಳು ಮತ್ತು ಚಿತ್ರೋದ್ಯಮದ ಸಹೋದ್ಯೋಗಿಗಳು ದಂಪತಿಗೆ ಪ್ರೀತಿ ಮತ್ತು ಅಭಿನಂದನೆಗಳನ್ನು ಸುರಿಸುತ್ತಿದ್ದಾರೆ.

ದೀಪಾವಳಿ ಹಬ್ಬದ ಜೊತೆಗೆ ಉಪಾಸನಾ ಅವರ ಬೇಬಿ ಶವರ್ (ಸೀಮಂತ) ಕಾರ್ಯಕ್ರಮವನ್ನು ಕೊನಿಡೇಲಾ ನಿವಾಸದಲ್ಲಿ ಆಚರಿಸಲಾಗಿತ್ತು. ಸಾಂಪ್ರದಾಯಿಕ ಉಡುಪು ಧರಿಸಿರುವ ಉಪಾಸನಾ ಕುಟುಂಬ ಸದಸ್ಯರು ಅವರನ್ನು ಆಶೀರ್ವದಿಸುತ್ತಿರುವುದು, ರಾಮ್ ಚರಣ್ ಅವರ ಪಕ್ಕದಲ್ಲಿ ನಗುತ್ತಾ ನಿಂತಿರುವುದು ಕಾಣುತ್ತದೆ.

ವಿಡಿಯೊ ಹಂಚಿಕೊಂಡ ಉಪಾಸನ, ಈ ದೀಪಾವಳಿಯು ಆಚರಣೆಯನ್ನು ದುಪ್ಪಟ್ಟುಗೊಳಿಸಿದೆ, ಪ್ರೀತಿಯನ್ನು ಹೆಚ್ಚು ಮಾಡಿದೆ ಮತ್ತು ಆಶೀರ್ವಾದಗಳನ್ನು ದುಪ್ಪಟ್ಟು ಮಾಡಿದೆ” ಎಂದು ಶೀರ್ಷಿಕೆ ನೀಡಿದ್ದಾರೆ. ವೀಡಿಯೊ “ಹೊಸ ಆರಂಭಗಳನ್ನು ಆಚರಿಸುವುದು” ಎಂಬ ಸಾಲಿನಿಂದ ಕೊನೆಗೊಂಡಿತು, ಇದು ಅವರ ಎರಡನೇ ಮಗುವಿನ ಆಗಮನದ ಬಗ್ಗೆ ಇದ್ದ ಊಹಾಪೋಹಗಳನ್ನು ದೃಢಪಡಿಸಿದೆ

ವಿಡಿಯೋದಲ್ಲಿ ಚಿರಂಜೀವಿ ಮತ್ತು ಅವರ ಪತ್ನಿ ಸುರೇಖಾ ಸೇರಿದಂತೆ ಕುಟುಂಬದ ಹಲವಾರು ಸದಸ್ಯರು ತಮ್ಮ ಸೊಸೆಯನ್ನು ಆಶೀರ್ವದಿಸುತ್ತಿರುವುದು ಕಂಡುಬಂದಿದೆ. ವರುಣ್ ತೇಜ್, ಲಾವಣ್ಯ ತ್ರಿಪಾಠಿ, ವೆಂಕಟೇಶ್ ದಗ್ಗುಬಾಟಿ, ನಯನತಾರಾ, ವಿಘ್ನೇಶ್ ಶಿವನ್ ಮತ್ತು ಪವನ್ ಕಲ್ಯಾಣ್ ಅವರ ಪತ್ನಿ ಅನ್ನಾ ಲೆಜ್ನೇವಾ ಕೂಡ ಹಾಜರಿದ್ದರು,

# ಪ್ರತಾಪ್ ಗಂಧರ್ವ ನಿರ್ದೇಶನದ ‘Congratulation ಬ್ರದರ್’ ಬಿಡುಗಡೆ

Congratulations ಬ್ರದರ್’ ಚಿತ್ರವು ಕರ್ನಾಟಕದಾದ್ಯಂತ ಬಿಡುಗಡೆಗೆ ಸಿದ್ಧವಾಗಿದ್ದು, ನವೆಂಬರ್ ಚಿತ್ರಮಂದಿರಗಳಲ್ಲಿ ತೆರೆಕಾಣಲಿದೆ. ಸಾಮಾನ್ಯವಾಗಿ ಆನ್‌ಲೈನ್ ಬಝ್ ಅಥವಾ ನಗರಗಳಲ್ಲಿ ಕಾರ್ಯಕ್ರಮ ಮಾಡುವುದಕ್ಕೆ ಅಂಟಿಕೊಳ್ಳುವ ಬದಲು, ಚಿತ್ರತಂಡವು ಪ್ರೇಕ್ಷಕರನ್ನು ನೇರವಾಗಿ ಭೇಟಿ ಮಾಡಲು ಆಯ್ಕೆ ಮಾಡಿಕೊಂಡಿದೆ. ಉತ್ತರದ ಬೀದರ್‌ನಿಂದ ದಕ್ಷಿಣದ ಚಾಮರಾಜನಗರದವರೆಗೆ ರಾಜ್ಯದಾದ್ಯಂತ ಪ್ರಯಾಣ ಪ್ರಾರಂಭಿಸಿದ್ದು, ದಾರಿಯುದ್ದಕ್ಕೂ ಪ್ರತಿಯೊಂದು ಜಿಲ್ಲೆಯ ಜನರನ್ನು ಮಾತನಾಡಿಸಲಿದೆ.

ಕಲ್ಲೂರ್ ಸಿನಿಮಾಸ್, ಪೆನ್ ಎನ್ ಪೇಪರ್ ಸ್ಟುಡಿಯೋಸ್ ಮತ್ತು ಸ್ಕ್ರೀನ್ ಫಸ್ಟ್ ಪ್ರೊಡಕ್ಷನ್ ಬ್ಯಾನರ್ ಅಡಿಯಲ್ಲಿ ಪ್ರಶಾಂತ್

ಕಲ್ಲೂರ್ ನಿರ್ಮಿಸಿರುವ ಈ ಚಿತ್ರವನ್ನು ಪ್ರತಾಪ್ ಗಂಧರ್ವ ನಿರ್ದೇಶಿಸಿದ್ದಾರೆ. ಹರಿ ಸಂತೋಷ್



ಕಥೆ ಬರೆದಿದ್ದು, ಕ್ರಿಯೇಟಿವ್ ಹೆಡ್ ಆಗಿ ಮಾರ್ಗದರ್ಶನ ಮಾಡಿದ್ದಾರೆ. ರಕ್ಷಿತ್ ನಾಗ್ ಮತ್ತು ಸಂಜನಾ ದಾಸ್ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಹರೀಶ್ ರೆಡ್ಡಿ ಸಹ-ನಿರ್ಮಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ.

ಬೆಂಗಳೂರಿನ ವೀರೇಶ್ ಥಿಯೇಟರ್ ಬಳಿ ಪ್ರಚಾರ ಅಭಿಯಾನ ಪ್ರಾರಂಭವಾಯಿತು. ಅಲ್ಲಿ ಕನ್ನಡ ಹೋರಾಟಗಾರ ಸಾರಾ ಗೋವಿಂದು ಪ್ರಚಾರ ವಾಹನಕ್ಕೆ ಹಸಿರು ನಿಶಾನೆ ತೋರಿದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಚಿತ್ರತಂಡ ಕರ್ನಾಟಕದಾದ್ಯಂತ ಪ್ರಯಾಣಿಸಲು ಮತ್ತು ತಮ್ಮ ಕೆಲಸವನ್ನು ಪ್ರೇಕ್ಷಕರಿಗೆ ಪರಿಚಯಿಸಲು ಉತ್ಸುಕರಾಗಿದ್ದರು. ಚಿತ್ರದ ದೃಶ್ಯಗಳಿಂದ ಅಲಂಕರಿಸಲ್ಪಟ್ಟ ತಂಡದ ಬಸ್, ವೀಕ್ಷಕರೊಂದಿಗೆ ನೇರ ಮತ್ತು ವೈಯಕ್ತಿಕ ಸಂಪರ್ಕ ಸಾಧಿಸಲು ಪಟ್ಟಣಗಳು, ಕಾಲೇಜುಗಳು ಮತ್ತು ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡಲಿದೆ.

Congratulation ಬ್ರದರ್ ಯುವ ವಿಷಯಗಳನ್ನು ಅನ್ವೇಷಿಸುತ್ತದೆ. ಸಂಬಂಧಗಳು, ಕನಸುಗಳು ಮತ್ತು ದೈನಂದಿನ ಜೀವನದಲ್ಲಿನ ಭಾವನೆಗಳನ್ನು ಒಳಗೊಂಡಿದೆ. ಕ್ರಿಯೇಟಿವ್ ಹೆಡ್ ಹರಿ ಸಂತೋಷ್, ಕಥೆಯು ಪರಿಚಿತ ಮಾನವ ಅನುಭವಗಳಲ್ಲಿ ಬೇರೂರಿದ್ದು, ಇಂದಿನ ಸಂಸ್ಕೃತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಿರ್ಮಾಪಕ ಪ್ರಶಾಂತ್ ಕಲ್ಲೂರ್, ಸಹ-ನಿರ್ಮಾಪಕ ಹರೀಶ್ ರೆಡ್ಡಿ, ನಟರಾದ ರಕ್ಷಿತ್ ನಾಗ್ ಮತ್ತು ಸಂಜನಾ ದಾಸ್, ಅನುಷಾ, ರಕ್ಷಿತ್ ಕಾಪು, ಸುದರ್ಶನ್ ಮತ್ತು ಚೇತನ್ ದುರ್ಗಾ ಭಾಗವಹಿಸಿದ್ದರು. ಚಿತ್ರವನ್ನು ಕರ್ನಾಟಕದಾದ್ಯಂತ ಮುನೀಂದ್ರ ವಿತರಿಸಲಿದ್ದಾರೆ.

# ಸತ್ಯ ಪ್ರಕಾಶ್ ನಿರ್ದೇಶನದ ಕಮರ್ಷಿಯಲ್ ಎಂಟರ್‌ಟೈನರ್‌ನಲ್ಲಿ ದೊಡ್ಮನೆ ಕುಡಿ ಧೀರೇನ್ ಆರ್ ರಾಜ್‌ಕುಮಾರ್!

ರಾಮಾ ರಾಮಾ ರೇ ಮತ್ತು ಒಂದಲ್ಲ ಎರಡಲ್ಲ ಮುಂತಾದ ವಿಶಿಷ್ಟ ಚಿತ್ರಗಳಿಗೆ ಹೆಸರುವಾಸಿಯಾದ ನಿರ್ದೇಶಕ ಡಿ ಸತ್ಯ ಪ್ರಕಾಶ್ ಇದೀಗ ತಮ್ಮ ಐದನೇ ಚಿತ್ರಕ್ಕೆ ಆಕ್ಷನ್ ಕಟ್ ಹೇಳಲು ಸಜ್ಜಾಗುತ್ತಿದ್ದಾರೆ. ವರನಟ ಡಾ. ರಾಜ್‌ಕುಮಾರ್ ಅವರ ಮೊಮ್ಮಗ ನಟ ಧೀರೇನ್ ಅವರೊಂದಿಗೆ ಕೆಲಸ ಮಾಡಲಿದ್ದಾರೆ. ನಟ ಧೀರೇನ್ ಇದೀಗ ತಮ್ಮ ಮೂರನೇ ಚಿತ್ರದಲ್ಲಿ ಸತ್ಯ ಪ್ರಕಾಶ್ ಅವರೊಂದಿಗೆ ಕೆಲಸ ಮಾಡುತ್ತಿದ್ದಾರೆ.

ಆರ್‌ವಿ ಮಲ್ಟಿ ಸಿನೆಸ್ ಕ್ರಿಯೇಟರ್ಸ್ ನಿರ್ಮಿಸಿರುವ ಈ ಚಿತ್ರವು ಸತ್ಯ ಪ್ರಕಾಶ್ ಅವರ ಸಾಮಾನ್ಯ ಸೂತ್ರಬದ್ಧ ನಿರೂಪಣೆಗಳಿಗಿಂತ ಭಿನ್ನವಾಗಿದ್ದು, ಹೆಚ್ಚಿನ ಪ್ರೇಕ್ಷಕರನ್ನು ಸೆರೆಹಿಡಿಯಲು ವಿನ್ಯಾಸಗೊಳಿಸಲಾದ ಪೂರ್ಣ ಪ್ರಮಾಣದ ಕಮರ್ಷಿಯಲ್ ಚಿತ್ರವಾಗಿದೆ. ಸಂದೀಪ್ ಸುಂಕದ್ ನಿರ್ದೇಶನದ ಪಬ್ಬಾರ್ ಚಿತ್ರವನ್ನು ಪೂರ್ಣಗೊಳಿಸಿದ ನಂತರ, ಹೊಸ ಯೋಜನೆಯಲ್ಲಿ ಧೀರೇನ್ ಪಾಲ್ಗೊಳ್ಳಲಿದ್ದಾರೆ.

ಕಥೆಯನ್ನು ನೋಡಿರುವ ನಟ ಶಿವರಾಜ್‌ಕುಮಾರ್ ಈ ಕಂಟೆಂಟ್‌ನಿಂದಾಗಿ ರೋಮಾಂಚನಗೊಂಡರು ಮತ್ತು ಈ



ಯೋಜನೆಗೆ ತಮ್ಮ ಆಶೀರ್ವಾದ ನೀಡಿದರು ಎಂದು ಉದ್ಯಮದ ಮೂಲಗಳು ಬಹಿರಂಗಪಡಿಸುತ್ತವೆ. ಸತ್ಯ ಪ್ರಕಾಶ್‌ಗೆ, ಈ ಚಿತ್ರವು ಒಂದು ಮಹತ್ವದ ತಿರುವು, ಪರಿಚಿತ ಪ್ರದೇಶದಿಂದ ದೂರ ಸರಿದು ಕಮರ್ಷಿಯಲ್ ನಿರೂಪಣೆಯನ್ನು ಅಳವಡಿಸಿಕೊಳ್ಳುವತ್ತ ಅವರು ಹೆಜ್ಜೆ ಇಟ್ಟಿದ್ದಾರೆ. ಅದೇ ಸಮಯದಲ್ಲಿ ಅವರ ವಿಶಿಷ್ಟ ಕಥೆ ಹೇಳುವ ಶೈಲಿಯನ್ನು ಉಳಿಸಿಕೊಂಡಿದ್ದಾರೆ.

ಸದ್ಯ ಪ್ರೀ-ಪ್ರೊಡಕ್ಷನ್ ಹಂತದಲ್ಲಿದ್ದು, ಚಿತ್ರತಂಡವು ಶೀಘ್ರದಲ್ಲೇ ತಾರಾಗಣ ಮತ್ತು ತಾಂತ್ರಿಕ ಸಿಬ್ಬಂದಿಯನ್ನು ಅಂತಿಮಗೊಳಿಸುವ ಪ್ರಕ್ರಿಯೆಯಲ್ಲಿದೆ.

# ‘ಕಾಂತಾರ ಚಿತ್ರವನ್ನು ನಾನು ದುಡ್ಡಿಗಾಗಿ ಮಾಡಲಿಲ್ಲ

ಅಕ್ಟೋಬರ್ 2ರಂದು ತೆರೆಕಂಡ ರಿಷಭ್ ಶೆಟ್ಟಿ ನಿರ್ದೇಶಿಸಿ, ನಟಿಸಿರುವ ಕಾಂತಾರ: ಚಾಪ್ಟರ್ 1 ವಿಶ್ವದಾದ್ಯಂತ ಬಾಕ್ಸ್ ಆಫೀಸ್ ಕಲೆಕ್ಷನ್‌ನಲ್ಲಿ ಪ್ರಮುಖ ಮೈಲಿಗಲ್ಲುಗಳನ್ನು ದಾಟಿದೆ. 2022ರಲ್ಲಿ ತೆರೆಕಂಡ ಬ್ಲಾಕ್ ಬಸ್ಟರ್ ಚಿತ್ರ ಕಾಂತಾರದ ಪ್ರೀಕ್ವೆಲ್ ಆಗಿದ್ದು, ಗಲ್ಲಾಪೆಟ್ಟಿಗೆಯಲ್ಲಿ 800 ಕೋಟಿ ರೂಪಾಯಿಗೂ ಅಧಿಕ ಗಳಿಕೆ ಕಂಡಿದೆ. ಹಲವು ದಾಖಲೆಗಳನ್ನು ಮುರಿದಿದೆ.

ಸಿನಿಮಾ ಎಕ್ಸ್‌ಪ್ರೆಸ್ ಜೊತೆಗಿನ ಸಂದರ್ಶನದಲ್ಲಿ ‘ಕಾಂತಾರ’ ಚಿತ್ರದ ನಂತರ ಕನ್ನಡ ಚಿತ್ರೋದ್ಯಮದಿಂದ ದೂರ ಸರಿಯಲು ಏಕೆ ಬಯಸಲಿಲ್ಲ ಎಂದು ಕೇಳಿದಾಗ, ನಟ-ನಿರ್ದೇಶಕ ರಿಷಭ್, ‘ಕಾಂತಾರ ಚಿತ್ರವನ್ನು ಕೇವಲ ಹಣಕ್ಕಾಗಿ ಮಾಡಲಿಲ್ಲ. ನಾನು ಬೇರೆ ಆಫರ್‌ಗಳನ್ನು ತೆಗೆದುಕೊಂಡಿದ್ದರೆ, ನಾನು ಅಪಾಯವನ್ನು ತಪ್ಪಿಸಬಹುದಿತ್ತು ಮತ್ತು ಶಾಲೆಗೆ ಹೋಗುತ್ತಿರುವ ನನ್ನ ಮಕ್ಕಳಿಗೆ ಹೆಚ್ಚಿನ ಸಮಯ ನೀಡುತ್ತಿದ್ದೆ. ಆದರೆ, ದೈವಿಕ ಹಸ್ತಕ್ಷೇಪದಿಂದಾಗಿ ನಾನು ಕಾಂತಾರ: ಚಾಪ್ಟರ್ 1 ಮಾಡಿದ್ದೇನೆ’ ಎಂದರು.

‘ಕನ್ನಡಿಗರು ಕಾಂತಾರನನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ದಿದ್ದು, ಪ್ರೇಕ್ಷಕರು ಭಾಷೆ ಮತ್ತು ಸಾಂಸ್ಕೃತಿಕ ವ್ಯತ್ಯಾಸಗಳನ್ನು ಮೀರಿ ಚಿತ್ರದ ಬಗ್ಗೆ ತುಂಬಾ ಮಾತನಾಡಿದಾಗ, ನಾನು ಈ ಕಥೆಯನ್ನು ಮುಗಿಸಬೇಕು ಮತ್ತು ಪ್ರೀಕ್ವೆಲ್ ಮಾಡುವ ಮೂಲಕ ಅದಕ್ಕೆ ನ್ಯಾಯ ಒದಗಿಸಬೇಕು ಎಂದು ನನಗೆ ತಿಳಿದಿತ್ತು’



ಎಂದು ಹೇಳಿದರು.

ತಮ್ಮ ಮುಂಬರುವ ಯೋಜನೆಗಳ ಕುರಿತು ಮಾತನಾಡಿದ ಅವರು, ಪ್ರಾಮಾಣಿಕವಾಗಿ ಹೇಳಬೇಕೆಂದರೆ, ನಾನು ಕಾಂತಾರ: ಚಾಪ್ಟರ್ 1 ಅನ್ನು ಪೂರ್ಣಗೊಳಿಸುವವರೆಗೆ ಯಾವುದೇ ಯೋಜನೆಯನ್ನು ಕೈಗೆತ್ತಿಕೊಳ್ಳಲು ಬಯಸಿರಲಿಲ್ಲ. ಆದರೆ ಅಂತಹ ಪಾತ್ರಗಳು ನನ್ನ ಬಳಿಗೆ ಬಂದಿರುವುದರಿಂದ ನನಗೆ ಸಂತೋಷವಾಗಿದೆ. ಆದರೆ ನಾನು ಅದನ್ನು ಮುರಿದು ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಕಾಸರಗೋಡು ಮಾದರಿಯ ಚಿತ್ರವನ್ನು ಮಾಡಲು ಬಯಸುತ್ತೇನೆ. ಒಬ್ಬ ನಟ ಅಥವಾ ನಿರ್ದೇಶಕನಾಗಿ ಒಂದೇ ಶೈಲಿಗೆ ಅಂಟಿಕೊಳ್ಳಲು ಸಾಧ್ಯವಿಲ್ಲ’ ಎಂದರು.

‘ನಾನು ವೈವಿಧ್ಯಮಯ ಪಾತ್ರಗಳನ್ನು ಅನ್ವೇಷಿಸಲು ಬಯಸುತ್ತೇನೆ. ಜೈ ಹನುಮಾನ್‌ನಂತಹ ಚಿತ್ರಗಳು ನನ್ನನ್ನು ಹುಡುಕಿಕೊಂಡು ಬಂದವು. ವಾಸ್ತವವಾಗಿ, ಅವರು ನನ್ನನ್ನು ಕುಂದಾಪುರದವರೆಗೆ ಬೆನ್ನಟ್ಟಿದರು. ಅದನ್ನು ತಿರಸ್ಕರಿಸಲು ನನಗೆ ಯಾವುದೇ ಕಾರಣವಿರಲಿಲ್ಲ. ನನಗೆ ಪುರಾಣ, ಯಕ್ಷಗಾನ ಮತ್ತು ಇತಿಹಾಸದಲ್ಲಿ ಆಸಕ್ತಿ ಇರುವುದರಿಂದ, ಅಂತಹ ಪಾತ್ರಗಳು ನನ್ನನ್ನು ಆಕರ್ಷಿಸಿದವು’ ಎಂದರು.

ಕಾಂತಾರ: ಚಾಪ್ಟರ್ 1 ಅನ್ನು ರಿಷಬ್ ಶೆಟ್ಟಿ ಬರೆದು ನಿರ್ದೇಶಿಸಿದ್ದಾರೆ.

# ಸಮಂತಾ ರುತ್ ಪ್ರಭು ಮುಂದಿನ ಚಿತ್ರ ‘ಮಾ ಇಂಟಿ ಬಂಗಾರಂ’: ಕಾಂತಾರ ಖ್ಯಾತಿಯ ಗುಲ್ಶನ್ ದೇವಯ್ಯ ನಟನೆ



ಕಳೆದ ವರ್ಷ ತಮ್ಮ ನಿರ್ಮಾಣ ಸಂಸ್ಥೆಯನ್ನು ಅಧಿಕೃತವಾಗಿ ಘೋಷಿಸಿದ್ದ ಸಮಂತಾ ರುತ್ ಪ್ರಭು, ತಮ್ಮ ಬ್ಯಾನರ್ ಅಡಿಯಲ್ಲಿ ಮಾ ಇಂಟಿ ಬಂಗಾರಂ ಚಿತ್ರವನ್ನು ನಿರ್ಮಿಸುತ್ತಿದ್ದಾರೆ. ದಸರಾದಂದು ನಡೆದ ಮುಹೂರ್ತ ಪೂಜೆಯ ವಿಡಿಯೋವನ್ನು ಸಮಂತಾ ಹಂಚಿಕೊಂಡಿದ್ದಾರೆ.ಸಮಂತಾ ತಮ್ಮ ಎಕ್ಸ್ ಖಾತೆಯಲ್ಲಿ ಮುಹೂರ್ತದ ವಿಡಿಯೋವನ್ನು ಹಂಚಿಕೊಂಡಿದ್ದಾರೆ. ‘ಪ್ರೀತಿ ಮತ್ತು ಆಶೀರ್ವಾದಗಳಿಂದ ಸುತ್ತುವರೆದಿರುವ ಮಾ ಇಂಟಿ ಬಂಗಾರಂ ಚಿತ್ರದ ಮುಹೂರ್ತದೊಂದಿಗೆ ನಮ್ಮ ಪ್ರಯಾಣವನ್ನು ಪ್ರಾರಂಭಿಸಿದ್ದೇವೆ. ನಾವು ಏನು ರಚಿಸುತ್ತಿದ್ದೇವೆ ಎಂಬುದನ್ನು ನಿಮ್ಮೊಂದಿಗೆ ಹಂಚಿಕೊಳ್ಳುತ್ತಿದ್ದೇನೆ... ಈ ವಿಶೇಷ ಚಿತ್ರವನ್ನು ಪ್ರಾರಂಭಿಸುವಾಗ ನಿಮ್ಮೆಲ್ಲರ ಪ್ರೀತಿ ಮತ್ತು ಬೆಂಬಲ ನಮಗೆ ಬೇಕು’ ಎಂದು ಬರೆದಿದ್ದಾರೆ.ಗುಲ್ಶನ್ ದೇವಯ್ಯ ಈ ಚಿತ್ರದ ಮೂಲಕ ತೆಲುಗು ಚಿತ್ರರಂಗಕ್ಕೆ ಪದಾರ್ಪಣೆ ಮಾಡಲಿದ್ದಾರೆ. ದಿಗಂತ್, ಗೌತಮಿ ಮತ್ತು ಮಂಜುಷಾ ಮುಂತಾದವರು ಚಿತ್ರದಲ್ಲಿ ನಟಿಸಿದ್ದಾರೆ.

ನಂದಿನಿ ರೆಡ್ಡಿ ನಿರ್ದೇಶನದ ‘ಮಾ ಇಂಟಿ ಬಂಗಾರಂ’ ಚಿತ್ರದಲ್ಲಿ ಆಕರ್ಷಕ ತಾಂತ್ರಿಕ ತಂಡವಿದ್ದು, ಸಂತೋಷ್ ನಾರಾಯಣನ್ ಸಂಗೀತ ಸಂಯೋಜಕರಾಗಿ ಮತ್ತು ಓಂ ಪ್ರಕಾಶ್ ಛಾಯಾಗ್ರಾಹಕರಾಗಿದ್ದಾರೆ. ಪಲ್ಲವಿ ಸಿಂಗ್ ವಸ್ತ್ರ ವಿನ್ಯಾಸಕರಾಗಿ, ಉಲ್ಲಾಸ್ ಹೈದೂರ್ ನಿರ್ಮಾಣ ವಿನ್ಯಾಸಕರಾಗಿ ಮತ್ತು ಧರ್ಮೇಂದ್ರ ಕಾಕರ್ಲಾ ಸಂಪಾದಕರಾಗಿದ್ದಾರೆ.

ನಂದಿನಿ ರೆಡ್ಡಿ ಈ ಹಿಂದೆ 2019ರ ‘ಓ ಬೇಬಿ’ ಚಿತ್ರದಲ್ಲಿ ಸಮಂತಾ ಜೊತೆ ಕೆಲಸ ಮಾಡಿದ್ದರು. ಸಮಂತಾ, ರಾಜ್ ನಿಡಿಮೋರು ಮತ್ತು ಹಿಮಾಂಕ್ ದುವ್ವುರು ಜಂಟಿಯಾಗಿ ನಿರ್ಮಿಸಿರುವ ಮಾ ಇಂಟಿ ಬಂಗಾರಂ ಆಕ್ಷನ್-ಡ್ರಾಮಾ ಆಗಿದೆ. ಕಳೆದ ವರ್ಷ ಏಪ್ರಿಲ್‌ನಲ್ಲಿ ಚಿತ್ರದ ಫಸ್ಟ್ ಲುಕ್ ಅನ್ನು ಬಿಡುಗಡೆ ಮಾಡಲಾಯಿತು. ಇದರಲ್ಲಿ ಸಮಂತಾ ಬಂದೂಕು ಹಿಡಿದು ನಿಂತಿರುವ ಮಹಿಳೆಯಾಗಿ ಕಾಣಿಸಿಕೊಂಡಿದ್ದಾರೆ.

ಪ್ರವೀಣ್ ಕಂಡ್ರೆಗುಲಾ ನಿರ್ದೇಶನದ ‘ಶುಭಂ’ ಮೊದಲು ಬಿಡುಗಡೆಯಾಯಿತು. ‘ಶುಭಂ’ ಚಿತ್ರವನ್ನು ಬರೆದಿರುವ ವಸಂತ್ ಮರಿಗಂಟಿ ‘ಮಾ ಇಂಟಿ ಬಂಗಾರಂ’ ಚಿತ್ರದ ಸಹ-ಲೇಖಕರೂ ಆಗಿದ್ದಾರೆ. ಸೀತಾ ಮೆನನ್ ಅವರೊಂದಿಗೆ ಕಥೆ ಮತ್ತು ಚಿತ್ರಕಥೆಯನ್ನು ಬರೆದಿದ್ದಾರೆ.

ಸಮಂತಾ ಕೊನೆಯ ಬಾರಿಗೆ ವಿಜಯ್ ದೇವರಕೊಂಡ ನಟನೆಯ ‘ಖುಷಿ’ ಚಿತ್ರದಲ್ಲಿ ಕಾಣಿಸಿಕೊಂಡಿದ್ದರು. ಶಿವ ನಿರ್ವಾಣ ನಿರ್ದೇಶನದ ‘ಖುಷಿ’ ಚಿತ್ರವು ಆರಂಭಿಕ ದಿನಗಳಲ್ಲಿ ಉತ್ತಮ ಪ್ರದರ್ಶನ ಕಂಡರೂ, ಬಾಕ್ಸ್ ಆಫೀಸ್‌ನಲ್ಲಿ ಯಶಸ್ಸು ಕಾಣಲಿಲ್ಲ.

# ಅಡಿಕೆ, ತೆಂಗು, ಬಾಳೆ ಕಳ್ಳರ ಪಾಲು: ರೈತರ ಕಂಗಾಲು

**ಕಡೂರು:** ತಾಲೂಕಿನಾದ್ಯಂತ ಅಡಿಕೆ, ತೆಂಗು, ಬಾಳೆಗೊನೆ ಕದಿಯುವವರ ಸಂಖ್ಯೆ ಹೆಚ್ಚಾಗಿದೆ, ರೈತರುಗಳು ಕಷ್ಟಪಟ್ಟು ಬೆಳೆದ ಬೆಳೆ ಕಳ್ಳರ ಪಾಲಾಗುತ್ತಿದೆ. ಅಡಿಕೆ ದರ ಬಂಗಾರದ ಬೆಲೆಯಂತಾಗಿದೆ, ತೆಂಗಿನಕಾಯಿ ಬೆಲೆ ಗಗನಕೇರಿದೆ, ಬಾಳೆಗೂ ಸಹ ಹೆಚ್ಚಿನ ದರ ಸಿಗುತ್ತಿದೆ. ರೈತರು ಅಪರೂಪಕ್ಕೆ ಆದಾಯ ಕಾಣುತ್ತಿದ್ದಾರೆ. ಇಂತಹ ಸಮಯದಲ್ಲಿ ಕಳ್ಳರ ಕಾಟದಿಂದ ಬರುವ ಆದಾಯವೂ ಇಲ್ಲದಾಗಿದೆ. ಹಲವಾರು ತೋಟಗಳಲ್ಲಿ ಅಡಿಕೆಯನ್ನು ಕದ್ದು ಒಯ್ಯುತ್ತಿರುವ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪೊಲೀಸ್ ಠಾಣೆಗೆ ದೂರು ಸಲ್ಲಿಸಿರುವುದಾಗಿ ತಾಲೂಕು ಅಡಿಕೆ ಬೆಳೆಗಾರರ ಸಂಘದ ಅಧ್ಯಕ್ಷರಾದ ಕೆ.ಎಚ್.ಶಂಕರ್ ತಿಳಿಸಿದರು.ಅಡಿಕೆ ಬೆಳೆಗಾರರ ಸಂಘದ ಪದಾಧಿಕಾರಿಗಳು ಇಂದು ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಒಂದು ತಿಂಗಳಿನಿಂದ ತೋಟದಲ್ಲಿ ಬೆಳೆಗಳು ಕಳ್ಳತನವಾಗುತ್ತಿದೆ, ಇದರ ಜೊತೆಗೆ ಬೋರ್‌ವೆಲ್‌ಗಳ ಕೇಬಲ್ ಕಳ್ಳತನ ಮಾಡಲಾಗುತ್ತಿದೆ, ಹಿಂದೆ ಅಡಿಕೆ ತೋಟದಲ್ಲಿ ಕಳ್ಳತನವಾದಾಗ ಪೊಲೀಸರಿಗೆ ದೂರು ನೀಡಲಾಗಿತ್ತು. ಆದರೆ, ಯಾವುದೇ ಕ್ರಮ ಕೈಗೊಂಡಿರುವುದಿಲ್ಲ, ನಮ್ಮ ದೂರಿಗೆ ಸರಿಯಾದ ರೀತಿಯಲ್ಲಿ ಕ್ರಮ ಕೈಗೊಳ್ಳದಿದ್ದರೆ ರೈತರ ಜೀವನ ಕಷ್ಟವಾಗಲಿದೆ, ಕಳ್ಳತನ ಮಾಡಿದ ಅಡಿಕೆ, ತೆಂಗು, ಬಾಳೆಗೊನೆ ಕೇಬಲ್ ವಸ್ತುಗಳನ್ನು ಅಂಗಡಿ ಮಾಲೀಕರುಗಳು ಕೊಳ್ಳುತ್ತಿದ್ದು, ಕದ್ದಮಾಲನ್ನು ಕೊಳ್ಳುತ್ತಿರುವ ಅಂಗಡಿ ಮಾಲೀಕರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದರು.

# ಉನ್ನತ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಶ್ರಮವಹಿಸಿ : ತುಳಸಿದಾಸ್



**ಚಿಕ್ಕಮಗಳೂರು:** ಇತಿಹಾಸ ತಿಳಿಯದವ ಇತಿಹಾಸ ಸೃಷ್ಟಿಸಲಾರ ಎಂಬಂತೆ ದೇಶದ ಸಮಗ್ರ ಇತಿಹಾಸ ಹಾಗೂ ಸಂಸ್ಕೃತಿಯ ಬಗ್ಗೆ ಉನ್ನತ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕಾದ ಅಗತ್ಯ ಇದೆ ಎಂದು ಬೆಂಗಳೂರಿನ ಟ್ರಿಕ್ಸ್ ನಿರ್ದೇಶಕ ತುಳಸಿದಾಸ್ ಹೇಳಿದರು.

ಅವರು ಇಂದು ನಗರದ ಕೃಷಿಕ್ ಸರ್ವೋದಯ ಫೌಂಡೇಶನ್ ಏರ್ಪಡಿಸಿದ್ದ ಕೆಎಎಸ್, ಬ್ಯಾಂಕಿಂಗ್, ಪಿಎಸ್ಐ, ಪಿಸಿ, ಪಿಡಿಓ, ಎಫ್‌ಡಿಎ, ಎಸ್‌ಡಿಎ, ರೈಲ್ವೆ, ಗ್ರೂಪ್–ಸಿ ಹಾಗೂ ಇನ್ನಿತರ ಸ್ಪರ್ಧಾತ್ಮಕ ಪರೀಕ್ಷೆಗಳ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮನ್ನು ತಾವು ಗುರ್ತಿಸಿಕೊಳ್ಳಬೇಕು. ಅದಕ್ಕಾಗಿ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವ ಮೂಲಕ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸಲು ಅನುಕೂಲವಾಗಲಿದೆ ಎಂದು ಹೇಳಿದರು.

ಸಮಾಜಕ್ಕೆ ಒಳ್ಳೆಯತನವನ್ನು ಬಿಟ್ಟುಕೊಟ್ಟು ನೀವೇನಾಗಬೇಕೆಂದು ಗುರಿ ಹೊಂದಿದ್ದೀರಿ ಅದಕ್ಕೆ ಆದ್ಯತೆ ನೀಡಿ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಕೆಲಸ ಮಾಡುವುದು ಸರಿಯಲ್ಲ ಎಂದು ಸಲಹೆ ನೀಡಿದರು.

ಮನೆಯನೆಂದು ಕಟ್ಟದಿರು, ಗುರಿಯನ್ನೆಂದು ಮುಟ್ಟದಿರು ಎಂಬಂತೆ ಆಗಬಾರದು. ಕ್ರಿಯಾತ್ಮಕವಾಗಿ, ಮುಕ್ತವಾಗಿ ಆಡಳಿತ ನಡೆಸಲು ಉನ್ನತ ಹುದ್ದೆಗಳು ಸಹಾಯಕವಾಗುತ್ತವೆ ಎಂದು ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳಲ್ಲಿ ಯಾವುದೇ ಕೋರ್ಸ್‌ಗೆ ತರಬೇತಿ ಪಡೆಯುವ ಮುನ್ನ ಆಸಕ್ತಿ ತುಂಬಾ ಮುಖ್ಯ. ಕೃಷಿಕ ಫೌಂಡೇಶನ್ ನೀಡುತ್ತಿರುವ ಅಗತ್ಯ ತರಬೇತಿಗಳನ್ನು ಎಚ್ಚರಿಕೆಯಿಂದ ಆಲಿಸಿ ಉಪನ್ಯಾಸಕರು ನೀಡುವ ಸೂಕ್ತ ಸಲಹೆಗಳನ್ನು ಗಂಭೀರವಾಗಿ ಪರಿಗಣಿಸಿ ಎಂದು ಹೇಳಿದರು.

ಉನ್ನತ ಹುದ್ದೆಗೆ ಆಯ್ಕೆಯಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಸಾರ್ವಜನಿಕರು ಸಮಸ್ಯೆ ಹೇಳಲು ಬಂದಾಗ ಅವರನ್ನು ಪ್ರೀತಿ ವಿಶ್ವಾಸದಿಂದ ಮಾತನಾಡಿಸಿ ಸಾಂತ್ವಾನ ಹೇಳಿ ಸಮಸ್ಯೆಯನ್ನು ಇತ್ಯರ್ಥಪಡಿಸುವುದಾಗಿ ಭರವಸೆ ತುಂಬಿ ಎಂದರು.

ಪ್ರಸ್ತುತ ಕೃಷಿಕ್ ಸರ್ವೋದಯ ಫೌಂಡೇಶನ್‌ನಲ್ಲಿ ಪಿಎಸ್ಐ, ಪಿಸಿ, ಬ್ಯಾಂಕಿಂಗ್, ಪಿಡಿಓ, ಎಫ್‌ಡಿಎ, ಎಸ್‌ಡಿಎ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ದಾಖಲಾತಿ ಆರಂಭವಾಗಿದ್ದು, ಅರ್ಹ ಮತ್ತು ಅನುಭವಿ ಶಿಕ್ಷಕ ವೃಂದ, ಭೋಧನೆಯಲ್ಲಿ ತಂತ್ರಜ್ಞಾನ ಬಳಕೆ, ಪ್ರತಿ ಚಾಪ್ಟರ್ ನಂತರ ಪರೀಕ್ಷೆ ನಡೆಸುವ ಜೊತೆಗೆ ನೈತಿಕ ಶಿಕ್ಷಣ ನೀಡಲಾಗುವುದು ಎಂದರು.

ಪ್ರತಿ ತಿಂಗಳು ಪ್ರಚಲಿತ ಮಾದರಿ ಪರೀ–ಕ್ಷೆ ಪಠ್ಯಕ್ರಮದ ಅನುಗುಣವಾಗಿ ನೋಟ್ಸ್‌ಗಳನ್ನು ಬರೆಸಲಾಗುತ್ತಿದ್ದು, ಪರೀಕ್ಷಾರ್ಥಿಗಳು ಶ್ರದ್ಧೆಯಿಂದ ಪಾಠ, ಸಲಹೆಗಳನ್ನು ಆಲಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆಎಸ್‌ಎಫ್ ಅಧ್ಯಕ್ಷ ಡಾ. ಸಿ.ಕೆ ಸುಬ್ರಾಯ, ಕಾರ್ಯದರ್ಶಿ ಡಾ. ಸಿ.ಟಿ ಜಯದೇವ್, ಜಿಲ್ಲಾ ಕೋಆರ್‌ಡಿನೇಟರ್ ಎಂ.ಟಿ ಕುಳ್ಳೇಗೌಡ ಉಪಸ್ಥಿತರಿದ್ದರು.

# ಕೌಟುಂಬಿಕ ಕಲಹ : ಪತ್ನಿ ಕೊಲೆ

**ಚಿಕ್ಕಮಗಳೂರು:** ಪತಿ ಪತ್ನಿಯ ನಡುವಿನ ನಿತ್ಯ ಜಗಳ ಕೊಲೆಯಲ್ಲಿ ಅಂತ್ಯವಾಗಿರುವ ಘಟನೆ ನಡೆದಿದೆ. ಪತ್ನಿಯನ್ನು ಕಬ್ಬಿಣದ ರಾಡ್‌ನಿಂದ ಹೊಡೆದು ಕೊಲೆ ಮಾಡಲಾಗಿದೆ.

ಕಳಸ ತಾಲ್ಲೂಕಿನ ಮರಸಣಿಗೆ ಸಮೀಪದ ಯಮಗೊಂಡ ಎಸ್ಟೇಟ್ ಕೂಲಿ ಲೈನಿನಲ್ಲಿ ಘಟನೆ ನಡೆದಿದೆ.

ಮಂಜುಳ (32) ಮೃತ ದುರ್ದೈವಿ, ರಕ್ತಸ್ರಾವದಿಂದ ಬಳಲುತ್ತಿದ್ದ ಮಂಜುಳಾಳನ್ನು ಆಸ್ಪತ್ರೆಗೆ ಸಾಗಿಸುವಾಗ ಮಾರ್ಗ ಮಧ್ಯೆ ಸಾವನ್ನಪ್ಪಿದ್ದಾರೆ.

ಮಗುವಿನ ಎದುರೇ ತಾಯಿಯನ್ನ ಕೊಂದ ಪಾಪಿ ಗಂಡ.ಯಮಗೊಂಡ ಕಾಫಿತೋಟದ ಲೈನ್ ಮನೆಯಲ್ಲಿ ವಾಸವಿದ್ದ ಮಂಜುಳಾ ಹಾಗೂ ಆತನ ಪತಿ ನಿತ್ಯ ಜಗಳ ಆಡೋದ ನೋಡಿ ಕೆಲಸಕ್ಕೆ ಬರಬೇಡಿ ಎಂದು ತೋಟದ ರೈಟರ್ ತಿಳಿಸಿದ್ದ.

ತೋಟದ ಕಾರ್ಮಿಕರ ಮನೆಯಲ್ಲಿ ಗಂಡ ಹೆಂಡತಿ ಜಗಳ ತಾರಕ್ಕಕ್ಕೇರಿ ಪತಿ ಕಬ್ಬಿಣದ ರಾಡ್ ನಿಂದ ಹೊಡೆದು ಪತ್ನಿಯನ್ನು ಕೊಲೆ ಮಾಡಿದ್ದಾನೆ.ಕಳಸ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಕುದುರೆಮುಖ ರಾಷ್ಟ್ರೀಯ ಉದ್ಯಾನ ವ್ಯಾಪ್ತಿಯ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಲು ಆಗ್ರಹ

**ಚಿಕ್ಕಮಗಳೂರು:** ಕುದುರೆಮುಖ ರಾಷ್ಟ್ರೀಯ ಉದ್ಯಾನದೊಳಗಿರುವ ಕುಟುಂಬಗಳನ್ನು ಸೂಕ್ತ ಪರಿಹಾರ ಹಾಗೂ ಅವರಿಗೆ ಬದಲಿ ಭೂಮಿ ನೀಡಿ ಉತ್ತಮ ಸ್ಥಳಾಂತರ ಯೋಜನೆ ರೂಪಿಸದೆ ಅಲ್ಲಿರುವ ಜನ ಮಾನವ–ಪ್ರಾಣಿ ಸಂಘರ್ಷಕ್ಕೆ ತುತ್ತಾಗಿ ಜೀವ ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಿದೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಪರಿಸರವಾದಿಗಳಾದ ಶ್ರೀದೇವ್ ಹುಲಿಕೆರೆ, ಸ.ಗಿರಿಜಾಶಂಕರ, ಡಿ.ವಿ ಗಿರೀಶ್ ಇವರುಗಳು ರಾಜ್ಯ ಸರ್ಕಾರ ಉದ್ಯಾನವನದೊಳಗಿರುವ ಕುಟುಂಬಗಳನ್ನು ಕಳೆದ 25 ವರ್ಷಗಳಿಂದಲೂ ಉತ್ತಮ ಪುನರ್ವಸತಿ ಪ್ಯಾಕೇಜ್ ನೀಡಿ ಸ್ಥಳಾಂತರಿಸುವುದಾಗಿ ಹೇಳುತ್ತಲೇ ಬರುತ್ತಿದೆ ಎಂದಿದ್ದಾರೆ.

ಕೇವಲ ಕೆಲವು ಕುಟುಂಬಗಳನ್ನು ಮಾತ್ರ ಸ್ಥಳಾಂತರಿಸಿ ಮೌನವಾಗಿದೆ. ಈವರೆಗೂ ಸ್ಥಳಾಂತರ ಯೋಜನೆಯನ್ನು ಪೂರ್ಣಗೊಳಿಸದೆ ಜನ ಕಾಡಾನೆಗಳ ಹಾವಳಿಗೆ ಸಿಕ್ಕಿ ಪ್ರಾಣ ಕಳೆದುಕೊಳ್ಳುವ ದುಸ್ಥಿತಿಗೆ ಸಿಲುಕುತ್ತಿದ್ದಾರೆ ಎಂದು ದೂರಿದ್ದಾರೆ.

ಇಡೀ ದೇಶದಲ್ಲಿ ವನ್ಯಪ್ರಾಣಿಗಳ ಬಳಕೆಗೆ ರಕ್ಷಿತಾರಣ್ಯ, ಅಭಯಾರಣ್ಯ ಮತ್ತು ಉದ್ಯಾನವನಗಳು ಸೇರಿದಂತೆ ಕೇವಲ ಶೇ.3 ರಷ್ಟು ಭೂಮಿ ಮಾತ್ರ ಉಳಿದಿದೆ. ಮಿಕ್ಕ ಶೇ.97 ಭಾಗ ಮನುಷ್ಯ ಬದುಕಿಗೆ ಮೀಸಲಾಗಿದೆ. ಆದರೂ ಸಹ ಕಾಡಿನ ಅಕ್ಕಪಕ್ಕದ ವಸತಿ ಪ್ರದೇಶಗಳಲ್ಲಿ ವನ್ಯಪ್ರಾಣಿ ಹಾಗೂ ಮಾನವ ಸಂಘರ್ಷ ನಡೆಯುತ್ತಿದ್ದು, ಇದಕ್ಕೆ ಮುಖ್ಯ ಕಾರಣ ಸರ್ಕಾರ ವೈಜ್ಞಾನಿಕವಾಗಿ ಈ ಸಮಸ್ಯೆಯನ್ನು ನಿರ್ವಹಿಸದೇ ಇರುವುದು ವಿಪರ್ಯಾಸ ಎಂದಿದ್ದಾರೆ.

ವನ್ಯಪ್ರಾಣಿಗಳ ಹಾವಳಿ ಜನವಸತಿ ಪ್ರದೇಶಗಳಲ್ಲಿ ಅಧಿಕವಾಗಬಾರದೆಂಬ ಉದ್ದೇಶದಿಂದಲೇ ಅಭಯಾರಣ್ಯ ಹಾಗೂ ರಾಷ್ಟ್ರೀಯ ಉದ್ಯಾನವನ ಸೇರಿದಂತೆ ರಕ್ಷಿತ ಪ್ರದೇಶಗಳನ್ನು ಕಾದಿರಿಸಲಾಗಿದೆ. ಈ ಪ್ರದೇಶಗಳಿಂದ ಪ್ರಾಣಿಗಳು ಅವ್ಯಾಹತವಾಗಿ ಹೊರಗೆ ಬಂದಾಗ ಹಾಗೂ ಮನುಷ್ಯ ಜೀವನಕ್ಕೆ ಮಾರಕವೆನಿಸಿದಾಗ ಮಾತ್ರ ಅವುಗಳನ್ನು ಸೆರೆಹಿಡಿಯುವುದು ಸೂಕ್ತ. ಆದರೆ ಇತ್ತೀಚೆಗೆ ರಕ್ಷಿತ ಪ್ರದೇಶಗಳಲ್ಲಿರುವ ಆನೆಗಳನ್ನು ಸೆರೆಹಿಡಿಯಲು ಮುಂದಾಗಿದ್ದು, ಇದಕ್ಕೆ ಸ್ಪಷ್ಟ ಉದಾಹರಣೆಯೆಂದರೆ ಇತ್ತೀಚೆಗೆ ಜಿಲ್ಲೆಯ ಕೆರೆಕಟ್ಟೆ ಅರಣ್ಯ ಪ್ರದೇಶದಲ್ಲಿದ್ದ ಆನೆಯನ್ನು ಹಿಡಿಯಲು ಆಲೋಚಿಸುತ್ತಿರುವುದು. ಈ ಕಾರ್ಯಾಚರಣೆ ಎಷ್ಟು ಸರಿ ಎಂದು ಪ್ರಶ್ನಿಸಿದರು. ಮನುಷ್ಯ ಮತ್ತು ಪ್ರಾಣಿ ಸಂಘರ್ಷವನ್ನು ತಪ್ಪಿಸಬೇಕಾದುದು ಅಗತ್ಯ. ಆದರೆ, ಕಾಡಾನೆಗಳು ಜನವಸತಿ ಪ್ರದೇಶಕ್ಕೆ ಆಗಾಗ ಬರುತ್ತಿರುವ ಕಾರಣಗಳನ್ನು ಸರ್ಕಾರ ಗುರುತಿಸಿ ಅವುಗಳ ನಡಿಗೆ ಪಥವನ್ನು ಸುಗಮಗೊಳಿಸುವ ಬಗ್ಗೆ ಸಹ ಆಲೋಚಿಸುವುದರಿಂದ ಮಾತ್ರ ಈ ಸಮಸ್ಯೆಗೆ ಪರಿಹಾರ ಹುಡುಕಬಹುದಾಗಿದೆ ಎಂದರು.ಈ ದೇಶದಲ್ಲಿ ಹಿಂದಿನಿಂದಲೂ ಕಾಡಿನ ಬದಿಯಲ್ಲಿರುವ ಜನವಸತಿ ಪ್ರದೇಶಗಳಲ್ಲಿ ಪ್ರಾಣಿ ಮತ್ತು ಮಾನವ ಸಂಘರ್ಷ ನಡೆದುಕೊಂಡೇ ಬಂದಿದೆ.

# ಧರ್ಮ ದೇವರು ಗುರುವಿನಲ್ಲಿ ವಿಶ್ವಾಸ ಕಳೆದುಕೊಳ್ಳಬಾರದು: ರಂಭಾಪುರಿ ಶ್ರೀ



**ಚನ್ನಗಿರಿ:** ಸುಖ ಶಾಂತಿ ಸಂಪತ್ತು ಸದಾ ಬಯಸುವ ಮನುಷ್ಯ ಜೀವನದಲ್ಲಿ ಧರ್ಮ ದೇವರು ಮತ್ತು ಗುರುವಿನಲ್ಲಿ ಯಾವತ್ತೂ ವಿಶ್ವಾಸ ಕಳೆದುಕೊಳ್ಳಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ತಾಲೂಕಿನ ಕತ್ತಲಗೆರೆ ಗ್ರಾಮದಲ್ಲಿ ಶ್ರೀ ಯಳವಮ್ಮ ದೇವಸ್ಥಾನ ಉದ್ಘಾಟನೆ ಮೂರ್ತಿ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದ ದಿಕ್ಸೂಚಿ ಇಲ್ಲದೇ ಹೋದರೆ ಜೀವನದಲ್ಲಿ ಶಾಂತಿ ನೆಮ್ಮದಿ ದೊರಕದು. ವಿದ್ಯೆ ಕಲಿತರೆ ಸಾಲದು. ವಿವೇಕವೂ ಬೆಳೆಯಬೇಕು. ಅಂದಾಗ ಮಾತ್ರ ಮನುಷ್ಯ ಜೀವನ ಪರಿಪೂರ್ಣವಾಗಲು ಸಾಧ್ಯವಾಗುತ್ತದೆ. ಯುವ ಜನಾಂಗ ದೇವರು ಧರ್ಮದ ಮೇಲೆ ನಂಬಿಕೆ ಇಟ್ಟು ಶ್ರೀ ಗುರುವಿನ ಮಾರ್ಗದರ್ಶನದಲ್ಲಿ ಬಾಳಿದರೆ ಬದುಕಿನಲ್ಲಿ ಶ್ರೇಯಸ್ಸು ಮತ್ತು ಉನ್ನತಿ ಕಾಣಲು ಸಾಧ್ಯವಾಗುತ್ತದೆ. ಆಚಾರ್ಯರಾಗಲಿ ಮತ್ತು ಶರಣರಾಗಲಿ ಕಾಯಕದ ಹಿರಿಮೆಯನ್ನು ಸಾರಿದ್ದಾರೆ. ಹುಟ್ಟು ಸಾವುಗಳ ಮಧ್ಯದ ಬದುಕು ಸಮೃದ್ಧಗೊಳ್ಳಲು ಗುರು ಜ್ಞಾನಾಮೃತ ಅವಶ್ಯವಾಗಿ ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಉದಾತ್ತ ಜೀವನ ಸೂತ್ರಗಳನ್ನು ಬೋಧಿಸಿ ಸಕಲರನ್ನು ಉದ್ಧರಿಸಿದ್ದಾರೆ. ಸಂಸ್ಕಾರದ ಕೊರತೆಯಿಂದ ಜೀವನದ ನೈತಿಕ ಮೌಲ್ಯಗಳು ಅಧ:ಪತನದತ್ತ ಹೊರಟಿವೆ. ಜಾತಿ ಮತ ಪಂಥಗಳೆನ್ನದೆ ಸಂಸ್ಕಾರ, ಸಂಸ್ಕೃತಿ ಪುನರುತ್ಥಾನಕ್ಕಾಗಿ ಎಲ್ಲರೂ ಶ್ರಮಿಸುವ ಅವಶ್ಯಕತೆಯಿದೆ ಎಂದರು.

ಕಣ್ವಕುಪ್ಪಿ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು ನೇತೃತ್ವ ವಹಿಸಿ ಮಾತನಾಡಿ, ಮನುಷ್ಯ ಜೀವನದಲ್ಲಿ ವಿನಯ ಮತ್ತು ಕ್ರಿಯಾಶೀಲ ಗುಣಗಳನ್ನು ಬೆಳೆಸಿಕೊಳ್ಳಬೇಕು. ಮನುಷ್ಯ ಸುಂದರವಾದ ಮನೆ ಕಟ್ಟಬಲ್ಲ. ಆದರೆ ಆ ಮನೆಯಲ್ಲಿ ನೆಮ್ಮದಿಯಿಂದ ಬದುಕುವುದನ್ನು ಕಲಿತಿಲ್ಲ. ಮನೆ ದೊಡ್ಡದಿದ್ದರೂ ಮನಸ್ಸು ದೊಡ್ಡದಾಗುತ್ತಿಲ್ಲ. ಮನುಷ್ಯನಿಗೆ ವಿವೇಕ, ತ್ಯಾಗ, ಪ್ರಯತ್ನ, ಸದ್ಗುಣ ಮತ್ತು ಆಚರಣೆ ಆತನ ವಿಕಾಸಕ್ಕೆ ಕಾರಣವಾಗುತ್ತವೆ. ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಎಲ್ಲ ಸದ್ಭಕ್ತರ ಮೇಲಿರಲೆಂದು ಬಯಸಿದರು.

ಹೊನ್ನಾಳಿ ಹಿರೇಕಲ್ಮಠದ ಡಾ. ಚನ್ನಮಲ್ಲಿಕಾರ್ಜುನ ಶಿವಾಚಾರ್ಯರು, ಅವರ ಗೊಳ್ಳಮರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯರು, ದುಗ್ಗತ್ತಿ ವೀರಭದ್ರ ಸ್ವಾಮಿಗಳು, ಕತ್ತಲಗೆರೆ ಹಾಲಸಿದ್ದೇಶ್ವರ ಶ್ರೀಗಳು ಉಪಸ್ಥಿತರಿದ್ದರು. ರೈತಪರ ಚಿಂತಕ ತೇಜಸ್ವಿ ಪಟೇಲ್ ಮಾತನಾಡಿ, ಧರ್ಮ ದೇವರಲ್ಲಿ ಶ್ರದ್ಧೆಯುಳ್ಳ ಭಕ್ತರು ತಾವಾಗಿದ್ದೀರಿ. ರಾಜಕಾರಣಿಗಳು ಇಷ್ಟು ಜನ ಸೇರಿಸಬೇಕಾದರೆ ಲಕ್ಷಾಂತರ ರೂಪಾಯಿ ಖರ್ಚು ಮಾಡಬೇಕಾಗುತ್ತದೆ. ಆದರೆ ಇಲ್ಲಿಗೆ ಆಗಮಿಸಿರುವ ಭಕ್ತರು ಸ್ವಯಂ ಪ್ರೇರಿತರಾಗಿ ಬಂದಿರುವುದು ತಮ್ಮಲ್ಲಿರುವ ಧರ್ಮ ನಿಷ್ಠೆಗೆ ಸಾಕ್ಷಿಯಾಗಿದೆ ಎಂದರು. ಗ್ರಾಮ ಪಂಚಾಯತಿ ಅಧ್ಯಕ್ಷ ಕೆ.ಎಂ.ಮಂಜಪ್ಪ, ಕಶೆಟ್ಟಿಯಳ್ಳಿಯ ಮಹಾರುದ್ರಯ್ಯ ಇನ್ನಿತರ ಗಣ್ಯರು ಉಪಸ್ಥಿತರಿದ್ದರು. ಶ್ರೀಮತಿ ಆರತಿ.ಎಂ. ಇವರಿಂದ ಪ್ರಾರ್ಥನೆ ಜರುಗಿತು. ಶಿಕ್ಷಕ ಸಿದ್ದೇಶ.ಕೆ ಸ್ವಾಗತಿಸಿದರು. ಸವಳಂಗ ಪಿಡಿಓ ಜಯಪ್ಪ ಎಂ. ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ಯಳವಮ್ಮ ದೇವಿ ಪ್ರತಿಷ್ಠಾಪಿಸಿ ನಂತರ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು ಆಶೀರ್ವಚನ ನೀಡಿ ಶುಭ ಹಾರೈಸಿದರು.

## ಸರ್ದಾರ್ ವಲ್ಲಭಬಾಯಿ ಪಟೇಲ್‌ರವರ 150 ನೇ ಜನ್ಮದಿನಾಚರಣೆ

# ಏಕತೆಯ ಸಂದೇಶ ಸಾರಲು ನ. 12 ರಂದು ಪಾದಯಾತ್ರೆ ಏಕತಾ ನಡಿಗೆ : ಗೋವಿಂದ ಕಾರಜೋಳ




**ಚಿತ್ರದುರ್ಗ:** ಭಾರತದ ಸ್ವಾತಂತ್ರ ಹೋರಾಟದಲ್ಲಿ ಹಾಗೂ ಭಾರತದ ಏಕೀಕರಣದಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ ಸರ್ದಾರ್ ವಲ್ಲಭಬಾಯಿ ಪಟೇಲ್‌ರವರ 150 ನೇ ಜನ್ಮದಿನಾಚರಣೆ ಅಂಗವಾಗಿ ಏಕತೆಯ ಸಂದೇಶ ಸಾರಲು ನ. 12 ರಂದು ಬೆಳಿಗ್ಗೆ 08 ಗಂಟೆಗೆ ಕನಕ ವೃತ್ತದಿಂದ ಚಳ್ಳಕೆರೆ ಗೇಟ್ ವರೆಗೂ ನಗರದಲ್ಲಿ ಪಾದಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಎಲ್ಲರೂ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಸಂಸದ ಗೋವಿಂದ ಎಂ. ಕಾರಜೋಳ ಅವರು ಮನವಿ ಮಾಡಿದರು.

ನಗರದ ಸಂಸದರ ಕಚೇರಿ ಬಳಿಯ ಹೊಸ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಭಾರತ ದೇಶ ಕಂಡ ಅಪ್ರತಿಮ ದೇಶಭಕ್ತ, ಪ್ರಥಮ ಉಪಪ್ರಧಾನಿ ಹಾಗೂ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭಬಾಯಿ ಪಟೇಲ್‌ರವರ 150 ನೇ ಜನ್ಮದಿನಾಚರಣೆಯನ್ನು ಸರ್ಕಾರ ದೇಶಾದ್ಯಂತ ಒಂದು ಅಭಿಯಾನದ ರೀತಿಯಲ್ಲಿ ಆಚರಿಸಲು ಸಿದ್ಧತೆ ನಡೆಸಿದೆ. ಅಭಿಯಾನವನ್ನು ಕಳೆದ ಅಕ್ಟೋಬರ್ 6 ರಂದು ಈಗಾಗಲೆ ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವರಾದ ಡಾ: ಮನ್ಸುಖ್ ಮಾಂಡವೀಯ ರವರು ಉದ್ಘಾಟಿಸಿದ್ದಾರೆ.

ಛಿದ್ರಗೊಂಡ ಭಾರತವನ್ನು ಏಕೀಕರಣಗೊಳಿಸಲು ಹೋರಾಡಿದ ವ್ಯಕ್ತಿಗೆ ಗೌರವ ಸಲ್ಲಿಸಲು ಇದು ನಮ್ಮೆಲ್ಲರಿಗೂ ಒಂದು ಉತ್ತಮ ಅವಕಾಶವಾಗಿದೆ. ಸರ್ದಾರ್ ಪಟೇಲ್‌ರವರು ಭಾರತದ ಉಕ್ಕಿನ ಮನುಷ್ಯ ಎಂದು ಜನಜನಿತವಾಗಿದೆ. ಭಾರತ ಎಂದೆಂದಿಗೂ ಒಂದೇ, ಭಾರತ ಎಂದೆಂದಿಗೂ ಅವಿಭಾಜ್ಯ ಮತ್ತು ಭಾರತ ಎಂದೆಂದಿಗೂ ಅವಿಭಾಜ್ಯವಾಗಿಯೇ ಉಳಿಯುತ್ತದೆ ಎಂದು ಪಟೇಲ್‌ರವರು ಬಲವಾಗಿ ನಂಬಿದ್ದರು. ಅವರಂತೆಯೇ ಪ್ರಧಾನಿ ನರೇಂದ್ರ ಮೋದಿ ಯವರು ಇಂದು ವಿಕಸಿತ ಭಾರತ್–2047 ರ ದೃಷ್ಟಿಕೋನದ ಮೂಲಕ ಮುಂದಕ್ಕೆ ಸಾಗಿಸುತ್ತಿದ್ದಾರೆ.

ಅಭಿಯಾನದಲ್ಲಿ ದೇಶಾದ್ಯಂತ ಯುವಕರು ಸಾಮಾಜಿಕ ಮಾಧ್ಯಮಗಳನ್ನು ಬಳಸಿಕೊಂಡು ಅನೇಕ ಸ್ಪರ್ಧಾ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಇವು ಕೇವಲ ಸ್ಪರ್ಧೆಗಳಲ್ಲ, ಸರ್ದಾರ್ ಪಟೇಲ್ ಅವರ ಏಕತೆಯ ಸಂದೇಶವನ್ನು ಪ್ರತಿಯೊಬ್ಬರ ಹೃದಯಕ್ಕೂ ತಲುಪಿಸುವ ಪ್ರಬಲ ಮಾರ್ಗವಾಗಿದೆ.

ಅಕ್ಟೋಬರ್ 31 ರಿಂದ ನವೆಂಬರ್ 25 ರವರೆಗೆ ದೇಶಾದ್ಯಂತ ಜಿಲ್ಲಾ ಮಟ್ಟದಲ್ಲಿ ಪಾದಯಾತ್ರೆಗಳು ನಡೆಯಲಿವೆ. ಚಿತ್ರದುರ್ಗ ನಗರದಲ್ಲಿಯೂ ಬರುವ ನ. 12 ರಂದು ಬೆಳಿಗ್ಗೆ 08 ಗಂಟೆಗೆ ಕನಕ ವೃತ್ತದಿಂದ ಚಳ್ಳಕೆರೆ ಗೇಟ್ ವರೆಗೂ ಪಾದಯಾತ್ರೆ ಆಯೋಜನೆ ಮಾಡಲಾಗಿದೆ. ಮೈ ಭಾರತ್ ಸ್ವಯಂ ಸೇವಕರು, ಎನ್.ಸಿ.ಸಿ ಕೆಡೆಟ್‌ಗಳು, ಎನ್‌ಎಸ್‌ಎಸ್ ಸ್ವಯಂ ಸೇವಕರು, ಸಾಮಾಜಿಕ ಮತ್ತು ಧಾರ್ಮಿಕ ಸಂಸ್ಥೆಗಳು ಹಾಗೂ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ಎಲ್ಲ ನಾಗರೀಕರು, ನಿವೃತ್ತ ಅಧಿಕಾರಿಗಳು, ಮಾಜಿ ಸೈನಿಕರು, ಕ್ರೀಡಾಪಟಗಳು. ಈ ಪಾದಯಾತ್ರೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಪಾದಯಾತ್ರೆಗೂ ಮೊದಲು ಶಾಲಾ ಕಾಲೇಜುಗಳಲ್ಲಿ ಸರ್ದಾರ್ ಪಟೇಲ್ ರವರ ಜೀವನ ಮತ್ತು ಆದರ್ಶಗಳ ಕುರಿತು ಚರ್ಚಾ ಸ್ಪರ್ದೆಗಳು, ಪ್ರಬಂದ ಸ್ಪರ್ದೆಗಳು ಹಾಗೂ ವಿಚಾರ ಸಂಕಿರಣಗಳನ್ನು ಏರ್ಪಡಿಸಿ ವಿದ್ಯಾರ್ಥಿಗಳಲ್ಲಿ ಜಾಗೃತಿಯನ್ನು ಮೂಡಿಸಲಾಗುತ್ತದೆ. ಮತ್ತು ಯುವಕರು ನಶೆ ಮುಕ್ತ ಭಾರತ ನಿರ್ಮಾಣಕ್ಕಾಗಿ ಪ್ರತಿಜ್ಞೆ ಮಾಡಲಿದ್ದಾರೆ.

ಇದೇ ಸಮಯದಲ್ಲಿ ಚಿತ್ರದುರ್ಗದಲ್ಲಿ ಸ್ವದೇಶಿ ಮೇಳವನ್ನು ಆಯೋಜನೆ ಮಾಡಲಾಗಿದೆ. ಯೋಗ ಮತ್ತು ಆರೋಗ್ಯ ಶಿಬಿರಗಳನ್ನು ಆಯೋಜನೆ ಮಾಡಲಾಗುವುದು, ಯುವಕರ ಭಾಗವಹಿಸುವಿಕೆಯೊಂದಿಗೆ ದೊಡ್ಡ ಪ್ರಮಾಣದಲ್ಲಿ ಸ್ವಚ್ಚತಾ ಅಭಿಯಾನಗಳನ್ನು ನಡೆಸಲಾಗುವುದು. ಉದ್ಯಾನವನಗಳಲ್ಲಿ ಬೀದಿ ನಾಟಕಗಳನ್ನು ಏರ್ಪಡಿಸಲಾಗುವುದು, ಇದರೊಂದಿಗೆ ಪರಿಸರ ಸಂರಕ್ಷಣೆಗಾಗಿ "ಏಕ್ ಪೇಡ್ ಮಾ ಕೆ ನಾಮ್" ಅಭಿಯಾನವನ್ನು ತೀವ್ರವಾಗಿ ಪ್ರಚಾರ ಮಾಡಲಾಗುವುದು.

ಜಿಲ್ಲಾ ಮಟ್ಟದಲ್ಲಿ ಪಾದಯಾತ್ರೆ ಮುಗಿದ ನಂತರ ಪ್ರತಿ ವಲಯದಿಂದ 5 ಪಾದಯಾತ್ರಿಗಳು ರಸ್ತೆ ಮೂಲಕ ನವೆಂಬರ್ 25 ರಂದು ಸರ್ದಾರ್ ಪಟೇಲ್‌ರ ಹುಟ್ಟೂರು ಕರಮಸದ್ ಊರನ್ನು ತಲುಪಲಿದ್ದಾರೆ.

ನವೆಂಬರ್ 26, ಭಾರತದ ಸಂವಿಧಾನ ದಿನ. ಆ ದಿನ ಸಾವಿರಾರು ಪಾದಯಾತ್ರಿಗಳು ಕರಮಸದ್‌ನಿಂದ 152 ಕಿಮೀ ಪಾದಯಾತ್ರೆ ಮೂಲಕ ಕೆವಾಡಿಯಾದಲ್ಲಿರುವ ಭಾರತದ ಏಕತೆಯ ಪ್ರತೀಕವಾದ ಖಣಚಿಣಣಜ ಂಜಿ ಗಟಿಣಥಿ ಯನ್ನು ತಲುಪಲಿದ್ದಾರೆ. ಇದೊಂದು ಐತಿಹಾಸಿಕ ಏಕತಾ ನಡಿಗೆ ಆಗಲಿದೆ.

ಸರ್ದಾರ್ ಪಟೇಲ್‌ರವರು ಭಾರತದ ನಕ್ಷೆಯನ್ನು ಒಂದುಗೂಡಿಸಿದರು–ನಾವು ಅವರ ಕನಸುಗಳನ್ನು ಒಂದುಗೂಡಿಸಬೇಕಾಗಿದೆ. ಅವರು ಪ್ರದೇಶಗಳನ್ನು ಒಂದು ಗೂಡಿಸಿದರು– ನಾವು ಹೃದಯಗಳನ್ನು ಮತ್ತು ಮನಸ್ಸುಗಳನ್ನು ಒಂದುಗೂಡಿಸಬೇಕಾಗಿದೆ. ಸರ್ದಾರ್ ಪಟೇಲರ ಅಖಂಡ ಭಾರತದ ಕನಸನ್ನು ಆತ್ಮನಿರ್ಭರ ಭಾರತ ಮತ್ತು ವಿಕಸಿತ ಭಾರತವನ್ನಾಗಿ ಪರಿವರ್ತಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ.

ಜಿಲ್ಲೆಯಲ್ಲಿ ನಡೆಯುವ ಏಕತಾ ನಡಿಗೆಯ ಸಂದೇಶ ಮತ್ತು ಅದರ ಸಾರವನ್ನು ಎತ್ತಿ ತೋರಿಸಲು ಮತ್ತು ದೇಶದ ಪ್ರತಿಯೊಬ್ಬ ನಾಗರಿಕರಿಗೂ ಏಕತೆ–ಯ ಸಂದೇಶವನ್ನು ತಲುಪಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಬೇಕು ಎಂದು ಸಂಸದ ಗೋವಿಂದ ಕಾರಜೋಳ ಮನವಿ ಮಾಡಿದರು.

ವಿಧಾನಪರಿಷತ್ ಸದಸ್ಯ ಕೆ.ಎಸ್. ನವೀನ್ ಅವರು ಮಾತನಾಡಿ, ದೇಶದ ಸಮಗ್ರತೆಗೆ ಹಾಗೂ ಏಕೀಕರಣಕ್ಕೆ ಶ್ರಮಿಸಿದ ಸರ್ದಾರ್ ವಲ್ಲಭಬಾಯಿ ಪಟೇಲ್ ಅವರ 150 ನೇ ಜನ್ಮ ದಿನಾಚರಣೆ ಸಂದರ್ಭದಲ್ಲಿ ಅವರಿಗೆ ಗೌರವ ಸಲ್ಲಿಸಲು, ಅಭಿಯಾನವು ಉತ್ತಮ ಅವಕಾಶವನ್ನು ನಮಗೆಲ್ಲರಿಗೂ ಕಲ್ಪಿಸಿಕೊಟ್ಟಿದೆ. ನ 12 ರಂದು ನಗರದಲ್ಲಿ ಏರ್ಪಡಿಸಲಾಗಿರುವ ಪಾದಯಾತ್ರೆ ಏಕತಾ ನಡಿಗೆಯಲ್ಲಿ ಎಲ್ಲರೂ ಪಾಲ್ಗೊಂಡು, ದೇಶದ ಮೂಲೆ, ಮೂಲೆ, ಹಳ್ಳಿ ಹಳ್ಳಿಗಳಿಗೆ ಏಕತೆಯ ಸಂದೇಶ ಪ್ರತಿಧ್ವನಿಸುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಶಿ, ಮೇರಾ ಯುವ ಭಾರತ್‌ನ ಜಿಲ್ಲಾ ಯುವಜನ ಅಧಿಕಾರಿ ಸ್ನೇಹಲತಾ, ಗಣ್ಯರಾದ ಕೆ.ಟಿ. ಕುಮಾರಸ್ವಾಮಿ ಸೇರಿದಂತೆ ಹಲವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವಿಂಡ್ ಫ್ಯಾನ್‌ಗಳು ರೈತರ ಬೆಳೆಗಳಿಗೆ ಹಾನಿ ಹಾಗೂ ಪರಿಸರಕ್ಕೆ ಮಾರಕ : ನಾಗರಾಜಪ್ಪ




**ಮೊಳಕಾಲ್ಮೂರು :** ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಅನಧಿಕೃತವಾಗಿ ನಿರ್ಮಾಣವಾಗುತ್ತಿರುವ ವಿಂಡ್ ಫ್ಯಾನ್ ಗಳು ರೈತರ ಬೆಳೆ ಹಾನಿ ಹಾಗೂ ಪರಿಸರಕ್ಕೆ ಮಾರಕವಾಗಿವೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ತಾಲೂಕು ಅಧ್ಯಕ್ಷ ಕೆ.ಟಿ.ನಾಗರಾಜಪ್ಪ ಆರೋಪಿಸಿದ್ದಾರೆ.

ತಾಲೂಕಿನ ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪುರಬೋರನಹಳ್ಳಿ ಗ್ರಾಮದ ಜಮೀನುಗಳಲ್ಲಿ ವಿಂಡ್ ಫ್ಯಾನ್ ಗಳ ಅಳವಡಿಸುವುದನ್ನು ಖಂಡಿಸಿ ಬೃಹತ್ ಪ್ರತಿಭಟನೆ ನಡೆಸಿ ಮಾತನಾಡಿದ ಅವರು, ತಾಲೂಕಿನ ಹಿರೇಕೆರೆಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಳವಾರಹಳ್ಳಿ ಹೊಸಹಟ್ಟಿ ಸಮೀಪದ ಪುರಬೋರನಹಳ್ಳಿ ಗ್ರಾಮದ ವ್ಯಾಪ್ತಿಯ ಜಮೀನುಗಳಲ್ಲಿ ಜೆ.ಎಸ್. ಡಬ್ಲ್ಯೂ (ಜಿಂದಾಲ್) ಕಂಪನಿಯವರು ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ ಅನಧಿಕೃತವಾಗಿ ವಿಂಡ್ ಫ್ಯಾನ್ ಅಳವಡಿಸಿ ರೈತರ ಮೇಲೆ ಗದಾಪ್ರಹಾರ ಮಾಡುತ್ತಿದೆ. ಈ ಗ್ರಾಮ ವ್ಯಾಪ್ತಿಯ ರೈತರಿಗೆ ದಲ್ಲಾಳಿಗಳ ಮೂಲಕ ಹಣದ ಆಮಿಷ ತೋರಿಸಿ ಇದ್ದ ಅಲ್ಪ ಸ್ವಲ್ಪ ಜಮೀನುಗಳನ್ನು ಕಿತ್ತುಕೊಂಡು ರೈತರ ಬದುಕನ್ನು ಮೂರಾಬಟ್ಟೆಯಾಗಿಸುತ್ತಿದೆ. ಕೃಷಿಯನ್ನೇ ನಂಬಿಕೊಂಡು ಜೀವನ ನಡೆಸುತ್ತಿರುವ ಈ ಭಾಗದ ರೈತರ ಜೀವನವು ಸಂಕಷ್ಟದ ದುಸ್ಥಿತಿ ನಿರ್ಮಾಣವಾಗಲಿದೆ. ಜಿಂದಾಲ್ ಕಂಪನಿಯು ನಿರ್ಮಾಣ ಮಾಡಲು ಪ್ರಾರಂಭಿಸಿರುವ ಕಾರ್ಯ ಚಟುವಟಿಕೆಗಳು ಅನಧಿಕೃತವಾಗಿದ್ದು, ಕೃಷಿ ಭೂಮಿಯನ್ನು ಕೃಷಿಯೇತರ ಭೂಪರಿವರ್ತನೆ ಮಾಡದೆ ನಿಯಮಗಳನ್ನು ಗಾಳಿಗೆ ತೂರಿ ದಿಕ್ಕರಿಸಿ ಈ ಭಾಗದ ಜನರನ್ನು ಮೂರ್ಖರನ್ನಾಗಿಸಿದೆ. ರೈತರಿಗೆ ಬೆದರಿಕೆ ಹಾಕುವುದಲ್ಲದೆ ಇಲ್ಲಸಲ್ಲದ ಸಬೂಬುಗಳನ್ನು ಹೇಳುತ್ತಾ ಕುಂಟು ನೆಪಗಳನ್ನು ರೈತರನ್ನು ವಂಚಿಸಲಾಗುತ್ತಿದೆ. ಈ ಪ್ರದೇಶಗಳಲ್ಲಿ ಅಳವಡಿಸಿರುವ ವಿಂಡ್ ಫ್ಯಾನ್ ಗಳು ಅತ್ಯಂತ ವೇಗವಾಗಿ ಗಾಳಿ ಬೀಸುವುದರಿಂದ ಮಕ್ಕಳು, ವಯೋವೃದ್ದರು ಹಾಗೂ ಹೆಣ್ಣು ಮಕ್ಕಳು ಅತ್ಯಂತ ಭಯಭೀತರಾಗಿ ವಾಸಿಸುವಂತಾಗಿದೆ. ಈ ಜೊತೆಗೆ ರೈತರ ಬೆಳೆಗಳು ನಾಶವಾಗುತ್ತಿದ್ದು, ಅದರ ಕಂಪನಕ್ಕೆ ಬೆಳೆಗಳು ಒಣಗುತ್ತಿವೆ. ತಾಲೂಕು ಆಡಳಿತ ಸೌಧ, ತಾಲೂಕು ಪಂಚಾಯಿತಿ ಹಾಗೂ ಇನ್ನಿತರ ಇಲಾಖಾಧಿಕಾರಿಗಳು ಬೇಕಾಬಿಟ್ಟಿಯಾಗಿ ಪರವಾನಗಿ ನೀಡಿ ರೈತರ ಬದುಕನ್ನು ದುರಂತಕ್ಕೆ ತಳ್ಳಲಾಗಿರುವುದರಿಂದ ರೈತರ ಬದುಕು ದಿವಾಳಿಯಾದಂತಾಗಿದೆ. ವಿಂಡ್ ಪವರ್ ನ ಫ್ಯಾನ್ ಅಳವಡಿಸುವುದರಿಂದ ಈ ಪ್ರದೇಶದ ಸೌಂದರ್ಯವನ್ನು ಹಾಳು ಮಾಡುವುದಲ್ಲದೆ ಪ್ರಾಣಿ ಪಕ್ಷಿಗಳು ಹಾಗೂ ವನ್ಯ ಜೀವಿಗಳು ಅವಸಾನದ ಹಂತಕ್ಕೆ ನೂಕಲಿವೆ. ಇಂತಹ ಮಾರಕ ಮತ್ತು ಅವೈಜ್ಞಾನಿಕ ಚಟುವಟಿಕೆಗಳನ್ನು ನಿರ್ವಹಿಸಲು ಪರವಾನಗಿ ನೀಡಿರುವ ಅಧಿಕಾರಿಗಳನ್ನು ಉಚ್ಚಾಟನೆ ಮಾಡಬೇಕು ಹಾಗೆಯೇ ಜಿಂದಾಲ್ ಕಂಪನಿಯ ಕಾರ್ಯಗಳನ್ನು ಇಲ್ಲಿಗೆ ಸ್ಥಗಿತಗೊಳಿಸಬೇಕು. ಸರ್ಕಾರವು ನೀಡಿರುವ ಪರವಾನಗಿಯನ್ನು ರದ್ದುಗೊಳಿಸಿ ರೈತರ ಬದುಕಿಗೆ ಸಹಕಾರ ನೀಡಬೇಕು. ತಕ್ಷಣವೇ ವಿಂಡ್ ಫ್ಯಾನ್ ನಿರ್ಮಾಣ ಕಾರ್ಯವನ್ನು ಸ್ಥಗಿತಗೊಳಿಸಿಸಬೇಕು ಇಲ್ಲವೆ ಮುಮದಿನ ದಿನಗಳಲ್ಲಿ ಉಗ್ರ ಹೋರಾಟ ಕೈಗೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಪ್ರಾಂತ ರೈತ ಸಂಘದ ತಾಲೂಕು ಉಪಾಧ್ಯಕ್ಷ ತಿಪ್ಪೇಸ್ವಾಮಿ, ಇನ್ನಿತರ ಪದಾಧಿಕಾರಿಗಳಾದ ಕಾಮಯ್ಯ, ಮೂರ್ತಿ, ಲಕ್ಷ್ಮಣ್, ಬಸವರಾಜ್, ಹೆಚ್ಚಿನ ರೈತರು ಭಾಗವಹಿಸಿದ್ದರು.

# ದೇವನಹಳ್ಳಿಯಲ್ಲಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಯತ್ನ: ಇಬ್ಬರು ಸಾವು, ಇನ್ನಿಬ್ಬರ ಸ್ಥಿತಿ ಚಿಂತಾಜನಕ



ಪೊಲೀಸರಿಂದ ಮನೆಯಲ್ಲಿ ಪರಿಶೀಲನೆ.

**ದೇವನಹಳ್ಳಿ:** ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಹೆಗ್ಗನಹಳ್ಳಿಯಲ್ಲಿ ಒಂದೇ ಕುಟುಂಬದ ನಾಲ್ವರು ಆತ್ಮಹತ್ಯೆಗೆ ಯತ್ನಿಸಿ ಇಬ್ಬರು ಮೃತಪಟ್ಟ ಮನಕಲಕುವ ಘಟನೆ ನಡೆದಿದೆ.

ಜೀವನೋಪಾಯಕ್ಕೆ ಪೌರೋಹಿತ್ಯ ಮಾಡಿಕೊಂಡಿದ್ದ ಬ್ರಾಹ್ಮಣ ಸಮುದಾಯದ ಕುಮಾರಪ್ಪ ಎಂಬವರ ಕುಟುಂಬ ದಾರುಣ ಅಂತ್ಯ ಕಂಡಿದ್ದು, ಇಡೀ ಗ್ರಾಮವೇ ಶೋಕಸಾಗರದಲ್ಲಿ ಮುಳುಗಿದೆ. ಘಟನೆಯಲ್ಲಿ ಇಬ್ಬರು ಮೃತಪಟ್ಟಿದ್ದು, ಇನ್ನಿಬ್ಬರ ಸ್ಥಿತಿ ಗಂಭೀರವಾಗಿದೆ.

**ಆಗಿದ್ದೇನು?:** 60 ವರ್ಷ ವಯಸ್ಸಿನ ಕುಮಾರಪ್ಪ, ಅವರ ಪತ್ನಿ 55 ವರ್ಷದ ರಮಾ ಮತ್ತು ಗಂಡು ಮಕ್ಕಳಾದ ಅಕ್ಷಯ್ ಹಾಗೂ ಅರುಣ್ ನಿನ್ನೆ ಸಾಮೂಹಿಕವಾಗಿ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಈ ಪೈಕಿ ಹಿರಿಯ ಮಗ ಕ್ರಿಮಿನಾಶಕ ಸೇವಿಸಿ ನಂತರ ನೇಣಿಗೆ ಶರಣಾಗಿದ್ದಾನೆ.

ತಂದೆ ಕುಮಾರಪ್ಪ ಹಾಗೂ ಹಿರಿಯ ಮಗ ಅರುಣ್ ಮೃತಪಟ್ಟಿದ್ದಾರೆ. ಅರಚಾಡುತ್ತಾ ವಿಲವಿಲ ಒದ್ದಾಡುತ್ತಿದ್ದ ತಾಯಿ ರಮಾ ಹಾಗೂ ಕಿರಿಯ ಮಗನನ್ನು ಸ್ಥಳೀಯರು ಅಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಇಬ್ಬರ ಸ್ಥಿತಿಯೂ ಗಂಭೀರವಾಗಿದೆ.

# ಬಿಹಾರದಲ್ಲಿ ರಾಜಕೀಯ ಜಟಾಪಟಿ: ತೇಜಸ್ವಿ ಯಾದವ್‌ಗೆ ಚಿರಾಗ್ ಪಾಸ್ವಾನ್ ತಿರುಗೇಟು



**ಪಾಟ್ನಾ:** ಬಿಹಾರ ವಿಧಾನಸಭಾ ಚುನಾವಣೆಯ ಕಾವು ಏರುತ್ತಿರುವಾಗಲೇ, ಮಹಾಘಟಬಂಧನ್ ಮುಖ್ಯಮಂತ್ರಿ ಅಭ್ಯರ್ಥಿ ತೇಜಸ್ವಿ ಯಾದವ್ ಅವರು ಪ್ರಧಾನಿ ನರೇಂದ್ರ ಮೋದಿ ಅವರ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಗ್ಯಾಂಗ್‌ಸ್ಟರ್–ರಾಜಕಾರಣಿ ಅನಂತ್ ಸಿಂಗ್‌ರ ಬಂಧನದ ಬಳಿಕ ರಾಜ್ಯದಲ್ಲಿ 'ಮಹಾ ಜಂಗಲ್ ರಾಜ್' ಸೃಷ್ಟಿಯಾಗಿದೆ ಎಂದು ತೇಜಸ್ವಿ ಯಾದವ್ ರೋಪಿಸಿದ್ದಾರೆ. ಇದಕ್ಕೆ ತಿರುಗೇಟು ನೀಡಿದ ಕೇಂದ್ರ ಸಚಿವ ಚಿರಾಗ್ ಪಾಸ್ವಾನ್, ತೇಜಸ್ವಿ ಯಾದವ್‌ರನ್ನು ಅಹಂಕಾರಿ ಎಂದು ಕರೆದಿದ್ದಾರೆ.

ತೇಜಸ್ವಿ ಯಾದವ್ ಅವರು, ಪ್ರಧಾನಿ ಮೋದಿ ಮತ್ತು ಬಿಜೆಪಿ ತಮ್ಮ 15 ವರ್ಷಗಳ ಆಡಳಿತಾವಧಿಯಲ್ಲಿನ ಅರಾಜಕತೆಯ ಬಗ್ಗೆ ಮಾಡುತ್ತಿರುವ ಟೀಕೆಗಳಿಗೆ ಪ್ರತಿಕ್ರಿಯಿಸಿ, ಪ್ರಧಾನಿಯವರು ರಾಜ್ಯದಲ್ಲಿ ಹದಗೆಡುತ್ತಿರುವ ಕಾನೂನು–ಸುವ್ಯವಸ್ಥೆಯನ್ನು ಗಮನಿಸುತ್ತಿಲ್ಲ ಎಂದು ಆರೋಪಿಸಿದರು. "ಇದು ಹೀಗೆ ಆಗಲೇಬೇಕಿತ್ತು. ಪ್ರಧಾನಿ ಇಂದು ಪಾಟ್ನಾದಲ್ಲಿ ರೋಡ್‌ಶೋ ನಡೆಸುತ್ತಿದ್ದಾರೆ. ಹಲವೆಡೆ ಅಪರಾಧಗಳು ನಡೆದಿವೆ. ಅವರಿಗೆ ಇದು ಕಾಣಿಸುತ್ತಿಲ್ಲವೇ?" ಎಂದು ಸುದ್ದಿಗಾರರೊಂದಿಗೆ ಮಾತನಾಡುತ್ತಾ ಪ್ರಶ್ನಿಸಿದರು. "ಇತ್ತೀಚೆಗೆ ಅರ ಮತ್ತು ರೋಹ್‌ತಾಸ್‌ನಲ್ಲಿ ತಂದೆ–ಮಗನ ಹತ್ಯೆಯಾಗಿದೆ. ಗುಂಡಿನ ದಾಳಿ ಇಲ್ಲದ ದಿನವಿಲ್ಲ. 'ಮಹಾ ಜಂಗಲ್ ರಾಜ್' ಪರಿಸ್ಥಿತಿ ನಿರ್ಮಾಣವಾಗಿದೆ," ಎಂದು ಅವರು ಹೇಳಿದರು.

ಮಹಾಘಟಬಂಧನ್ ನವೆಂಬರ್ 14 ರಂದು ಸರ್ಕಾರ ರಚಿಸಲಿದೆ ಮತ್ತು ನವೆಂಬರ್ 18 ರಂದು ಅಧಿಕಾರ ಸ್ವೀಕರಿಸಲಿದೆ ಎಂದು ತೇಜಸ್ವಿ ಯಾದವ್ ಹೇಳಿದರು. ಜನವರಿ 26, 2026 ರೊಳಗೆ ಎಲ್ಲಾ ಅಪರಾಧಿಗಳು ಜೈಲು ಸೇರುತ್ತಾರೆ ಎಂದು ಅವರು ಪ್ರತಿಜ್ಞೆ ಮಾಡಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**